ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್

Editor : Sundar

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 112 RNI Number : KNKAN/25/A2770 01-05-2026 Friday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :112 ರಾಯಚೂರು 01-05-2026 ಶುಕ್ರವಾರ ಪುಟ 04 ಬೆಲೆ ರೂ.2/- ಮೊ:8660146563

ನರ್ಮದಾ ನದಿಯಲ್ಲಿ ಮಗುಚಿದ ಪ್ರವಾಸಿಗರ ದೋಣಿ: 7 ಸಾವು, 18 ಮಂದಿ ನಾಪತ್ತೆ

ಜಬಲ್ಪುರ (ಮಧ್ಯಪ್ರದೇಶ): ಏಕಾಏಕಿ ಬಿರುಗಾಳಿ ಬೀಸಿದ್ದರಿಂದ ನರ್ಮದಾ ನದಿಯಲ್ಲಿ ಪ್ರವಾಸಿಗರಿದ್ದ ಕ್ರೂಸ್ ದೋಣಿ ಮುಳುಗಿ ಏಳು ಜನ ಮೃತಪಟ್ಟು, ಹಲವರು ನಾಪತ್ತೆಯಾಗಿರುವ ಘಟನೆ ಮಧ್ಯಪ್ರದೇಶದ ಜಬಲ್ಪುರ ಜಿಲ್ಲೆಯ ಬರಗಿ ಅಣೆಕಟ್ಟೆಯ ಬಳಿ ಇಂದು ಸಂಭವಿಸಿದೆ.

40 ಪ್ರಯಾಣಿಕರಿದ್ದ ಕ್ರೂಸ್ ದೋಣಿ ಬಿರುಗಾಳಿಯಿಂದ ನದಿಯಲ್ಲಿ ಮುಳುಗಿ ಅವಘಡ ಸಂಭವಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಘಟನೆಯ ಬೆನ್ನಲ್ಲೇ ರಕ್ಷಣಾ ಕಾರ್ಯಾಚರಣೆ ಆರಂಭಿಸಿ, 18 ಜನರನ್ನು ರಕ್ಷಿಸಿದ್ದೇವೆ. ಆದರೆ ಇನ್ನೂ 15-18 ಜನರು ನಾಪತ್ತೆಯಾಗಿದ್ದಾರೆ ಎಂದು ಪೊಲೀಸ್ ವರಿಷ್ಠಾಧಿಕಾರಿ (ಬರಗಿ ಪಟ್ಟಣ) ಅಂಜುಲ್ ಮಿಶ್ರಾ ಮಾಹಿತಿ ನೀಡಿದ್ದಾರೆ.

ಹಠಾತ್ ಬಿರುಗಾಳಿಯಿಂದಾಗಿ ಕ್ರೂಸ್ ದೋಣಿ ಮುಳುಗಿದಾಗ ಅದರಲ್ಲಿ ಅಂದಾಜು 40 ಜನರಿದ್ದರು. ಸದ್ಯ ನದಿಯಿಂದ ಏಳು ಶವಗಳನ್ನು ಹೊರತೆಗೆಯಲಾಗಿದೆ. ಆದರೆ ಕಾಣೆಯಾದ ಪ್ರಯಾಣಿಕರನ್ನು ಪತ್ತೆಹಚ್ಚಲು ಮತ್ತು ರಕ್ಷಿಸಲು ಕಾರ್ಯಾಚರಣೆ ಭರದಿಂದ ಸಾಗುತ್ತಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ತಿಳಿಸಿದ್ದಾರೆ.

ಸಿಎಂ ಸಂತಾಪ: ಮಧ್ಯಪ್ರದೇಶದ ಮುಖ್ಯಮಂತ್ರಿ ಮೋಹನ್ ಯಾದವ್ ಅವರು ದುರಂತದ ಬಗ್ಗೆ ದುಃಖ ವ್ಯಕ್ತಪಡಿಸಿದ್ದು, ರಕ್ಷಣಾ ಕಾರ್ಯವನ್ನು ತ್ವರಿತಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಬಲ್ಪುರದಲ್ಲಿ ತೀವ್ರ ಬಿರುಗಾಳಿಯಿಂದ ಬರಗಿ ಅಣೆಕಟ್ಟೆಯಲ್ಲಿ ಸಂಭವಿಸಿದ ದುರಂತ ಸಂಬಂಧ ಸ್ಥಳೀಯ ಆಡಳಿತ ಮತ್ತು ರಕ್ಷಣಾ ಪಡೆಗಳ ಕಾರ್ಯಾಚರಣೆ ನಿರಂತರವಾಗಿ ಮುಂದುವರೆದಿದೆ. ಲೋಕೋಪಯೋಗಿ ಸಚಿವ ರಾಕೇಶ್ ಸಿಂಗ್, ಪ್ರವಾಸೋದ್ಯಮ ಸಚಿವ ಧ್ರುವೇಂದ್ರ ಸಿಂಗ್ ಲೋಧಿ, ವಿಭಾಗೀಯ ಉಸ್ತುವಾರಿ ಎಸಿಎಸ್, ಎಡಿಜಿ ಮತ್ತು ಸ್ಥಳೀಯ ಸಾರ್ವಜನಿಕ ಪ್ರತಿನಿಧಿಗಳು ತಕ್ಷಣ ಸ್ಥಳಕ್ಕೆ ತಲುಪಲು ನಿರ್ದೇಶಿಸಲಾಗಿದೆ ಎಂದು ನಲ್ಲಿ ಸಿಎಂ ಬರೆದುಕೊಂಡಿದ್ದಾರೆ.

ತ್ವರಿತ ರಕ್ಷಣಾ ಕಾರ್ಯಾಚರಣೆಯ ಮೂಲಕ 15 ಪ್ರವಾಸಿಗರನ್ನು ರಕ್ಷಿಸಲಾಗಿದೆ. ಕಾಣೆಯಾದವರನ್ನು ಸಾಧ್ಯವಾದಷ್ಟು ಬೇಗ ಪತ್ತೆಹಚ್ಚಲು ಕಾರ್ಯಾಚರಣೆ ನಡೆಯುತ್ತಿದೆ. ಈ ಸಮಯದಲ್ಲಿ ರಾಜ್ಯ ಸರ್ಕಾರವು ಪೀಡಿತ ಕುಟುಂಬಗಳೊಂದಿಗೆ ನಿಲ್ಲುತ್ತದೆ. ಮತ್ತು ಸಾಧ್ಯವಿರುವ ಎಲ್ಲ ಸಹಾಯವನ್ನು ಮಾಡುವುದಾಗಿ ಸಿಎಂ ಭರವಸೆ ನೀಡಿದ್ದಾರೆ.

ಇಂದು ಸಂಜೆ 6:00 ರ ಸುಮಾರಿಗೆ ಹಠಾತ್ ಬಿರುಗಾಳಿಯಿಂದಾಗಿ ಪ್ರವಾಸಿಗರನ್ನು ಕರೆದೊಯ್ಯುತ್ತಿದ್ದ ಕ್ರೂಸ್ ದೋಣಿ ಮಗುಚಿ ಈ ದುರಂತ ಸಂಭವಿಸಿದೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ಜಬಲ್ಪುರದಿಂದ ಸುಮಾರು 35 ಕಿಲೋಮೀಟರ್ ದೂರದಲ್ಲಿರುವ ನರ್ಮದಾ ನದಿಯ ದಂಡೆಯಲ್ಲಿರುವ ಬರಗಿ ಅಣೆಕಟ್ಟೆಯಲ್ಲಿ ಮಧ್ಯಪ್ರದೇಶ ಪ್ರವಾಸೋದ್ಯಮ ನಿರ್ವಹಿಸುವ ರೆಸಾರ್ಟ್ ಹಲವಾರು ಜಲ ಕ್ರೀಡಾ ಚಟುವಟಿಕೆಗಳನ್ನು ನಿರ್ವಹಿಸುತ್ತದೆ.



ಮೇ.03ರಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರರಾಯಚೂರು ಜಿಲ್ಲಾ ಪ್ರವಾಸಕಾರ್ಯಕ್ರಮ

ರಾಯಚೂರು ಏ.30-

ರಾಜ್ಯದ ಉಪ ಮುಖ್ಯ ಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಮೇ.03ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.



ಅವರು ಅಂದು ಬೆಳಿಗ್ಗೆ11.30ಕ್ಕೆ ಹೊಸಪೇಟೆ ತಾಲೂಕಿನ ಹಂಪಿಯ ಕನ್ನಡ ವಿಶ್ವವಿದ್ಯಾಲಯದ ಹೆಲಿಪ್ಯಾಡ್ ಆವರಣದಿಂದ ನಿರ್ಗಮಿಸಿ, ಮಧ್ಯಾಹ್ನ 12ಗಂಟೆಗೆ ರಾಯಚೂರು ಜಿಲ್ಲೆಯ ಸಿಂಧನೂರಿನ ತಾಲೂಕು ಕ್ರೀಡಾಂಗಣಕ್ಕೆ ಆಗಮಿಸಿ, ವಿಧಾನ ಪರಿಷತ್ ಸದಸ್ಯರಾದ ಬಸನಗೌಡ ಬಾದರ್ಲಿ ಇವರ ಶ್ರೀ.ಬಸನಗೌಡ ಫೌಂಡೇಷನ್ ಸಿಂಧನೂರು ವತಿಯಿಂದ ಹಮ್ಮಿಕೊಂಡಿರುವ ಉಚಿತ ಸಾಮೂಹಿಕ ವಿವಾಹ ಹಾಗೂ ಇತರೆ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

ಮಧ್ಯಾಹ್ನ 3ಗಂಟೆಗೆ ಸಿಂಧನೂರು ತಾಲೂಕು ಕ್ರೀಡಾಂಗಣದಿದ ಹೆಲಿಕ್ಯಾಪ್ಟರ್ ಮೂಲಕ ನಿರ್ಗಮಿಸಿ ಕೇಂದ್ರ ಸ್ಥಾನ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಉಪಮುಖ್ಯಮಂತ್ರಿಗಳ ಹೆಚ್ಚುವರಿ ಕಾರ್ಯದರ್ಶಿ ಬಿ.ಎಸ್. ಶ್ರೀಧರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಿಷನ್ ಏಡ್ಸ್ ಸುರಕ್ಷಾ ಅಭಿಯಾನ

ಪರಿಣಾಮಕಾರಿ ಅನುಷ್ಠಾನಗೊಳಿಸಿ: ಜಿಲ್ಲಾಧಿಕಾರಿ ನಿತೀಶ್ ಕೆ

ರಾಯಚೂರು,ಏ.30-

ಯಾವುದೇ ಕಾಯಿಲೆಯಾಗಿರಲಿ ಅದನ್ನು ಹರಡದಂತೆ ಮುಂಜಾಗ್ರತಾ ಕ್ರಮ ವಹಿಸುವುದು ಮುಖ್ಯವಾಗಿದೆ. ಮೊಬೈಲ್‌ನಲ್ಲಿ ಎಚ್‌ಐವಿ ಸ್ಥಿತಿಗತಿಯನ್ನು ಪರಿಶೀಲನೆಗೆ ಒಳಪಡಿಸಿಕೊಳ್ಳ ಮೂಲಕ ಜಿಲ್ಲೆಯಲ್ಲಿ ಮಿಷನ್ ಏಡ್ಸ್ ಸುರಕ್ಷಾ ಅಭಿಯಾನವನ್ನು ಪರಿ ಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕೆಂದು ಜಿಲ್ಲಾಧಿಕಾರಿ ನಿತೀಶ್ ಕೆ. ಅವರು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಏಪ್ರಿಲ್ 29ರ ಬುಧವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಅಭಿಯಾನ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.



ಸರ್ಕಾರವು ಸಮುದಾಯದ ಆರೋಗ್ಯ ಸಂರಕ್ಷಣೆಗೆ ಮತ್ತು ಸಮಾಜದ ಯುವ ಜನತೆಯ ಆರೋಗ್ಯ ಸುರಕ್ಷತೆಗೆ ಹೆಚ್ಚಿನ ಒತ್ತು ನೀಡಿ ಹೆಚ್‌ಐವಿ ಸೋಂಕನ್ನು ಆರಂಭದಲ್ಲಿಯೇ ಗುರ್ತಿಸಲು ಸರಳ ವಿಧಾನವಾದ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ವೈಯಕ್ತಿಕ ಸ್ಥಿತಿ ತಿಳಿಯಲು ಜಿಲ್ಲೆಯಾದ್ಯಂತ ವ್ಯಾಪಕ ಜಾಗೃತಿ ಮೂಡಿಸಬೇಕು ಎಂದರು.

ಈಗಾಗಲೆ ವೈದ್ಯರು, ಸಿಬ್ಬಂದಿಯರು ಅಭಿಯಾನವನ್ನು ಯಶಸ್ವಿಯಾಗಿ ಕೈಗೊಂಡಿದ್ದು ,ಸಂತಸದಾಯಕವಾಗಿದೆ. ಆದರೂ ಸಹ ಗೌಪ್ಯತೆಯೊಂದಿಗೆ ಸ್ವಯಂ ಪರೀಕ್ಷೆ ಮಾಡಿಕೊಳ್ಳಲು ಸಹಾಯಕವಾದ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ಪ್ರಶ್ನೋತ್ತರದಲ್ಲಿ ಸ್ವಯಂ ಉತ್ತರಗಳಿಂದ, ಸೋಂಕು ಹರಡಬಹುದಾದ ಸಾಧ್ಯತೆಗಳಿದ್ದಲ್ಲಿ ಕನಿಷ್ಟ ಶೇಖಡಾ 95 ರಷ್ಟು ಜನ ತಪಾಸಣೆ ಮಾಡಿಸಿಕೊಳ್ಳಲು, ಖಚಿತಪಟ್ಟ ಸೋಂಕಿತರಲ್ಲಿ ಶೇ.95 ರಷ್ಟು ಜನರನ್ನು ಎಆರ್‌ಟಿ ಕೇಂದ್ರ ಗಳಿಗೆ ಚಿಕಿತ್ಸೆ ಗೆ ಬರುವಂತೆ ಮಾಡಲು ಹಾಗೂ ಸೋಂಕಿತರಾಗಿ ಎಆರ್‌ಟಿ ಚಿಕಿತ್ಸೆ ಪಡೆಯುವರಲ್ಲಿ ಶೇ.95 ರಷ್ಟು ಜನರನ್ನು ಸದಾ ನಿಗಾವಣೆ, ಆಪ್ತ ಸಮಾಲೋಚನೆ, ಜಾಗೃತಿ ಮೂಲಕ ಚಿಕಿತ್ಸೆ ಬಿಡದಂತೆ, ವೈರಲ್ ಲೋಡ್ ಹೆಚ್ಚಾಗದಂತೆ ಹಾಗೂ ಹೈರಿಸ್ಕಲ್ಲಿ ಇರುವ ಜನತೆಗೆ ಮೂಲ ಉದ್ದೇಶ ತಲುಪಿಸಬೇಕೆಂದು ಸಂಬಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ರಕ್ತದಾನ ಶಿಬಿರಗಳ ಆಯೋಜನೆಗೆ ಸೂಚನೆ: ರಾಯಚೂರು ಮತ್ತು ಸಿಂಧನೂರುನಲ್ಲಿರುವ ಬ್ಲಡ್ ಬ್ಯಾಂಕ್‌ಗಳನ್ನು ಪ್ರತಿ ತಿಂಗಳು ಶಿಬಿರ ಏರ್ಪಡಿಸಿ, ರಕ್ತದ ಕೊರತೆಯಾಗದಂತೆ ನೋಡಿಬೇಕು. ಸಂಗ್ರಹಣೆಯ 25% ರಷ್ಟು ರಿಮ್ಸ್ ಬ್ಲಡ್ ಬ್ಯಾಂಕ್‌ಗೆ ನೀಡುವ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದರು.

100 ದಿನಗಳ ಕ್ಷಯಮುಕ್ತ ಅಭಿಯಾನಕ್ಕೆ ಸೂಕ್ತ ಯೋಜನೆ ರೂಪಿಸಿ: 100 ದಿನಗಳ ಕ್ಷಯಮುಕ್ತ ಅಭಿಯಾನದಡಿ ಕ್ಷಯರೋಗ ನಿರ್ಮೂಲನೆ ಮಾಡಲು ಮಾನದಂಡದಡಿ ಗುರುತಿಸಲ್ಪಟ್ಟ 209 ಗ್ರಾಮಗಳಲ್ಲಿ ಚಿಕಿತ್ಸೆ ಪಡೆಯುತ್ತಿರುವ ಕುಟುಂಬದ ಎಲ್ಲ ಸದಸ್ಯರು ಸೇರಿದಂತೆ ಸಂಪೂರ್ಣ ಜನಸಂಖ್ಯೆಯನ್ನು ಪರೀಕ್ಷಿಸಿ ಅಗತ್ಯವಿದ್ದವರಿಗೆ ಕಫ ಪರೀಕ್ಷೆ,

3 ನೇ ಪುಟಕ್ಕೆ

ಪುಣೆ : ಕ್ಲೋರಿನ್ ಸೋರಿಕೆ, 24 ಮಂದಿ ಆಸ್ಪತ್ರೆಗೆ ದಾಖಲು

ಪುಣೆ, ಏ. 30 (ಪಿಟಿಐ)



ಪುಣೆಯ ಕೊಂಧ್ವಾದ'ಲ್ಲಿ ಕ್ಲೋರಿನ್ ಅನಿಲ ಸೋರಿಕೆಯಾದ ನಂತರ ಕನಿಷ್ಠ 22 ನಿವಾಸಿಗಳು ಮತ್ತು ಇಬ್ಬರ'ು ಅಗ್ನಿಶಾವ'ುಕ ದಳದವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಅಗ್ನಿಶಾಮಕ ಅಧಿಕಾರಿಗಳು ತಿಳಿಸಿದ್ದಾರೆ.

ಗಂಗಾಧಾಮ್ ಪ್ರದೇಶದ ನಿಷ್ಕ್ರಿಯ ನೀರು ಶುದ್ಧೀಕರಣ ಘಟಕದ ಗೋಡೌನ್‌ನಲ್ಲಿ ಕ್ಲೋರಿನ್ ಹೊಂದಿರುವ ಕೈಬಿಟ್ಟ ಟ್ಯಾಂಕ್‌ನಿಂದ ಸೋರಿಕೆ ಉಂಟಾಗಿದೆ ಎಂದು ಅವರು ಹೇಳಿದರು.ಸೋರಿಕೆ ಮತ್ತು ನಂತರದ ಅನಿಲ ಹರಡುವಿಕೆಯ ನಂತರ, ಸುತ್ತಮುತ್ತಲಿನ ನಿವಾಸಿಗಳು ಉಸಿರಾಟದ ತೊಂದರೆ ಅನುಭವಿಸಿದರು.

ಕರೆ ಸ್ವೀಕರಿಸಿದ ನಂತರ, ಅಗ್ನಿಶಾಮಕ ತಂಡಗಳನ್ನು ಕಳುಹಿಸಲಾಯಿತು. ಹಲವಾರು ನಾಗರಿಕರನ್ನು ಸ್ಥಳಾಂತರಿಸಲಾಯಿತು.

ಕೆ.ಪಿ.ಎಸ್.ಸಿ ಗೆಜೆಟೆಡ್ ಪ್ರೊಬೇಷನರಿ ವ್ಯಕ್ತಿತ್ವ ಪರೀಕ್ಷೆಗೆ

ಅರ್ಹತೆ ಪಡೆದ ಅಭ್ಯರ್ಥಿಗಳಿಗಾಗಿ ಅಣುಕು ವ್ಯಕ್ತಿತ್ವ ಪರೀಕ್ಷೆ ಆಯೋಜನೆ

ರಾಯಚೂರು,ಏ.30-

ಕರ್ನಾಟಕ ಲೋಕಸೇವಾ ಆಯೋಗ (ಕೆ.ಪಿ.ಎಸ್.ಸಿ) ವತಿಯಿಂದ 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ ಗ್ರೂಪ್-ಎ ಹಾಗೂ ಬಿ ವೃಂದದ ಒಟ್ಟು 384 ಹುದ್ದೆಗಳ (310-ಆರ್‌ಪಿಸಿ+74-ಹೆಚ್‌ಕೆ) ನೇಮಕಾತಿ ಪ್ರಕ್ರಿಯೆ ನಡೆಯುತ್ತಿದ್ದು, ಮುಖ್ಯ ಪರೀಕ್ಷೆಯಲ್ಲಿ ತೇರ್ಗಡೆಗೊಂಡು 1:3ರ ಅನುಪಾತದಲ್ಲಿ ವ್ಯಕ್ತಿತ್ವ ಪರೀಕ್ಷೆಗೆ ಅರ್ಹತೆ ಪಡೆದ ಅಭ್ಯರ್ಥಿಗಳಿಗಾಗಿ ಸಂದರ್ಶನ ಪೂರ್ವ ಸಿದ್ದತೆ ಹಾಗೂ ಆತ್ಮವಿಶ್ವಾಸ ವೃದ್ಧಿ ಉದ್ದೇಶದಿಂದ ರಾಯಚೂರು ಜಿಲ್ಲಾಡಳಿತ ವತಿಯಿಂದ ಅಣುಕು ವ್ಯಕ್ತಿತ್ವ ಪರೀಕ್ಷೆ (Mock Personality Test) ಆಯೋಜಿಸಲಾಗುತ್ತಿದೆ.



ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸಲು ವಿಷಯ ಜ್ಞಾನದ ಜೊತೆಗೆ ವ್ಯಕ್ತಿತ್ವ, ಸಂವಹನ ಕೌಶಲ್ಯ, ನಿರ್ಧಾರ ಕೈಗೊಳ್ಳುವ ಸಾಮರ್ಥ್ಯ, ಆಡಳಿತಾತ್ಮಕ ಮನೋಭಾವ ಹಾಗೂ ಸಮಕಾಲೀನ ವಿಷಯಗಳ ಅರಿವು ಅತ್ಯಂತ ಅವಶ್ಯಕವಾಗಿದೆ. ಈ ಹಿನ್ನೆಲೆಯಲ್ಲಿ ಅಭ್ಯರ್ಥಿಗಳಿಗೆ ನೈಜ ಸಂದರ್ಶನದ ಅನುಭವ ಕಲ್ಪಿಸುವ ನಿಟ್ಟಿನಲ್ಲಿ ಈ ಕಾರ್ಯಕ್ರಮ ರೂಪಿಸಲಾಗಿದೆ.

ಅಣುಕು ವ್ಯಕ್ತಿತ್ವ ಪರೀಕ್ಷೆಯಲ್ಲಿ ಅನುಭವಿ ಜಿಲ್ಲಾಮಟ್ಟದ ಅಧಿಕಾರಿಗಳು, ವಿಷಯ ತಜ್ಞರು, ಹಿರಿಯ ಸ್ಪರ್ಧಾತ್ಮಕ ಪರೀಕ್ಷಾ ಮಾರ್ಗದರ್ಶಕರು ಹಾಗೂ ಸಂದರ್ಶನ ಪ್ಯಾನೆಲ್ ಸದಸ್ಯರು ಭಾಗವಹಿಸಿ, ಅಭ್ಯರ್ಥಿಗಳ ಸಂದರ್ಶನ ನಡೆಸುವ ಮೂಲಕ ವೈಯಕ್ತಿಕ ಪ್ರತಿಕ್ರಿಯೆ, ಸಂದರ್ಶನ ತಂತ್ರಗಳು, ಸಾಮಾನ್ಯ ತಪ್ಪುಗಳು ಹಾಗೂ ವ್ಯಕ್ತಿತ್ವ ಅಭಿವೃದ್ಧಿಗೆ ಸಂಬಧಿಸಿದ ಉಪಯುಕ್ತ ಸಲಹೆಗಳನ್ನು ನೀಡಲಿದ್ದಾರೆ. ಭಾಗವಹಿಸಲು ಇಚ್ಛಿಸುವ ಅರ್ಹ ಅಭ್ಯರ್ಥಿಗಳು ತಮ್ಮ ಹೆಸರು, ಪರೀಕ್ಷಾ

3 ನೇ ಪುಟಕ್ಕೆ

ಸರಕಾರಿ ಆಸ್ಪತ್ರೆಯಲ್ಲಿ ಪತ್ನಿಗೆ ಹೆರಿಗೆ ಮಾಡಿಸಿ, ಸರಳತೆ ಮೆರದ ಜಿ.ಪಂ ಸಿಇಒ





ರಾಯಚೂರು,ಏ.30-

ಸರಕಾರಿ ಆಸ್ಪತ್ರೆಯಲ್ಲಿ ಆರ್ಥಿಕವಾಗಿ ದುರ್ಬಲರು ಮಾತ್ರ ಸೇವೆ ಪಡೆಯುತ್ತಾರೆ ಎಂದು ಅಸಡ್ಡೆ ತೋರುವವರಿಗೆ ರಾಯಚೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ತಮ್ಮ ಪತ್ನಿಯ ಹೆರಿಗೆಯನ್ನು ಏಪ್ರಿಲ್ 26ರ ಭಾನುವಾರ ದಂದು ರಾಯಚೂರು ನಗರದ ರಿಮ್ಸ್ ಆಸ್ಪತ್ರೆಯಲ್ಲಿ ಮಾಡಿಸಿ, ಸರಳತೆ ಮೆರೆಯುವ ಮೂಲಕ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುವಂತೆ ಸಂದೇಶ ರವಾನಿಸಿದ್ದಾರೆ.

ನಗರದಲ್ಲಿ ಹಲವಾರು ಖಾಸಗಿ ಅಸ್ಪತ್ರೆಗಳಿದ್ದರೂ ಸಹ ಮನಸ್ಸು ಮಾಡದೆ ಸರಕಾರದ ಆಸ್ಪತ್ರೆಗಳಲ್ಲಿ ಸುಸಜ್ಜಿತ ಹೆರಿಗೆ ಕೊಠಡಿ, ವಾರ್ಡ್, ನುರಿತ ತಜ್ಞ ವೈದ್ಯರ ಸೇವೆ, ನಿಯಮಿತವಾಗಿ ನಿಗಾ ವಹಿಸುವ ಸಿಬ್ಬಂದಿಗಳ ಸೇವೆಯನ್ನು ಪ್ರತಿಯೊಬ್ಬರೂ ಪಡೆಯಲಿ ಎಂಬ ಸದುದ್ದೇಶದಿಂದ ತಮ್ಮ ಪತ್ನಿಯ ಹೆರಿಗೆಯನ್ನು ರಿಮ್ಸ್ ಆಸ್ಪತ್ರೆಯಲ್ಲಿ ಮಾಡಿಸಿದ್ದು, ಅವರ ಪತ್ನಿ ಗಂಡು ಮಗುವಿಗೆ ಜನ್ಮ ನೀಡಿದ್ದಾರೆ. ಪ್ರಸ್ತುತ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಆಧೀನದ ನಗರದ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಆರೈಕೆಯಲ್ಲಿದ್ದು, ತಾಯಿ ಮಗು

3 ನೇ ಪುಟಕ್ಕೆ

ಹೇಮರೆಡ್ಡಿ ಮಲ್ಲಮ್ಮ ಜಯಂತಿ ಪೂರ್ವಭಾವಿ ಸಭೆ

ಅರ್ಥಪೂರ್ಣ ಆಚರಣೆ ಅಗತ್ಯ ಸಿದ್ಧತೆ ಮಾಡಿಕೊಳ್ಳಿ: ಎಡಿಸಿ ಶಿವಾನಂದ



ರಾಯಚೂರು,ಏ.30-

ಹೇಮರೆಡ್ಡಿ ಮಲ್ಲಮ್ಮ ಜಯಂತಿ ಅದ್ದೂರಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ದತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಏಪ್ರಿಲ್ 30ರ ಬುಧವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶ್ರೀ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹೇಮರೆಡ್ಡಿ ಮಲ್ಲಮ್ಮ ಜಯಂತಿ ಮೇ.10ರಂದು ಆಚರಣೆ ಮಾಡಲಾಗುವುದು. ಜಯಂತಿ ದಿನದಂದು ಜಿಲ್ಲೆಯ ಎಲ್ಲ ಸರ್ಕಾರಿ ಕಚೇರಿ, ತಾಲೂಕು ಕೇಂದ್ರಗಳಲ್ಲಿ ಮತ್ತು ತಾಲೂಕು ಕಚೇರಿ, ಗ್ರಾಮ ಪಂಚಾಯತ್, ಶಾಲಾ, ಕಾಲೇಜು ಹಾಗೂ ವಸತಿ ನಿಲಯಗಳಲ್ಲಿ ಶ್ರೀ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಡ್ಡಾಯವಾಗಿ ಆಚರಣೆ ಮಾಡಬೇಕಾಗಿದ್ದು, ಈ ಬಗ್ಗೆ ಸಂಬಧಿಸಿದ ಅಧಿಕಾರಿಗಳು ಕ್ರಮ ವಹಿಸಬೇಕು ಎಂದರು.

ಜಿಲ್ಲಾ ಕೇಂದ್ರದಲ್ಲಿ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆಗಾಗಿ ಸಂಬಂಧಿಸಿದ ಇಲಾಖೆ ಅಚ್ಚುಕಟ್ಟು ವ್ಯವಸ್ಥೆ ಕಲ್ಪಿಸಬೇಕು. ಮೇ 10ರ ಬೆಳಗ್ಗೆ 10 ಗಂಟೆಗೆ ನಗರದ ಪಂಡಿತ ಸಿದ್ದರಾಮ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಎಲ್ಲ ಇಲಾಖೆಗಳು ಪರಸ್ಪರ ಸಮನ್ವಯದೊಂದಿಗೆ ಜಯಂತಿ ಆಚರಣೆಗೆ ಅಚ್ಚುಕಟ್ಟು ವ್ಯವಸ್ಥೆ ಕಲ್ಪಿಸಬೇಕು. ಜಯಂತಿ ಆಚರಣೆ ಕಾರ್ಯಕ್ರಮಕ್ಕೆ ಸಮಾಜದ ಬಂಧುಗಳ ಸಹಕಾರವೂ ಅಗತ್ಯವಿದ್ದು, ಜಿಲ್ಲಾಡಳಿತದೊಂದಿಗೆ ಸಹಕರಿಸಿ ವ್ಯವಸ್ಥಿತ ಜಯಂತಿ ಆಚರಣೆಗೆ ಸಮಾಜದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದರು.

ಸರ್ಕಾರದ ಮಾರ್ಗಸೂಚಿಯನ್ವಯ ಜಯಂತಿ

3 ನೇ ಪುಟಕ್ಕೆ

ಆಸ್ತಿಗಾಗಿ ಅಣ್ಣ-ತಮ್ಮನ ನಡುವೆ ಗಲಾಟೆ, ಬಾಲಕ ಬಲಿ

ಸಿಂಧನೂರು: ತಾಲೂಕಿನ ಅಲಬನೂರು ಗ್ರಾಮದಲ್ಲಿ ಏ.29 ಬುಧವಾರ ಬೆಳಿಗ್ಗೆ ಸುಮಾರು 8 ಗಂಟೆಗೆ ನಾಗರಾಜ ತಂದೆ ಸಿದ್ದಪ್ಪ (13) ವರ್ಷ ಕೊಲೆಯಾದ ಬಾಲಕ ಸಿದ್ದಪ್ಪ ಹಾಗೂ ಆತನ ತಮ್ಮ ಬಸವರಾಜ ನಡುವೆ ಆಸ್ತಿಗೆ ಸಂಬಂಧಿಸಿದಂತೆ ಆವಾಗವಾಗ ವಾಗ್ವಾದ ನಡೆಯುತ್ತಲೆ ಇತ್ತು. ಇದರ ಬಗ್ಗೆ ನ್ಯಾಯಾಲಯದಲ್ಲಿ ವಿಚಾರಣೆ ನಡೆಯುತ್ತಿದೆ ಎನ್ನಲಾಗಿದೆ. 4 ಎಕರೆಯ ಜಮೀನಿನನಲ್ಲಿ ಇಬ್ಬರಿಗೆ ಸಮನಾಗಿ ಪಾಲು ಕೊಡಲು ಕೊಲೆ ಆರೋಪಿ ತಮ್ಮ ಬಸವರಾಜ ಅಣ್ಣ ಸಿದ್ದಪ್ಪನಿಗೆ ಕೇಳಿದ್ದರು ಸಹ ಪಾಲು ಕೊಡದೇ ಅಣ್ಣ ಸಿದ್ದಪ್ಪ ಸತಾಯಿಸಿದ್ದೆ ಈ ಘಟನೆಗೆ ಕಾರಣವಾಗಿದೆ.

ಈ ವಿಚಾರದ ಬಗ್ಗೆ ತುಂಬಾ ವರ್ಷಗಳಿಂದಲೂ ಇಬ್ಬರ ನಡುವೆ ವೈಷಮ್ಯವಿತ್ತು. ಕೊಲೆ ಆರೋಪಿ ಬಸವರಾಜ ಸಿರುಗುಪ್ಪದಲ್ಲಿ ಹೆಂಡತಿ ಮನೆಯಲ್ಲಿ ವಾಸವಾಗಿದ್ದು, ಏ.28 ಮಂಗಳವಾರದಂದು ಅಲಬನೂರಿಗೆ ಬಂದು, ಆಸ್ತಿ ವಿಷಯಕ್ಕೆ ಗಲಾಟೆ ನಡೆದಿದೆ. ಏ.29 ಬುಧವಾರ ಅಣ್ಣ ಸಿದ್ದಪ್ಪ ಊರಲ್ಲಿರುವ ಮದುವೆಯಲ್ಲಿ ಅಡುಗೆ ಮಾಡಲು ಹೋಗಿದ್ದು, ಅತ್ತಿಗೆ ಹಾಗೂ ಅಣ್ಣನ ಚಿಕ್ಕ ಮಕ್ಕಳು ಮನೆಯಲ್ಲಿದ್ದರು.

ತಮ್ಮ ಬಸವರಾಜ ಅಣ್ಣನ ಮನೆಗೆ ಹೋಗಿ ಅತ್ತಿಗೆಗೆ ಒನಕೆಯಿಂದ ಒಡೆದು ಚಾಕು ಹಾಕಲು ಹೋದಾಗ ತಪ್ಪಿಸಿಕೊಂಡು ಹೋಗಿದ್ದು, ಎದುರಿಗೆ ಬಂದ 13 ವರ್ಷದ ಅಣ್ಣನ ಮಗ ನಾಗಾರಾಜುಗೆ ಚಾಕುವಿನಿಂದ ಇರಿದು ಕೊಲೆ ಮಾಡಿ ಮತ್ತೆ ಅತ್ತಿಗೆ ಮೇಲೆ ಹಲ್ಲೆಗೆ ಮುಂದಾಗಿದ್ದಾನೆ ಆಗ ತಪ್ಪಿಸಿಕೊಂಡು ಹೋಗಿ ಜೀವ ಉಳಿಸಿಕೊಂಡಿದ್ದಾಳೆ.

ವಿಷಯ ತಿಳಿದು ಗ್ರಾಮೀಣ ಪೊಲೀಸ್ ಠಾಣೆಯ ಪಿಎಸ್‌ಐ ಮೌನೇಶ



ರಾಠೋಡ್ ಸಿಬ್ಬಂದಿಗಳ ಜೊತೆಗೆ ಅಲಬನೂರು ಗ್ರಾಮಕ್ಕೆ ತೆರಳಿ ಕೊಲೆ ಮಾಡಿದ ಆರೋಪಿ ಬಸವರಾಜನನ್ನು ಬಂಧಿಸಿ ಮೃತ ದೇಹವನ್ನು ತಾಲೂಕು ಸಾರ್ವಜನಿಕ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗಾಗಿ ಕಳುಹಿಸಿದ್ದಾರೆ.

ಹಲ್ಲೆಗೊಳಗಾದ ಅಮೃತಮ್ಮ ಗಂಡ ಸಿದ್ದಪ್ಪರನ್ನು ಚಿಕಿತ್ಸೆ ಗೆಂದು ತಾಲೂಕು ಸಾರ್ವಜನಿಕ ಆಸ್ಪತ್ರೆಗೆ ದಾಖಲು ಮಾಡಿ ಚಿಕಿತ್ಸೆ ನೀಡಲಾಗುತ್ತಿದೆ. ನನ್ನ ಮಗನನ್ನು ಕೊಲೆ ಮಾಡಿದ ಬಸವರಾಜ ಹಾಗೂ ವೀರೇಶ ಆತನ ತಾಯಿ ಚಿನ್ನಮ್ಮ ಇವರ ಮೇಲೆ ಕ್ರಮ ಕೈಗೊಳ್ಳುವಂತೆ ಮೃತಪಟ್ಟ ಬಾಲಕನ ತಂದೆ ಸಿದ್ದಪ್ಪ ಪೊಲೀಸ್ ಅಧಿಕಾರಿಗಳಿಗೆ ಒತ್ತಾಯ ಮಾಡಿದರು.

ಬೆಂಗಳೂರು 'ಗ್ಯಾಸ್ ಚೇಂಬರ ಆಗದಂತೆ ತಡೆಯಲು ಹಸಿರು ಹೊದಿಕೆ ಹೆಚ್ಚಳ ಅನಿವಾರ್ಯ: ಅರಣ್ಯ ಸಚಿವ ಈಶ್ವರ ಖಂಡ್ರೆ

ಕೊಪ್ಪಳ ಏ.30

ವೈಜ್ಞಾನಿಕವಾಗಿ ಪರಿಸರ ಸಮತೋಲನ ಕಾಪಾಡಿಕೊಳ್ಳಲು ಶೇ. 33% ರಷ್ಟು ಹಸಿರು ಹೊದಿಕೆ ಇದ್ದಾಗ ಮಾತ್ರ ಆರೋಗ್ಯಕರ ನಗರವನ್ನು ಕಟ್ಟಲು ಸಾಧ್ಯ, ಬೆಳೆಯುತ್ತಿರುವ ಬೆಂಗಳೂರಿನಲ್ಲಿ ಹಸಿರು ಹೊದಿಕೆ ಕ್ಷೀಣಿಸುತ್ತಿದ್ದು, 1.40 ಕೋಟಿ ಜನಸಂಖ್ಯೆ ಇರುವ ಬೆಂಗಳೂರು ನಗರದಲ್ಲಿ ಕನಿಷ್ಠ 10 ಕೋಟಿ ಮರಗಳನ್ನು ಪೋಷಿಸುವ ಅಗತ್ಯವಿದೆ ಎಂದು ಅರಣ್ಯ, ಪರಿಸರ ಜಾಗೂ ಜೀವಿಶಾಸ್ತ್ರ, ಸಚಿವರಾದ ಈಶ್ವರ ಬಿ ಖಂಡ್ರೆ, ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿ ಹಾಗೂ ಅಸರ್ ಸೋಷಿಯಲ್ ಇಂಪ್ಯಾಕ್ಟ್ ಅಡ್ವೈಸರ್ ಸಂಸ್ಥೆಯ ಸಹಯೋಗದಲ್ಲಿ ಇಂದು ನಗರದ ಖಾಸಗಿ ಹೋಟೆಲ್ ನಲ್ಲಿ ಆಯೋಜಿಸಿದ್ದ ಬೆಂಗಳೂರಿನಲ್ಲಿ ತಾಪಮಾನ ವೈಪರೀತ್ಯ ಹಾಗೂ ಅದರ ಪರಿಣಾಮಗಳ ಕುರಿತು ಮಾಧ್ಯಮ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು ಒಬ್ಬ ಮನಷ್ಯನಿಗೆ ಉತ್ತಮ ಆಮ್ಲಜನಕ ದೊರಕಲು ಕನಿಷ್ಠ 7 ಮರಗಳು ಇರಬೇಕು ಎಂದು ವಿಜ್ಞಾನ ಪ್ರತಿಪಾದಿಸುತ್ತದೆ ಎಂದರು.

ಬೆಂಗಳೂರಿನ ಪರಿಸರದಲ್ಲಾಗುತ್ತಿರುವ ಬದಲಾವಣೆ ಹಾಗೂ ಅರಣ್ಯ ಇಲಾಖೆಯ ಮುಂದಿನ ಯೋಜನೆಗಳ ಕುರಿತು ಸುದೀರ್ಘವಾಗಿ ಮಾತನಾಡಿದ ಅವರು ಒಂದು ಕಾಲದಲ್ಲಿ 'ನಿವೃತ್ತರ ಸ್ವರ್ಗ' ಹಾಗೂ 'ಹವಾನಿಯಂತ್ರಿತ ನಗರ' ಎಂದು ಖ್ಯಾತಿ ಪಡೆದಿದ್ದ ಬೆಂಗಳೂರು ಇಂದು ಕಾಂಕ್ರೀಟ್ ಜಂಗಲ್ ಆಗಿ ಮಾರ್ಪಡುತ್ತಿರುವುದು ಆತಂಕಕಾರಿ ವಿಷಯವಾಗಿದೆ.

ಬೆಂಗಳೂರು ಇದೇ ರೀತಿಯ ಬೆಳವಣಿಗೆ ಹಾಗೂ ವಾಹನ ದಟ್ಟಣೆ ಹೆಚ್ಚಿಸಿಕೊಂಡಲ್ಲಿ ನವದೆಹಲಿಯಂತೆ 'ಗ್ಯಾಸ್ ಚೇಂಬ'ರ್ ಆಗುವುದನ್ನು ತಪ್ಪಿಸಲು ಹಸಿರು ಹೊದಿಕೆಯನ್ನು ಹೆಚ್ಚಿಸುವ ತತ್ ಕ್ಷಣದ ಅಗತ್ಯವಿದೆ ಎಂದು ಹೇಳಿದರು.

★ಗತವೈಭವದ ಮರುಸ್ಥಾಪನೆ:★

ಕೆಂಪೇಗೌಡರು ನಿರ್ಮಿಸಿದ ಹಸಿರು ಬೆಂಗಳೂರನ್ನು ಮರಳಿ ಪಡೆಯಲು ಅರಣ್ಯ ಇಲಾಖೆ ಬದ್ಧವಾಗಿದೆ. ನಗರದ ಸುತ್ತಮುತ್ತಲ ಹಸಿರು ಹೊದಿಕೆಯನ್ನು ಮರುಸ್ಥಾಪಿಸಲು ಮತ್ತು ಪರಿಸರ ಮಾಲಿನ್ಯ ತಡೆಗಟ್ಟಲು ಕಠಿಣ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಸಚಿವರು ಭರವಸೆ ನೀಡಿದರು.

ಮಾಲಿನ್ಯ ಮತ್ತು ಕೆರೆಗಳ ಅವನತಿ:

ಬೆಂಗಳೂರಿನಲ್ಲಿದ್ದ ಸುಮಾರು 250 ಕೆರೆಗಳಲ್ಲಿ ಹಲವು ಅಭಿವೃದ್ಧಿಯಲ್ಲಿ ಮಾಯವಾಗಿದ್ದು, ಇನ್ನೂ ಕೆಲವು ಇಂದು ತ್ಯಾಜ್ಯ ನೀರು ಸೇರಿ ಕಲುಷಿತಗೊಂಡಿವೆ. ಇದರಿಂದ ಜಲ ಮತ್ತು ವಾಯು ಮಾಲಿನ್ಯ ಉಂಟಾಗುತ್ತಿದ್ದು, ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಸಂಚಾರ ದಟ್ಟಣೆ ಮತ್ತು ವಾಹನಗಳ ಕಾರ್ಬನ್ ಡೈಆಕ್ಸೈಡ್ ಹೊರಸೂಸುವಿಕೆಯಿಂದ ತಾಪಮಾನ ಏರುತ್ತಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

★11 ಕೋಟಿ ಸಸಿಗಳ ನಾಟಿ:★

ಅರಣ್ಯ ಇಲಾಖೆಯ ಸಾಧನೆಯನ್ನು ಹಂಚಿಕೊಂಡ ಸಚಿವರು, ಕಳೆದ ಮೂರು ವರ್ಷಗಳಲ್ಲಿ ರಾಜ್ಯದಾದ್ಯಂತ ಸುಮಾರು 11 ಕೋಟಿ ಸಸಿಗಳನ್ನು ನೆಡಲಾಗಿದೆ. ಇವುಗಳಲ್ಲಿ ಎಷ್ಟು ಸಸಿಗಳು ಬದುಕುಳಿದಿವೆ ಎಂಬುದರ ಬಗ್ಗೆ ವೈಜ್ಞಾನಿಕ ಸಮೀಕ್ಷೆ ನಡೆಸಿ, ಆ ವರದಿಯನ್ನು ಇಲಾಖೆಯ ವೆಬ್ಸೈಟ್ನಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಅಪ್ಲೋಡ್ ಮಾಡಲು ಸೂಚನೆ ನೀಡಿದ್ದೇನೆ,



ಎಂದು ಮಾಹಿತಿ ನೀಡಿದರು.

ಬೆಂಗಳೂರಿನ ಶ್ವಾಸ ತಾಣಗಳ ರಕ್ಷಣೆಗೆ ಅರಣ್ಯ ಇಲಾಖೆ ಮೆಗಾ ಪ್ಲಾನ್ ರೂಪಿಸಿದ್ದು, ನಗರದ ಆಯಕಟ್ಟಿನ ಪ್ರದೇಶಗಳಾದ ಕಾಡುಗೋಡಿ ಮತ್ತು ತುರಹಳ್ಳಿ ಭಾಗದಲ್ಲಿ ಅಕ್ರಮವಾಗಿ ಒತ್ತುವರಿಯಾಗಿದ್ದ ಸುಮಾರು 10,000 ಕೋಟಿ ಮೌಲ್ಯದ ಅರಣ್ಯ ಭೂಮಿಯನ್ನು ಮರುವಶಪಡಿಸಿಕೊಳ್ಳಲಾಗಿದೆ. ಸಿಲಿಕಾನ್ ಸಿಟಿಯಲ್ಲಿ ದಿನೇ ದಿನೇ ಕುಸಿಯುತ್ತಿರುವ ಹಸಿರು ಹೊದಿಕೆಯನ್ನು ಹೆಚ್ಚಿಸಲು ಮತ್ತು ಪರಿಸರ ಸಮತೋಲನ ಕಾಯ್ದುಕೊಳ್ಳಲು ಕರ್ನಾಟಕ ಅರಣ್ಯ ಇಲಾಖೆ ಐತಿಹಾಸಿಕ ಹೆಜ್ಜೆ ಇರಿಸಿದೆ.

★ಮರುವಶವಾದ ಭೂಮಿಯಲ್ಲಿ 'ನೆಡುತೋಪು'ಗಳ ನಿರ್ಮಾಣ:★

ಕೇವಲ ಒತ್ತುವರಿ ತೆರವು ಮಾಡುವುದಷ್ಟೇ ಅಲ್ಲದೆ, ಭೂಗಳ್ಳರು ಮತ್ತೆ ಅತಿಕ್ರಮಣ ಮಾಡದಂತೆ ತಡೆಯಲು ಇಲಾಖೆ ಮಾಸ್ಟರ್ ಪ್ಲಾನ್ ರೂಪಿಸಿದೆ. ಮರುವಶಪಡಿಸಿಕೊಂಡ ಜಾಗಕ್ಕೆ ತಕ್ಷಣವೇ ಕಾಂಪೌಂಡ್ ನಿರ್ಮಿಸಿ, ಸಾವಿರಾರು ಸಸಿಗಳನ್ನು ನೆಡುವ ಮೂಲಕ ಆ ಪ್ರದೇಶಗಳನ್ನು 'ನೆಡುತೋಪು' ( ) ಗಳನ್ನಾಗಿ ಪರಿವರ್ತಿಸಲಾಗುವುದು. ಇದು ನಗರದ ಜನತೆಗೆ ಶುದ್ಧ ಗಾಳಿ ನೀಡುವ ನೈಸರ್ಗಿಕ ಕೇಂದ್ರಗಳಾಗಿ ಕಾರ್ಯನಿರ್ವಹಿಸಲಿವೆ ಎಂದು ತಿಳಿಸಿದರು.

★ಬೆಂಗಳೂರಿಗೆ ಸಿಗಲಿದೆ ಮತ್ತೊಂದು 'ಲಾಲ್ಬಾಗ್'

ನಗರದ ಹಸಿರು ವಿಸ್ತೀರ್ಣ ಹೆಚ್ಚಿಸುವ ಸಲುವಾಗಿ ಬೆಂಗಳೂರು ಉತ್ತರ ತಾಲೂಕಿನ ಮಾದಪ್ಪನಹಳ್ಳಿಯ 153 ಎಕರೆ ಪ್ರದೇಶದಲ್ಲಿ 'ವಿಶ್ವಗುರು ಬಸವಣ್ಣನವರ ಬೃಹತ್ ಜೈವಿಕ ಉದ್ಯಾನವನ' ತಲೆ ಎತ್ತಲಿದೆ ಎಂದು ಹೇಳಿದರು.

★ಹವಾಮಾನ ಬದಲಾವಣೆ ತಡೆಗೆ ಜಿಲ್ಲಾ ಮಟ್ಟದ ಕ್ರಿಯಾ ಯೋಜನೆ★

ಪರಿಸರ ಮಾಲಿನ್ಯ ನಿಯಂತ್ರಣಕ್ಕಾಗಿ ಸಂಸ್ಥೆ ರೂಪಿಸಿರುವ ಕರ್ನಾಟಕ ರಾಜ್ಯ ಕ್ರಿಯಾ ಯೋಜನೆಗೆ ಸರ್ಕಾರದ ಒಪ್ಪಿಗೆ ಸಿಕ್ಕಿದೆ. ರಾಜ್ಯದ ಎಲ್ಲಾ 31 ಜಿಲ್ಲೆಗಳಲ್ಲಿ ಹವಾಮಾನ ವೈಪರೀತ್ಯ ಎದುರಿಸಲು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ತರಬೇತಿ ಮತ್ತು ಅನುಷ್ಠಾನ ಪ್ರಕ್ರಿಯೆಗಳು ಶೀಘ್ರವೇ ಆರಂಭವಾಗಲಿವೆ.

''ವೃಕ್ಷೋ ರಕ್ಷಿತಃ ರಕ್ಷಿತಃ'' ಎಂಬ ಧ್ಯೇಯದೊಂದಿಗೆ ಬೆಂಗಳೂರಿನ ಕೆರೆಗಳ ಪುನರ್ನಿರ್ಮಾಣ ಮತ್ತು ನಗರದ ಹಸಿರು ವಲಯವನ್ನು ವಿಸ್ತರಿಸುವುದೇ ನಮ್ಮ ಅಂತಿಮ ಗುರಿಯಾಗಿದೆ ಎಂದು ಅವರು ತಿಳಿಸಿದರು.

ಇಂದಿನ ಕಾರ್ಯಾಗಾರದಲ್ಲಿ ವಿಷಯ ತಜ್ಞರು ಮಂಡಿಸುವ ವಿಷಯ ಹಾಗೂ ಮಾಧ್ಯಮ ಪ್ರತಿನಿಧಿಗಳು ಚರ್ಚಿಸುವ ವಿಷಯದ ಕುರಿತು ವಿಸ್ತೃತ ವರದಿ ಸಲ್ಲಿಸಿದಲ್ಲಿ ಅರಣ್ಯ ಇಲಾಖೆ ವತಿಯಿಂದ ಕ್ರಮವಹಿಸಲಾಗುವುದು ಎಂದರು.

ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷರಾದ ಆಯೇಷಾ ಖಾನಂ ಅವರು ಗಣ್ಯರನ್ನು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿ, ಬದಲಾಗುತ್ತಿರುವ ಬೆಂಗಳೂರು ನಗರದಲ್ಲಾಗುತ್ತಿರುವ ಪರಿಸರ ಬದಲಾವಣೆ ಹಾಗೂ ಹೆಚ್ಚುತ್ತಿರುವ ಶಾಖದ ಕುರಿತು ವರದಿ ಮಾಡಿ ಸರ್ಕಾರದ ಗಮನ ಸೆಳೆಯುವ ಕರ್ತವ್ಯ ನಿರ್ವಹಿಸುವ ಮಾಧ್ಯಮಗಳು ಹಾಗೂ ಸರ್ಕಾರದ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸುವ ಜವಬ್ದಾರಿಯಿಂದ ಇಂತಹ ವಿನೂತನ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಪ್ರಸ್ತುತ ದಶಕದಲ್ಲಿ ತಾಪಮಾನ ಏರಿಕೆ ವಿಷಯ ಜಾಗತಿಕವಾಗಿ ಆಳುವ ಸರ್ಕಾರಗಳ ಗಮನ ಸೆಳೆಯುತ್ತಿದೆ ಹಾಗೂ ಜನ-ಸಾಮಾನ್ಯರ ಸಾವು-ನೋವುಗಳಿಗೆ ಕಾರಣವಾಗುತ್ತಿದೆ. ಇಂತಹ ಗಂಭೀರ ವಿಷಯವನ್ನು ಕುರಿತು ಸರ್ಕಾರದ ಗಮನ ಸೆಳೆಯುವುದರ ಜೊತೆಗೆ ಜನ-ಸಾಮಾನ್ಯರು ಪಾಲಿಸಬೇಕಾದ ಜಾಗೃತಿ ಅಂಶಗಳ ಕುರಿತು ಇಂದಿನ ಈ ಕಾರ್ಯಾಗಾರ ಬೆಳಕು ಚೆಲ್ಲಿಲಿದೆ.

ಮಾಧ್ಯಮ ಅಕಾಡೆಮಿಯ ಈ ಕಾರ್ಯಾಗಾರದಲ್ಲಿ ಚರ್ಚಿಸುವ ಹಾಗೂ ಮಂಡಿಸಿದ ವಿಷಯಗಳ ಕುರಿತು ಸರ್ಕಾರದ ಮುಂದಿನ ಕ್ರಮಕ್ಕಾಗಿ ವರದಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಮುಖ್ಯ ಭಾಷಣಕಾರರಾಗಿ ಆಗಮಿಸಿದ್ದ ಕರ್ನಾಟಕ ರಾಜ್ಯ ನೈಸರ್ಗಿಕ ವಿಪತ್ತು ನಿರ್ವಹಣಾ ಕೇಂದ್ರದ ನಿರ್ದೇಶಕರಾದ ಎಂ ಎಸ್ ದಿವಾಕರ್ ಅವರು ಮಾತನಾಡಿ ಪರಿಸರ ವೈಪರೀತ್ಯಗಳು ಸಾಮಾನ್ಯವಾಗಿ ಸಂಭವಿಸುತ್ತಲೇ ಇರುತ್ತವೆ. ಪ್ರಸ್ತುತ ತಂತ್ರಜ್ಞಾನ ಹಾಗೂ ಮಾಧ್ಯಮ ಸಂವಹನದ ಪರಿಣಾಮ ಹೆಚ್ಚು ಸುದ್ದಿಯಾಗುತ್ತಿದೆ. ಇತಿಹಾಸ ತೆಗೆದು ನೋಡಿದಾಗ ಹಲವಾರು ದಾಖಲೆಗಳನ್ನು ಗಮನಿಸಬಹುದಾಗಿದೆ ಎಂದರು.

ಅಧ್ಯಯನಗಳ ಪ್ರಕಾರ ಈ ವರ್ಷ ಮಳೆ ಕಡಿಮೆಯಾಗುವುದು ಎಂದು ವರದಿ ಹೇಳುತ್ತದೆ, ಬಿಸಿಲಿನ ತಾಪಮಾನ ಹೆಚ್ಚಾಗಿರುವುದು ತಿಳಿದು ಬಂದಿರುವ ವಿಷಯವಾಗಿರುವುದರಿಂದ ಈಗಾಗಲೇ ಬೆಂಗಳೂರಿನ ಐಐಎಸ್ಸಿ ಸಹಭಾಗಿತ್ವದಲ್ಲಿ ಈ ಬಿಸಿಲು ಸಂದರ್ಭದಲ್ಲಿ ಜನ-ಸಾಮಾನ್ಯರು ಕೈಗೊಳ್ಳಬೇಕಾದ ಕ್ರಮಗಳ ಕುರಿತು ವರದಿ ತಯಾರಿಸಿ ಜನ ಜಾಗೃತಿ ಮೂಡಿಸಲಾಗುತ್ತಿದೆ.

1980 ರಲ್ಲಿಯೇ ಕರ್ನಾಟಕ ಪರಿಸರ ಬದಲಾವಣೆಗಳ ಕುರಿತು ಅಧ್ಯಯನಕ್ಕಾಗಿ ಡಿ ಎಮ್ ಸಿ ಸ್ಥಾಪಿಸುವ ಮೂಲಕ ಭಾರತದಲ್ಲಿಯೇ ಈ ವಿಷಯದಲ್ಲಿ ಮುಂಚೂಣಿಯಲ್ಲಿದೆ. ನಮ್ಮ ರಾಜ್ಯದಲ್ಲಿ ಹೋಬಳಿಗೊಂದರತೆ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಈ ವ್ಯವಸ್ಥೆ ಭಾರತದ ಯಾವುದೇ ರಾಜ್ಯಗಳಲ್ಲಿ ಇಲ್ಲ.

ಬಿಸಿಲಿನ ಕುರಿತು ವರದಿ ಮಾಡುವ ಪತ್ರಕರ್ತರಿಗೆ ಬಿಸಲು ಪೂರ್ಣ ದಿನ ಒಂದೇ ರೀತಿ ಇರುವುದಿಲ್ಲ, ಯಾವುದೋ ಒಂದು ಸಮಯದಲ್ಲಿ ತನ್ನ ಗರಿಷ್ಠ ತಾಪಮಾನ ದಾಖಲಿಸಿ ಕಡಿಮೆಯಾಗುತ್ತದೆ. ಅದೇ ರೀತಿ ಆ ಬಿಸಿಲಿನ ತಾಪಮಾನಕ್ಕೆ ಬಿಸಿಯಾಗುವ ಪರಿಸರ ನಂತರ ಸಂಜೆಯಾದಂತೆ ತಣ್ಣಗಾಗುವಲ್ಲಿ ತೆಗೆದುಕೊಳ್ಳುವ ಸಮಯ ಪ್ರದೇಶದಿಂದ ಪ್ರದೇಶಕ್ಕೆ ವ್ಯತ್ಯಾಸ ಹೊಂದಿರುತ್ತದೆ. ಕೆಲವು ಕಡೆ ಹೆಚ್ಚು ಸಮಯ ತೆಗೆದುಕೊಂಡರೆ ಮತ್ತೊಂದು ಕಡೆ ಕಡಿಮೆ ಸಮಯ ತೆಗೆದುಕೊಳ್ಳುತ್ತದೆ ಅದರ ಆಧಾರದ ಮೇಲೆ ಒಟ್ಟಾರೆ ತಾಪಮಾನವನ್ನು ಅಳೆಯಬೇಕಾಗುತ್ತದೆ ಎಂದು ತಿಳಿಸಿದರು.

ಉದ್ಘಾಟನಾ ಸಮಾರಂಭದ ನಂತರ ಆರಂಭವಾದ ಕಾರ್ಯಾಗಾರದಲ್ಲಿ ಅಸರ್ ಸೋಶಿಯಲ್ ಇಂಪ್ಯಾಕ್ಟ್ ಅಡ್ವೈಸರ್ಸ್ ಸಂಸ್ಥೆಯ ಮುಖ್ಯ ಸಂವಹನಾಧಿಕಾರಿ ಬ್ರಿಕೇಶ್ ಸಿಂಗ್ ಅವರು ಭಾಗವಹಿಸಿ, 'ಕಾರ್ಯಾಗಾರದ ಉದ್ದೇಶ ಮತ್ತು ಪ್ರಸ್ತುತತೆ' ವಿಷಯದ ಕುರಿತು ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಕಾರ್ಯಾಗಾರವು ಪ್ರಸ್ತುತ ಸಾಮಾಜಿಕ ಸನ್ನಿವೇಶದಲ್ಲಿ ಈ ಚರ್ಚೆಯ ಅಗತ್ಯತೆ ಮತ್ತು ಮುಂದಿನ ಗುರಿಗಳ ಬಗ್ಗೆ ಬೆಳಕು ಚೆಲ್ಲಲಿದೆ ಎಂದರು.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ನಿರ್ದೇಶಕರಾದ ಎಂ.ಎಸ್. ದಿವಾಕರ್ ಅವರು ರಾಜ್ಯದಲ್ಲಿ ಶಾಖದ ಅಲೆಗಳ ಮುನ್ಸೂಚನೆ ಮತ್ತು ನಿರ್ವಹಣೆಯ ಬಗ್ಗೆ ದತ್ತಾಂಶ ಸಹಿತ ವಿವರಿಸಿದರು.

ಐಐಹೆಚ್ಎಸ್‌ನ ಹಿರಿಯ ಸಹವರ್ತಿ ಎಸ್. ಸ್ವಾತಿ ಅವರು ಬೆಂಗಳೂರಿನಲ್ಲಿ ಹೆಚ್ಚುತ್ತಿರುವ ಉಷ್ಣಾಂಶದ ಕಾರಣಗಳ ಬೆಂಗಳೂರಿನ ಸ್ಥಿತಿಗತಿ ಬಗ್ಗೆ ಬೆಳಕು ಚೆಲ್ಲಿದರು. ಹೀಟ್ ವಾಚ್ ಸಂಸ್ಥೆಯ ಸ್ಥಾಪಕ ಆಪೇಕ್ಷಿತಾ ವರ್ಷನಯ್ ಅವರು ತೀವ್ರ ಉಷ್ಣಾಂಶದಿಂದ ಬಾಧಿತರಾಗುವ ದುರ್ಬಲ ವರ್ಗಗಳ ಬಗ್ಗೆ ಕಳಕಳಿ ವ್ಯಕ್ತಪಡಿಸಿದರು.

ಬಿಬಿಎಂಪಿಯ ಹವಾಮಾನ ಕ್ರಿಯಾ ಕೋಶದ ಕಾರ್ಯನಿರ್ವಾಹಕ ಇಂಜಿನಿಯರ್ ನಿತ್ಯಾ ಜೆ ಅವರು ಏರುತ್ತಿರುವ ತಾಪಮಾನವನ್ನು ಎದುರಿಸಲು ನಗರವು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

ಬಿಸಿಲಿನ ತಾಪದಿಂದ ತತ್ತರಿಸುತ್ತಿರುವ ಹೊರಾಂಗಣ ಕಾರ್ಮಿಕರೊಂದಿಗೆ 'ಸೊಕ್ರಟಸ್' ಸಂಸ್ಥೆಯ ಭಾರ್ಗವಿ ನಾಗೇಂದ್ರ ಅವರ ನೇತೃತ್ವದಲ್ಲಿ ವಿಶೇಷ ಸಂವಾದ ನಡೆಯಿತು.

ಪ್ರತಿಯೊಂದು ಗೋಷ್ಠಿಯ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಿದ್ದು ವಿಶೇಷವಾಗಿತ್ತು.

ಬುದ್ಧ, ಬಸವ, ಅಂಬೇಡ್ಕರ್ ಸಮಾನತೆ ಸಂದೇಶ ಸಾರಿದ ಮಹಾತ್ಮರು: ಶಾಸಕ ಅಲ್ಲಂಪ್ರಭು ಪಾಟೀಲ

ಕಲಬುರಗಿ,

''ಬುದ್ಧ, ಬಸವ ಹಾಗೂ ಅಂಬೇಡ್ಕರ್ ಮಹಾತ್ಮರು ಮಾನವ ಸಮಾಜಕ್ಕೆ ಸಮಾನತೆಯ ಹಣ್ಣು ತಿನಿಸಿದ ಮಹಾನ್ ವ್ಯಕ್ತಿಗಳು'' ಎಂದು ದಕ್ಷಿಣ ಮತಕ್ಷೇತ್ರದ ಶಾಸಕ ಅಲ್ಲಂಪ್ರಭು ಪಾಟೀಲ ಹೇಳಿದರು.



ನಗರದ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ಬುದ್ಧ, ಬಸವ ಹಾಗೂ ಅಂಬೇಡ್ಕರ್ ಜಯಂತಿ ಅಂಗವಾಗಿ ಸಂವಿಧಾನ ಸಂರಕ್ಷಣಾ ಸಮಿತಿಯ ಸಹಯೋಗದಲ್ಲಿ ಆಯೋಜಿಸಿದ್ದ ವಚನ ಸಾಹಿತ್ಯ, ಸಂವಿಧಾನ, ಮಹಿಳಾ ಸಬಲೀಕರಣ ಮತ್ತು ಸವಾಲುಗಳು ಕುರಿತ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಮಾನವನಿಗೆ ಹುಟ್ಟು ಸಾವು ಸಹಜವಾದರೂ, ಕೆಲವರು ತಮ್ಮ ಆದರ್ಶಗಳು ಮತ್ತು ಸಾಧನೆಗಳ ಮೂಲಕ ಅಮರರಾಗುತ್ತಾರೆ. ಆ ಪಟ್ಟಿಯಲ್ಲಿ ಗೌತಮ ಬುದ್ಧ, ಬಸವಣ್ಣ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಸದಾ ಅಗ್ರಸ್ಥಾನದಲ್ಲಿದ್ದಾರೆ ಎಂದು ಹೇಳಿದರು. ಶಾಕ್ಯ ವಂಶದಲ್ಲಿ ಜನಿಸಿದ ಸಿದ್ಧಾರ್ಥನು ಸಮಾಜದಲ್ಲಿನ ದುಃಖ, ಅಸಮಾನತೆ ಹಾಗೂ ಮಾನವೀಯ ನೋವುಗಳನ್ನು ಕಂಡು 27ನೇ ವಯಸ್ಸಿನಲ್ಲಿ ರಾಜಮನೆತನ ತೊರೆದು ಸತ್ಯಾನ್ವೇಷಣೆಗೆ ಹೊರಟರು. ಕಠಿಣ ತಪಸ್ಸು ಮತ್ತು ಧ್ಯಾನದ ಬಳಿಕ ಜ್ಞಾನೋದಯ ಹೊಂದಿ ಬುದ್ಧರಾದರು. ಆಸೆಯೇ ದುಃಖಕ್ಕೆ ಮೂಲ ಕಾರಣ ಎಂದು ಅಷ್ಟಾಂಗ ಮಾರ್ಗ ಬೋಧಿಸಿ, ಜಾತಿ ತಾರತಮ್ಯ ಹಾಗೂ ಮೂಢನಂಬಿಕೆಗಳ ವಿರುದ್ಧ ಹೋರಾಡಿದರು ಎಂದು ವಿವರಿಸಿದರು.

ಮುಂದೆ 12ನೇ ಶತಮಾನದಲ್ಲಿ ಬಸವಣ್ಣವರು ವಿಶ್ವದ ಪ್ರಥಮ ಪ್ರಜಾಪ್ರಭುತ್ವ ಸಂಸತ್ತಾದ ಅನುಭವ ಮಂಟಪ ಸ್ಥಾಪಿಸಿ, ಶರಣರ ಮೂಲಕ ಸಮಾನತೆ, ಸಹೋದರತೆ ಹಾಗೂ ಜಾತಿ ವ್ಯವಸ್ಥೆ ನಿರ್ಮೂಲನೆಗೆ ಕ್ರಾಂತಿ ನಡೆಸಿದರು. ಮಹಿಳೆಯರು ಮತ್ತು ಹಿಂದುಳಿದ ವರ್ಗಗಳಿಗೆ ಸಾಮಾಜಿಕ ನ್ಯಾಯ ಒದಗಿಸಲು ವಚನ ಸಾಹಿತ್ಯದ ಮೂಲಕ ಜಾಗೃತಿ ಮೂಡಿಸಿದರು ಎಂದು ಹೇಳಿದರು.

ಈ ಸಂದರ್ಭದಲ್ಲಿ ಲೇಖಕಿ ಡಾ. ಜಯದೇವಿ ಗಾಯಕವಾಡ ಅವರು ವಚನ ಸಾಹಿತ್ಯ, ಸಂವಿಧಾನ ಮತ್ತು ಮಹಿಳಾ ಸಬಲೀಕರಣದ ಸವಾಲುಗಳು ವಿಷಯದ ಮೇಲೆ ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಸಂವಿಧಾನ ಸಂರಕ್ಷಣಾ ಸಮಿತಿಯ ಮುಖಂಡರಾದ ಭೀಮರಾವ್ ಟಿಟಿ, ಆರ್.ಜಿ. ಶೇಟ್ಕಾರ ಮಹಾನಗರ ಪಾಲಿಕೆ ಸದಸ್ಯೆ ಲತಾ ರಾಥೋಡ್, ಕಾಲೇಜು ಸುಧಾರಣಾ ಸಮಿತಿ ಸದಸ್ಯರಾದ ಲಾಲ ಅಹ್ಮದ್ ಸೇಟ್, ಅಶೋಕ ವೀರನಾಯಕ, ಮಾನವ ಬಂಧುತ್ವ ವೇದಿಕೆಯ ನಾಗೇಂದ್ರ ಜವಳಿ, ಎದ್ದೇಳು ಕರ್ನಾಟಕದ ಮೈಲಾರಿ ದೊಡ್ಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಕಾಲೇಜಿನ ಪ್ರಾಂಶುಪಾಲರಾದ ಡಾ. ಪ್ರಕಾಶ್ ಮೋರಗೆ ಅಧ್ಯಕ್ಷತೆ ವಹಿಸಿದ್ದರು. ಡಾ. ಪದ್ಮಾವತಿ ಧನಿ ಪ್ರಾಸ್ತಾವಿಕವಾಗಿ ಮಾತನಾಡಿ, ಡಾ. ಭಾಗ್ಯ ಜ್ಯೋತಿ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಡಾ. ಪ್ರಿಯದರ್ಶಿನಿ ಸ್ವಾಗತಿಸಿ, ಸುನೀಲ ಮಾರುತಿ ಮಾನಪಡೆ ವಂದನಾರ್ಪಣೆ ಮಾಡಿದರು.

ಎಲ್ಲಾ ಭಾಗ್ಯಗಳಲ್ಲಿ ಆರೋಗ್ಯ ಭಾಗ್ಯ ಪ್ರಮುಖ : ಕಾಶಿನಾಥ

ಚಿತ್ತಾಪುರ,

ಪಟ್ಟಣದ ರೇವಣಸಿದ್ದಪ್ಪ ಕಾಂತಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ತಾಲೂಕು ಆಸ್ಪತ್ರೆ, ಚಿತ್ತಾಪುರ, ರಾಷ್ಟ್ರೀಯ ಸೇವಾ ಯೋಜನೆ ಹಾಗೂ ಭಾರತೀಯ ರೆಡ್ ಕ್ರಾಸ್ ಸಂಯುಕ್ತಾಶ್ರಯದಲ್ಲಿ 2025-26ನೇ ಶೈಕ್ಷಣಿಕ ಸಾಲಿನ ಒಂದು ದಿನದ ಉಚಿತ ಆರೋಗ್ಯ ತಪಾಸಣಾ ಶಿಬಿರ ನಡೆಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಹಿರಿಯ ಪತ್ರಕರ್ತ ಕಾಶಿನಾಥ, ಎಲ್ಲಾ ಭಾಗ್ಯಗಳಲ್ಲಿ ಆರೋಗ್ಯ ಭಾಗ್ಯವೇ ಅತ್ಯಂತ ಮುಖ್ಯವಾಗಿದೆ ಎಂದು ಹೇಳಿದರು.



ಆರೋಗ್ಯಯುತ ಸಮಾಜ ನಿರ್ಮಾಣವಾಗಬೇಕಾದರೆ ಅದು ಯುವಕ-ಯುವತಿಯರ ಕೈಯಲ್ಲಿದೆ. ಇಂದಿನ ಯುವಕರು ದುಶ್ಚಟಗಳಿಗೆ ಬಲಿಯಾಗಿ ತಮ್ಮ ಆರೋಗ್ಯವನ್ನು ತಾವೇ ಹಾಳು ಮಾಡಿಕೊಳ್ಳುತ್ತಿದ್ದಾರೆ. ದೇವಸ್ಥಾನಗಳು, ಆಸ್ಪತ್ರೆಗಳು ಜನರಿಂದ ತುಂಬಿ ತುಳುಕುತ್ತಿದ್ದು, ಪೊಲೀಸ್ ಠಾಣೆಗಳ ಸಂಖ್ಯೆಯೂ ಹೆಚ್ಚುತ್ತಿರುವುದು ಸಮಾಜದ ದುರಂತ ಎಂದು ವಿಷಾದಿಸಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ದಂತ ಆರೋಗ್ಯ ಅಧಿಕಾರಿ ಡಾ. ಖನಿಜ್ ಫಾತಿಮಾ ಮಾತನಾಡಿ, ಜೀವನ ಶೈಲಿ ಹೇಗಿದೆಯೋ ಆರೋಗ್ಯವೂ ಹಾಗೆಯೇ ಇರುತ್ತದೆ. ವಿಶೇಷವಾಗಿ ಯುವಕರು ಆರೋಗ್ಯದ ಕಡೆ ಹೆಚ್ಚಿನ ಗಮನ ಹರಿಸಬೇಕು, ಹಲ್ಲಿನ ಸುರಕ್ಷತೆ ಕಾಪಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸರ್ಕಾರಿ ಆಸ್ಪತ್ರೆಯ ಆಪ್ತ ಸಮಾಲೋಚಕಿ ಸುಜ್ಞಾನಿ ಪಾಟೀಲ್ ಮಾತನಾಡಿ, ಇಂದಿನ ಯುವಕರೇ ಮುಂದಿನ ಪ್ರಜೆಗಳು. ವಿಶೇಷವಾಗಿ ಎಚ್ಐವಿ ಸೋಂಕಿನ ಬಗ್ಗೆ ಜಾಗೃತಿ ಅಗತ್ಯ ಎಂದು ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ಮಲ್ಲಿಕಾರ್ಜುನ ಬಿರಾದಾರ್ ಮಾತನಾಡಿ, ಆರೋಗ್ಯವೇ ಭಾಗ್ಯ ಎಂಬ ಸಂದೇಶವನ್ನು ಅರಿತು ಯುವಜನತೆ ಬದುಕಬೇಕು. ದೇವರು ನೀಡಿದ ಉತ್ತಮ ಆರೋಗ್ಯವನ್ನು ಹಾಳು ಮಾಡಿಕೊಳ್ಳಬಾರದು ಎಂದು ಕರೆ ನೀಡಿದರು.

ಎನ್ನೆಸ್ಸೆಸ್ ಅಧಿಕಾರಿಗಳಾದ ಡಾ. ಶಶಿಧರ್ ಯಡ್ರಾಮಿ, ಆಸ್ಮಾ ನಿಖತ್, ಪ್ರಾಧ್ಯಾಪಕರಾದ ಪ್ರೊ.ಮಲ್ಲಪ್ಪ ಮಾನೇಗಾರ್, ಶರಣಬಸಪ್ಪ ರಾಯ್ಕೋಟಿ, ರೋಹಿಣಿ ಕಲ್ಮಟ್, ನಾಗವೇಣಿ, ಲಕ್ಷ್ಮೀಪುತ್ರ ಪಾಸೋಡಿ, ಕೈಲಾಸಪತಿ ವಿಶ್ವಕರ್ಮ, ಶರಣಪ್ಪ ದಿಗ್ಗಾಂವ, ಮರೇಪ್ಪ ಮೇತ್ರೆ, ಶ್ರೀಕಾಂತ್, ಅಭಿಷೇಕ್, ವಿಜಯಲಕ್ಷ್ಮೀ ರಾಠೋಡ, ಮಂಜುನಾಥ ದೇಶಪಾಂಡೆ, ಆಸ್ಪತ್ರೆಯ ನಿಜಾಮುದ್ದೀನ್, ಗುರುರಾಜ್ ಮುಗುಳಿ, ಪತ್ರಕರ್ತ ಸಂತೋಷಕುಮಾರ ಕಟ್ಟಿಮನಿ ಸೇರಿದಂತೆ ಸಿಬ್ಬಂದಿಗಳು, ವಿದ್ಯಾರ್ಥಿಗಳು ಇದ್ದರು.

ಎನ್ನೆಸ್ಸೆಸ್ ಅಧಿಕಾರಿ ಡಾ.ಸಂಗಪ್ಪ ಮಾಮನಶೆಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ.ಸುಗುರೇಶ್ವರ ಆರ್ ಮಠಪತಿ ಸ್ವಾಗತಿಸಿದರು, ಮಲ್ಲಪ್ಪ ತೊಟ್ನಳ್ಳಿ ನಿರೂಪಿಸಿದರು, ಡಾ.ವಿಲಾಸ್ ವಂದಿಸಿದರು.

ನಂತರ ಆರೋಗ್ಯ ತಪಾಸಣೆ ನಡೆಯಿತು. ವಿದ್ಯಾರ್ಥಿಗಳು ಶಿಬಿರದ ಸಂಪೂರ್ಣ ಸದುಪಯೋಗ ಪಡಿಸಿಕೊಂಡರು.

ನೇರ ವೇತನ ಪಾವತಿ ವ್ಯವಸ್ಥೆ ಅಳವಡಿಸಲು ಆಗ್ರಹ

ಕಲಬುರಗಿ,ಏ.30-

ಬಾಕಿ ಇರುವ ಸಂಬಳವನ್ನು ತಕ್ಷಣ ಬಿಡುಗಡೆ ಮಾಡಬೇಕು ಹಾಗೂ ನೇರ ವೇತನ ಪಾವತಿ ವ್ಯವಸ್ಥೆ ಜಾರಿಗೊಳಿಸಬೇಕು ಎಂದು ಆಗ್ರಹಿಸಿ ಗುಲ್ಬರ್ಗಾ ವಿಶ್ವವಿದ್ಯಾಲಯ ಹೊರಗುತ್ತಿಗೆ ನೌಕರರ ಸಂಘದ ಸದಸ್ಯರು ಬುಧವಾರ ವಿವಿ ಕಾರ್ಯಸೌಧ ಎದುರು ಧರಣಿ ಸತ್ಯಾಗ್ರಹ ಆರಂಭಿಸಿದರು.



2026ರ ಎರಡು ತಿಂಗಳ ಬಾಕಿ ವೇತನವನ್ನು ಕೂಡಲೇ ಪಾವತಿಸಬೇಕು. ಪ್ರತಿ ತಿಂಗಳು 7ನೇ ತಾರೀಖಿನೊಳಗೆ ಕಡ್ಡಾಯವಾಗಿ ಸಂಬಳ ನೀಡಬೇಕು. ಕಾರ್ಮಿಕ ಇಲಾಖೆಯ ಆದೇಶದಂತೆ 2025-26 ಮತ್ತು 2026-27ನೇ ಸಾಲಿನ ತುಟ್ಟಿಭತ್ಯೆಯನ್ನು ವೇತನದೊಂದಿಗೆ ಸೇರಿಸಿ ಪಾವತಿಸಬೇಕು ಎಂದು ನೌಕರರು ಒತ್ತಾಯಿಸಿದರು.

ವಿಶ್ವವಿದ್ಯಾಲಯದ ವಿವಿಧ ವಿಭಾಗಗಳಲ್ಲಿ ಸುಮಾರು 281 ಮಂದಿ ಹೊರಗುತ್ತಿಗೆ ನೌಕರರು ದಶಕಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ. ಕಾಯಂ ನೌಕರರಷ್ಟೇ ಜವಾಬ್ದಾರಿಯಿಂದ ಕೆಲಸ ನಿರ್ವಹಿಸುತ್ತಿದ್ದರೂ ಉದ್ಯೋಗ ಭದ್ರತೆ ಇಲ್ಲದೆ ಕಡಿಮೆ ವೇತನಕ್ಕೆ ಕೆಲಸ ಮಾಡುತ್ತಿರುವುದಾಗಿ ಅವರು ಅಸಮಾಧಾನ ವ್ಯಕ್ತಪಡಿಸಿದರು.

ರಾಜ್ಯದ ಇತರ ವಿಶ್ವವಿದ್ಯಾಲಯಗಳಲ್ಲಿ ಹೊರಗುತ್ತಿಗೆ ನೌಕರರಿಗೆ ನೇರ ವೇತನ ಪಾವತಿ ವ್ಯವಸ್ಥೆ ಜಾರಿಯಲ್ಲಿದ್ದು, ಅದೇ ಮಾದರಿಯನ್ನು ಇಲ್ಲಿ ಕೂಡ ಅನುಷ್ಠಾನಗೊಳಿಸಬೇಕು ಎಂದು ಆಗ್ರಹಿಸಿದರು. ಹಲವು ವರ್ಷಗಳಿಂದ ಮನವಿ ಸಲ್ಲಿಸಿದ್ದರೂ ಆಡಳಿತ ಮಂಡಳಿ ಸ್ಪಂದಿಸಿಲ್ಲ ಎಂದು ದೂರಿದರು.

ಕುಲಪತಿ ಹೇಳಿಕೆಗೆ ಆಕ್ರೋಶ :

ವಿಶ್ವವಿದ್ಯಾಲಯದ ಹೊಸ ಕುಲಪತಿ ಪ್ರೊ. ಉಡಿಕೇರಿ ಅವರು, ''ಹೊರಗುತ್ತಿಗೆ ಸಿಬ್ಬಂದಿ ನಮ್ಮವರಲ್ಲ, ಗುತ್ತಿಗೆ ಸಂಸ್ಥೆಯವರೇ'' ಎಂದು ಹೇಳಿರುವುದಕ್ಕೆ ನೌಕರರು ತೀವ್ರ ಅಸಮಾಧಾನ

ವ್ಯಕ್ತಪಡಿಸಿದರು. ನೇಮಕಾತಿ ಆದೇಶದ ಪ್ರಕಾರ ತಾವು ವಿಶ್ವವಿದ್ಯಾಲಯದಲ್ಲೇ ಸೇವೆ ಸಲ್ಲಿಸುತ್ತಿದ್ದೇವೆ. ಹಿಂದಿನ ಕುಲಪತಿಗಳ ಅವಧಿಯಲ್ಲಿ ಇಂತಹ ಸಮಸ್ಯೆ ಎದುರಾಗಿರಲಿಲ್ಲ. ಈಗ ಮಾತ್ರ ಏಕೆ ಈ ರೀತಿಯ ನಿರ್ಲಕ್ಷ್ಯ ಎಂಬ ಪ್ರಶ್ನೆ ಎತ್ತಿದರು.

ಧರಣಿಯಲ್ಲಿ ನೌಕರರ ಸಂಘದ ಅಧ್ಯಕ್ಷ ಶೀಲಪ್ರಕಾಶ ದೊಡ್ಡಮನಿ, ಗೌರವ ಅಧ್ಯಕ್ಷ ವಿಜಯಕುಮಾರ ಕೆಂಗಲ, ಕಾರ್ಯದರ್ಶಿ ಚಂದ್ರಶಾ ಎಂ.ಎಸ್., ವಿಜಯ ಕೆಂಗಾಲ, ಅಂಬುಜಾ ಕದಂ, ಸವಿತಾ ಮಹೇಶ್ವರಿ, ನಾಗರಾಜ್ ಟೆಂಗಳಿ, ಸೇರಿದಂತೆ ಇತರೆ ನೌಕರರು ಇದ್ದರು.

ಜಿಲ್ಲಾಧಿಕಾರಿ ಕಚೇರಿ ಎದುರು ಹಿಂಸಾತ್ಮಕ ಪ್ರತಿಭಟನೆ : 28 ಮಂದಿ ವಿರುದ್ಧ ಪ್ರಕರಣ ದಾಖಲು

ಕಲಬುರಗಿ,ಏ.30-

ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ನಡೆದ ತಳವಾರ ಎಸ್‌ಟಿ ಮೀಸಲಾತಿ ಪ್ರತಿಭಟನೆ ಹಿಂಸಾತ್ಮಕ ಸ್ವರೂಪ ಪಡೆದ ಹಿನ್ನೆಲೆ, ಪ್ರಮುಖ ನಾಯಕರು ಸೇರಿದಂತೆ ಒಟ್ಟು 28 ಮಂದಿಯ ವಿರುದ್ಧ ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಏ.27ರಂದು ಜಿಲ್ಲಾಧಿಕಾರಿ ಕಚೇರಿ ಮುಂಭಾಗ ನಡೆದ ಪ್ರತಿಭಟನೆಯಲ್ಲಿ ಸಾರ್ವಜನಿಕ ಶಾಂತಿಗೆ ಭಂಗ ತಂದಿರುವ ಗಂಭೀರ ಆರೋಪಗಳು

ಕೇಳಿಬಂದಿವೆ. ಪ್ರತಿಭಟನಾಕಾರರು ಯಾವುದೇ ಪೂರ್ವಾನುಮತಿ ಪಡೆಯದೇ ಅಕ್ರಮವಾಗಿ ಗುಂಪುಗೂಡಿದ್ದು, ಬಳಿಕ ಪ್ರತಿಭಟನೆ ತೀವ್ರಗೊಂಡು ಪೊಲೀಸರು ಅಳವಡಿಸಿದ್ದ ಬ್ಯಾರಿಕೇಡ್‌ಗಳನ್ನು ಕಿತ್ತೆಸೆದು ಒಳನುಗ್ಗಲು ಯತ್ನಿಸಿದ್ದಾರೆ ಎನ್ನಲಾಗಿದೆ.

ಈ ವೇಳೆ ಗಾಯಾಳುಗಳನ್ನು ಸಾಗಿಸುತ್ತಿದ್ದ ಆ್ಯಂಬುಲೆನ್ಸ್ ಮೇಲೆಯೂ ಕಲ್ಲು ತೂರಾಟ ನಡೆಸಿ ಸಾರ್ವಜನಿಕ ಆಸ್ತಿಪಾಸ್ತಿಗೆ ಹಾನಿ ಉಂಟುಮಾಡಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಪ್ರಕರಣ ಸಂಬಂಧ ತಳವಾರ ಸಮಾಜದ ರಾಜ್ಯಾಧ್ಯಕ್ಷ ಸರ್ದಾರ್ ರಾಯಪ್ಪ, ಜೆಡಿಎಸ್ ಮುಖಂಡ ಶಿವಕುಮಾರ್ ನಾಟಿಕಾರ್, ಬಿಜೆಪಿ ಮುಖಂಡ ಅವ್ವಣ್ಣ ಮ್ಯಾಕೇರಿ ಸೇರಿದಂತೆ 28 ಮಂದಿಯ ವಿರುದ್ಧ ಅಕ್ರಮ ಕೂಟ ರಚನೆ, ಸಾರ್ವಜನಿಕ ಕರ್ತವ್ಯಕ್ಕೆ ಅಡ್ಡಿ ಹಾಗೂ ಆಸ್ತಿ ಹಾನಿ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದೆ.

ಘಟನೆಯನ್ನು ಜಿಲ್ಲಾಡಳಿತ ಗಂಭೀರವಾಗಿ ಪರಿಗಣಿಸಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

ಒಂದನೇಯ ಪುಟದಿಂದ

ಮಿಷನ್ ಏಡ್ಸ್ ಸುರಕ್ಷಾ ಅಭಿಯಾನ
ಪರಿಣಾಮಕಾರಿ ಅನುಷ್ಠಾನಗೊಳಿಸಿ: ಜಿಲ್ಲಾಧಿಕಾರಿ ನಿತೀಶ್ ಕೆ

ಹ್ಯಾಂಡ್‌ಹೆಲ್ಡ್ ಎಕ್ಸ್‌ರೇ ಮಿಷಿನ್, ಮುಂತಾದವುಗಳಿದ ಪರೀಕ್ಷಿಸಿ, ಸೋಂಕು ಖಚಿತವಾದಲ್ಲಿ ಉಚಿತ ಚಿಕಿತ್ಸೆ ಯನ್ನು ನೀಡಿ ಗುಣಪಡಿಸಲು, ಅರ್ಹ ವ್ಯಕ್ತಿಗಳಿಗೆ ನಿಕ್ಷಯ್ ಮಿತ್ರ ಅಡಿ ದಾನಿಗಳಿಂದ ಪೌಷ್ಟಿಕ ಆಹಾರ ಒದಗಿಸಲು ಜಿಲ್ಲಾಧಿಕಾರಿಗಳು ಸೂಚಿಸಿದರು.

2030ರ ಒಳಗೆ ಕ್ಷಯರೋಗ ಮುಕ್ತ ಭಾರತದ ಗುರಿ ತಲುಪಲು ಕಂದಾಯ ಇಲಾಖೆ, ಗ್ರಾಮ ಪಂಚಾಯತ, ಸ್ಥಳೀಯ ಸಂಸ್ಥೆಗಳ, ವಿವಿಧ ಇಲಾಖೆಗಳ ಸಹಕಾರ ಪಡೆದು ಯಶಸ್ವಿಗೊಳಿಸಲು ಸೂಚಿಸಿದರು.

ಗುಣಮಟ್ಟದದಿಂದ ಹೆರಿಗೆ ನಿರ್ವಹಣೆ: ಜಿಲ್ಲೆಯ ಎಲ್ಲ ಆಸ್ಪತ್ರೆಗಳಲ್ಲಿನ ಸಂಪನ್ಮೂಲಗಳ ಬಳಕೆಯಿಂದ ಗುಣಮಟ್ಟದ ಸೇವೆ ನೀಡುತ್ತಿರುವುದು ಆಶಾದಾಯಕವಾಗಿದ್ದು, ಯಾವುದೇ ಪರಿಕರ, ಉಪಕರಣಗಳ ಅಗತ್ಯತೆವಿದ್ದರೆ ನಿಯಮಾನುಸಾರ ಬೇಡಿಕೆ ಸಲ್ಲಿಸುವಂತೆ ಸಂಬಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು, ಜಿಲ್ಲಾ ಶಸ್ತ ಚಿಕಿತ್ಸ ಕ ಡಾ.ವಿಜಯ ಶಂಕರ, ಡಿಪಿಡಿಓ ಡಾ.ಚಂದ್ರಶೇಖರಯ್ಯ ಸ್ವಾಮಿ, ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್., ಡಿಎಸ್‌ಓ ಡಾ.ಗಣೇಶ್ ಕೆ, ಡಿಟಿಓ ಡಾ.ಮಹಮ್ಮದ್ ಶಾಕೀರ್ ಮೊಹಿಯುದ್ದೀನ್, ಪರಿಸರ ಇಲಾಖೆ ಅಧಿಕಾರಿ, ಸಹಾಯಕ ಔಷಧ ನಿಯಂತ್ರಕರು ಸೇರಿದಂತೆ ಜಿಲ್ಲೆಯ ಎಲ್ಲ ತಾಲೂಕಾ ಆರೋಗ್ಯಾಧಿಕಾರಿಗಳು, ಸಾರ್ವಜನಿಕ ಆಸ್ಪತ್ರೆ, ತಾಯಿ ಮಕ್ಕಳ ಆಸ್ಪತ್ರೆಯ ಮುಖ್ಯ ಆಡಳಿತ ವೈದ್ಯಾಧಿಕಾರಿಗಳು, ಡಿಹೆಚ್‌ಇಓ, ಡಿಪಿಎಮ್, ಡಿಡಿಎಮ್, ಎನ್‌ಕ್ಯೂಎಎಸ್, ಆರ್‌ಕೆಎಸ್‌ಕೆ ಸಲಹೆಗಾರರು ಹಾಗೂ ಹೆಚ್‌ಐವಿ ಏಡ್ಸ್ ನಿರ್ಮೂಲನೆಗೆ ಕೆಲಸ ಮಾಡುತ್ತಿರುವ ಸಂಘಟನೆಗಳ ಪದಾಧಿಕಾರಿಗಳು, ಡ್ಯಾಪ್ಕೋ ಸಿಬ್ಬಂದಿಗಳು ಇದ್ದರು.

ಕೆ.ಪಿ.ಎಸ್.ಸಿ ಗೆಜೆಟೆಡ್ ಪ್ರೋಬೇಷನರಿ ವ್ಯಕ್ತಿತ್ವ ಪರೀಕ್ಷೆಗೆ
ಅರ್ಹತೆ ಪಡೆದ ಅಭ್ಯರ್ಥಿಗಳಿಗಾಗಿ ಅಣುಕು ವ್ಯಕ್ತಿತ್ವ ಪರೀಕ್ಷೆ ಆಯೋಜನೆ

ನೋಂದಣಿ ಸಂಖ್ಯೆ, ಸಂಪರ್ಕ ಸಂಖ್ಯೆ ಹಾಗೂ ಮುಖ್ಯ ಪರೀಕ್ಷೆಯ ವಿವರಗಳನ್ನು ಜಿಲ್ಲಾಡಳಿತದ ಸೂಚನೆಯಂತೆ ಮುಂಚಿತವಾಗಿ ನೋಂದಾಯಿಸಿಕೊಳ್ಳುವುದು ಕಡ್ಡಾಯವಾಗಿದೆ.

ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಕಾರ್ಯಕ್ರಮ ಆಯೋಜನಾ ಅಧಿಕಾರಿಗಳಾದ ಮಹಮ್ಮದ್ ಯೂಸೂಫ್, ಯೋಜನಾ ನಿರ್ದೇಶಕರು ಸಿಯೋಲ್ ಇವರ ಮೊಬೈಲ್ ಸಂಖ್ಯೆ: 9964012161ಗೆ ಸಂಪರ್ಕ ಮಾಡಬಹುದಾಗಿದೆ. ಕಾರ್ಯಕ್ರಮದ ದಿನಾಂಕ ಹಾಗೂ ಸ್ಥಳವನ್ನು ಶೀಘ್ರದಲ್ಲೇ ಪ್ರತ್ಯೇಕವಾಗಿ ಪ್ರಕಟಿಸಲಾಗುವುದು.

ಜಿಲ್ಲೆಯ ಸ್ಪರ್ಧಾತ್ಮಕ ಪರೀಕ್ಷಾ ಅಭ್ಯರ್ಥಿಗಳು ಈ ಅಪರೂಪದ ಅವಕಾಶವನ್ನು ಸದುಪಯೋಗಪಡಿಸಿಕೊಂಡು ವ್ಯಕ್ತಿತ್ವ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡುವಂತೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸರಕಾರಿ ಆಸ್ಪತ್ರೆಯಲ್ಲಿ ಪತ್ನಿಗೆ ಹೆರಿಗೆ ಮಾಡಿಸಿ, ಸರಳತೆ ಮೆರದ ಜಿ.ಪಂ ಸಿಇಒ

ಅರೋಗ್ಯವಾಗಿದ್ದಾರೆ.

ಸರಕಾರದ ಸೌಲಭ್ಯ ಪ್ರತಿಯೊಬ್ಬರು ಪಡೆಯಿರಿ: ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ ಕಾಂದೂ ಅವರು ಮಾತನಾಡಿ, ಸರಕಾರವು ಗ್ರಾಮೀಣ ಪ್ರದೇಶ ಸೇರಿದಂತೆ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ತಾಯಿ ಮಗುವಿನ ಆರೈಕೆಗಾಗಿ ನುರಿತ ಹೆರಿಗೆ ತಜ್ಞರು, ಸುಸಜ್ಜಿತ ಹೆರಿಗೆ ಕೊಠಡಿ, ಆಧುನಿಕ ಪರಿಕರಗಳು, ಸೂಕ್ತ ಪ್ರಯೋಗಾಲಯ ಪರೀಕ್ಷೆಗಳು, ಸಕಾಲದಲ್ಲಿ ಔಷಧೋಪಚಾರ, ಪೌಷ್ಟಿಕ ಆಹಾರ ಒದಗಿಸುವುದನ್ನು ಖುದ್ದು ಪರಿಶೀಲನೆಯಲ್ಲಿ ಕಂಡು ಬರುತ್ತಿರುವುದರಿಂದ ಸರಕಾರದ ಸೌಲಭ್ಯಗಳು ಜನ ಸಾಮಾನ್ಯರು ಪಡೆಯಬೇಕು. ತಾಯಿ ಮಕ್ಕಳ ಆಸ್ಪತ್ರೆ ಅಥವಾ ರಿಮ್ಸ್ ಆಸ್ಪತ್ರೆಯಲ್ಲಿ ಹೆರಿಗೆ ಮಾಡಿಸುವ ನಿರ್ಧಾರ ಕೈಗೊಂಡಿದ್ದು, ರಿಮ್ಸ್‌ನಲ್ಲಿ ಹೆರಿಗೆಯಾಗಿದ್ದು, ಪ್ರಸ್ತುತ ಮುಂದಿನ ಆರೈಕೆಗೆ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಆರೈಕೆ ಪಡೆಯುತ್ತಿದ್ದಾರೆ. ಇದು ವೈಯಕ್ತಿಕವಾಗಿ ನಮಗೆ ಹೆಮ್ಮೆಯ ವಿಷಯವಾಗಿದೆ ಎಂದರು.

ಹೇಮರೆಡ್ಡಿ ಮಲ್ಲಮ್ಮ ಜಯಂತಿ ಪೂರ್ವಭಾವಿ ಸಭೆ
ಅರ್ಥಪೂರ್ಣ ಆಚರಣೆ ಅಗತ್ಯ ಸಿದ್ಧತೆ ಮಾಡಿಕೊಳ್ಳಿ: ಎಡಿಸಿ


ಆಚರಣೆ ನಡೆಯಬೇಕು. ಶಿಷ್ಟಾಚಾರ ಅನುಸಾರ ಆಮಂತ್ರಣ ಪತ್ರಿಕೆ ಮುದ್ರಿಸಿ ವಿತರಿಸಬೇಕು. ಜಯಂತಿಗೆ ಆಗಮಿಸುವ ಜನತೆಗೆ ಕುಡಿಯುವ ನೀರು, ಉಪಹಾರ, ಆಸನದ ವ್ಯವಸ್ಥೆ ಮಾಡಬೇಕು ಎಂದು ಸಂಬಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ರೆಡ್ಡಿ ಸಮಾಜದ ಜಿಲ್ಲಾಧ್ಯಕ್ಷರಾದ ಡಾ.ಬಸನಗೌಡ, ತಾಲೂಕು ಅಧ್ಯಕ್ಷರಾದ ರಾಮನಗೌಡ ಏಗನೂರು, ಚಂದ್ರಶೇಖರ ಮಿರ್ಜಾಪುರ, ವಸಂತ ರೆಡ್ಡಿ, ನವೀನ್ ಕುಮಾರ್, ವಿರುಪಣ್ಣ ಚೌಧರಿ, ಜಿ.ಎಸ್.ರಾಮನಗೌಡ, ಸುರೇಶ, ಪರಮೇಶ್ವರ ಸೇರಿದಂತೆ ಇತರರು ಇದ್ದರು.

ಬಲಾಢ್ಯರಿಗೆ ಕಾನೂನು ನಿಯಮ ಪ್ರಯೋಗಿಸದೆ ಬಡ ಬೀದಿ ಬದಿ ವ್ಯಾಪಾರಿಗಳ ಮೇಲೆ ದೌರ್ಜನ್ಯ!

ಸಿಂಧನೂರು: ನಗರದ ಗಂಗಾವತಿ ರಸ್ತೆಯ ತೋಟಗಾರಿಕೆ ಇಲಾಖೆಯ ಕಾಂಪೌಂಡ್ ಗೆ ಹೊಂದಿಕೊಂಡು ಇಟ್ಟಿರುವ ಡಬ್ಬಾ ಅಂಗಡಿಗಳನ್ನು ಪೊಲೀಸ್ ಬಂದೋಬಸ್ತನೊಂದಿಗೆ ಮಂಗಳವಾರ ಬೆಳಿಗ್ಗೆ ತೆರವುಗೊಳಿಸಲು ಮುಂದಾದ ವೇಳೆ ಬೀದಿ ಬದಿ ವ್ಯಾಪಾರಿಗಳು, ಮುಖಂಡರು, ಹಾಗೂ ಇಲಾಖೆಯ ಅಧಿಕಾರಿಗಳ ಮಧ್ಯೆ ವಾಗ್ವಾದ ನಡೆಯಿತು.





ತೋಟಗಾರಿಕೆ ಇಲಾಖೆಯ ಜಮೀನನ್ನು ಅತಿಕ್ರಮಿಸಿರುವ ಬಲಾಢ್ಯರ ಮೇಲೆ ಕಾನೂನು ನಿಯಮ ಪ್ರಯೋಗಿಸದೇ ಬಡಪಾಯಿ ಬೀದಿ ಬದಿ ವ್ಯಾಪಾರಿಗಳ ಮೇಲೆ ದೌರ್ಜನ್ಯ ನಡೆಸುವುದು ಎಷ್ಟು ಸರಿ? ಇದು ಸರಿಯಲ್ಲ. ಬೀದಿ ಬದಿ ವ್ಯಾಪಾರಿಗಳನ್ನು ಈ ಹಿಂದೆ ಏಕಾಏಕಿ ಜಿಲ್ಲಾಡಳಿತ, ತಾಲೂಕಾಡಳಿತ, ಸೇರಿ, ಒಕ್ಕಲೆಬ್ಬಿಸಿದ್ದರಿಂದ ಅವರೆಲ್ಲ ಬೀದಿ ಪಾಲಾಗಿ ನಿರುದ್ಯೋಗಿಗಳಾಗಿದ್ದು, ಜೀವನ ನಿರ್ವಹಣೆಗೆ ಪಡಿಪಾಟಲು ಅನುಭವಿಸುತ್ತಿದ್ದಾರೆ. ಕಾನೂನಿನ ನೆಪದಲ್ಲಿ ಜೀವನೋಪಾಯಕ್ಕಾಗಿ ಸಣ್ಣಪುಟ್ಟ ಡಬ್ಬಾ ಅಂಗಡಿಗಳನ್ನಿಟ್ಟುಕೊಂಡು ಹೊಟ್ಟೆ ತುಂಬಿಸಿಕೊಳ್ಳಲು ಬಿಡದೇ ಬಡವರು ಬದುಕುವ ಹಕ್ಕನ್ನೇ ಕಿತ್ತುಕೊಳ್ಳುವ ಹುನ್ನಾರ ನಡೆದಿದೆ ಇದು ಯಾವ ನ್ಯಾಯ ? ಎಂದು ಸಣ್ಣ ಪುಟ್ಟ ಬೀದಿ ಬದಿ ವ್ಯಾಪಾರಸ್ಥರು ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಈಗಾಗಲೇ ತೋಟಗಾರಿಕೆ ಇಲಾಖೆಗೆ ಹತ್ತಾರು ಬಾರಿ ಮನವಿಪತ್ರ, ಅರ್ಜಿಗಳನ್ನು ನೀಡಿ, ಇಲಾಖೆಯ ವ್ಯಾಪ್ತಿಯಲ್ಲಿರುವ ಜಮೀನಿನ ಹದ್ದುಬಸ್ತ್ ಗುರುತಿಸುವಂತೆ ಒತ್ತಾಯಿಸಲಾಗಿದೆ. ಆದರೂ ಇಲ್ಲಿಯವರೆಗೂ ಹದ್ದುಬಸ್ತ್ ಗುರುತಿಸಿಲ್ಲ. ದಕ್ಷಿಣ ಮತ್ತು ಪಶ್ಚಿಮ ದಿಕ್ಕಿನಲ್ಲಿ ಬಲಾಢ್ಯರು ಜಮೀನನ್ನು ಅತಿಕ್ರಮಿಸಿದರೂ ತೋಟಗಾರಿಕೆ ಇಲಾಖೆ ಸೇರಿದಂತೆ ಜಿಲ್ಲಾಡಳಿತ ತಾಲೂಕಾಡಳಿತ ಸುಮ್ಮನೆ ಕುಳಿತಿದೆ.

ಆದರೆ ಬಡ ವ್ಯಾಪಾರಿಗಳ ಮೇಲೆ ಬಲಪ್ರಯೋಗಿಸುವ ಕೆಲಸ ನಡೆಯುತ್ತಿದೆ. ಶಾಸಕರು, ಜಿಲ್ಲಾಧಿಕಾರಿ ಗಳು ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳ ಸಭೆ ಕರೆದು ಚರ್ಚಿಸಿ ತೀರ್ಮಾನ ತೆಗೆದುಕೊಳ್ಳುವಂತೆ ಈಗಾಗಲೇ ಮನವಿ ಮಾಡಿಕೊಂಡಿದ್ದರೂ ಸಹ ಡಬ್ಬಾ ಅಂಗಡಿಗಳನ್ನು ದೌರ್ಜನ್ಯ ಮತ್ತು ದಬ್ಬಾಳಿಕೆಯಿಂದ ತೆರವುಗೊಳಿಸಲು ಮುಂದಾಗುವುದು ಸರಿಯಲ್ಲ.

ಕೂಡಲೇ ಇದನ್ನು ಕೈಬಿಡಬೇಕು ಒಂದು ವೇಳೆ ದೌರ್ಜನ್ಯಕ್ಕೆ ಮುಂದಾದರೆ, ನಮ್ಮ ಹೋರಾಟ ತೀವ್ರಗೊಳಿಸಬೇಕಾಗುತ್ತದೆ. ನಮ್ಮ ಪ್ರಾಣದ ಮೇಲೆ ನೀವು ತೆರವು ಕಾರ್ಯ ನಡೆಸಿ ಎಂದು ಡಿ.ಎಚ್.ಪೂಜಾರ್ ಆಕ್ರೋಶ ವ್ಯಕ್ತಪಡಿಸಿದರು.

ಶಹರ ಪೊಲೀಸ್ ಠಾಣೆಯ ಪಿಐ ವೀರರೆಡ್ಡಿ, ಗ್ರಾಮೀಣ ಪೊಲೀಸ್ ಠಾಣೆಯ ಪಿಎಸ್‌ಐ ಮೌನೇಶ ರಾಠೋಡ್ ಬಂದೋಬಸ್ತ್ ಒದಗಿಸಿದ್ದರು. ಇದೇ ವೇಳೆ ಬೀದಿ ಬದಿ ವ್ಯಾಪಾರಿಗಳು, ಅವರ ಕುಟುಂಬಸ್ಥರು ಸೇರಿದಂತೆ ವಿವಿಧ ಪೊಲೀಸ್ ಇಲಾಖೆ ಅಧಿಕಾರಿಗಳು ಇದ್ದರು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ವಿಶ್ವ ಮಲೇರಿಯಾ ಜಾಗೃತಿ ದಿನ: ಬೇವಿನಾಳ ಗ್ರಾಮದಲ್ಲಿ ಸಾರ್ವಜನಿಕರಿಗೆ ಅರಿವು



ಕೊಪ್ಪಳ ಏ.30-

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾ ಘಟಕ ಹಾಗೂ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಕಛೇರಿ, ತಾಲೂಕಾ ಆರೋಗ್ಯಾಧಿಕಾರಿಗಳ ಕಛೇರಿ, ಕೊಪ್ಪಳ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಕೂಕನಪಳ್ಳಿ ಇವರ ಸಂಯುಕ್ತಾಶ್ರಯದಲ್ಲಿ ''ವಿಶ್ವ ಮಲೇರಿಯಾ ಜಾಗೃತಿ ದಿನ''ದ ಅಂಗವಾಗಿ ಸೋಮವಾರದಂದು ಬೇವಿನಾಳ ಗ್ರಾಮದ ಕೆಂಚಮ್ಮ ದೇವಿ ದೇವಸ್ಥಾನದ ಹತ್ತಿರ ಜಾಗೃತಿ ಕಾರ್ಯಕ್ರಮದ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಲಾಯಿತು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶಿವಾನಂದ ವ್ಹಿ.ಪಿ ಅವರು ಮಾತನಾಡಿ, ಪ್ರತಿ ವರ್ಷ ಏಪ್ರಿಲ್ 25ರಂದು ''ವಿಶ್ವ ಮಲೇರಿಯಾ ದಿನ'' ಕಾರ್ಯಕ್ರಮ ಆಚರಿಸಲಾಗುತ್ತದೆ. ಮಾರಣಾಂತಿಕ ರೋಗದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು ಮತ್ತು ಇದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವ ನಿಟ್ಟನಲ್ಲಿ ಜಾಗತಿಕ ಸಮುದಾಯವನ್ನು ಒಗ್ಗೂಡಿಸುವುದು ಈ ದಿನದ ಮುಖ್ಯ ಉದ್ದೇಶವಾಗಿದೆ. 2026ರ ಘೋಷವಾಕ್ಯ ''ಮಲೇರಿಯಾ ಅಂತ್ಯದತ್ತ ಪಯಣ : ಈಗ ನಮಗೆ ಸಾಧ್ಯವಿದೆ ಈಗ ನಾವು ಮಾಡಲೇಬೇಕು'' ಎಂಬುವುದಾಗಿದೆ. ಅನಾಫಿಲಿಸ್ ಹೆಣ್ಣು ಸೋಂಕಿತ ಸೊಳ್ಳೆಗಳಿಂದ ಮಲೇರಿಯಾ ಜ್ವರ ಹರಡುತ್ತದೆ. ಈ ರೋಗದ ಲಕ್ಷಣಗಳು ತಲೆನೋವು, ವಾಂತಿ, ವಿಪರೀತ ಚಳಿಜ್ವರ, ಮೈನಡುಕ, ಬಿಟ್ಟು-ಬಿಟ್ಟು ಜ್ವರ ಬರುವ ಲಕ್ಷಣಗಳಿದ್ದರೆ ತಮ್ಮ ಸಮೀಪದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ, ರಕ್ತ ಪರೀಕ್ಷೆ ಮಾಡಿಸಬೇಕು. ರೋಗ ಖಚಿತ ಪಟ್ಟರೆ ಚಿಕಿತ್ಸೆ ಪಡೆದುಕೊಳ್ಳಬೇಕು. ಯಾವುದೇ ಕಾರಣಕ್ಕೂ ಜ್ವರದ ಬಗ್ಗೆ ನಿರ್ಲಕ್ಷ್ಯತನ ಮಾಡಬಾರದು ಮತ್ತು ಸ್ಥಳೀಯ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ, ಆರೋಗ್ಯ ನಿರೀಕ್ಷಣಾಧಿಕಾರಿ ಹಾಗೂ ಆಶಾ ಕಾರ್ಯಕರ್ತೆಯರನ್ನು ಸಂಪರ್ಕಿಸಬೇಕು ಎಂದರು.

ಸಾರ್ವಜನಿಕರು ತಮ್ಮ ತಮ್ಮ ಮನೆಗಳಲ್ಲಿ ನೀರು ಶೇಖರಿಸುವ ಡ್ರಮ್, ಬ್ಯಾರಲ್, ಸಿಮೆಂಟ್ ತೊಟ್ಟಿ, ಕಲ್ಲಿನದೋಣಿ ಇನ್ನಿತರ ನೀರು ಸಂಗ್ರಹ ಪರಿಕರಗಳನ್ನು ವಾರದಲ್ಲಿ 2 ಬಾರಿ ಸ್ವಚ್ಛವಾಗಿ ತೊಳೆದು, ಒಣಗಿಸಿ ಪುನಃ ನೀರು ತುಂಬಬೇಕು. ನೀರಿನ ಸಲಕರಣೆಗಳಿಗೆ ಭದ್ರವಾಗಿ ಮುಚ್ಚಳದಿಂದ ಮುಚ್ಚಬೇಕು, ಸಾಯಂಕಾಲದ ವೇಳೆ ಬೇವಿನ ಸೊಪ್ಪಿನ ಹೊಗೆ ಹಾಕಬೇಕು. ಸೊಳ್ಳೆ ಕಡಿತದಿಂದ ದೂರವಿರಲು ವೈಯಕ್ತಿಕ ರಕ್ಷಣೆ ಮಾಡಿಕೊಳ್ಳಬೇಕು. ''ಮಲೇರಿಯಾ ನಿಯಂತ್ರಣ ಪ್ರತಿಯೊಬ್ಬರ ಜವಾಬ್ದಾರಿ'' ಮನೆಯ ಸುತ್ತ ಮುತ್ತ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕು. ಮನೆಯಲ್ಲಿ ನೀರು ಶೇಖರಣ ತೊಟ್ಟಿಗಳಲ್ಲಿ ಸೊಳ್ಳೆಗಳು ಮೊಟ್ಟೆಗಳನ್ನಿಟ್ಟು ಸಂತಾನಭಿವೃದ್ಧಿ ಮಾಡುತ್ತವೆ. ಲಾರ್ವಾ ನಾಶಕ್ಕಾಗಿ ಸ್ವಚ್ಛಗೊಳಿಸುತ್ತಿರಬೇಕು. ಆರೋಗ್ಯ ಇಲಾಖೆ ಸಿಬ್ಬಂದಿಗಳು ಮತ್ತು ಆಶಾ ಕಾರ್ಯಕರ್ತೆಯರು ಭೇಟಿ ನೀಡಿದಾಗ ಸಹಕರಿಸಿ, ರಕ್ತಲೇಪನ ನೀಡಿ, ಮಲೇರಿಯಾ ಮುಕ್ತ ಕೊಪ್ಪಳ ಜಿಲ್ಲೆಯನ್ನಾಗಿ ಮಾಡಲು ಕೈಜೋಡಿಸಲು ತಿಳಿಸಿದರು.

ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಾದ ಗೀತಾ ಅವರು ಗ್ರಾಮದ ಸ್ವಚ್ಛತೆ, ಬಾಲ್ಯ ವಿವಾಹ ನಿಷೇಧ, ನೀರಿನ ಹಿತ-ಮಿತ ಬಳಕೆ ಹಾಗೂ ಹಸಿಕಸ-ಒಣಕಸ ವಿಂಗಡಣೆ ಮತ್ತು ವಿಲೇವಾರಿ ಕುರಿತು ವಿವರವಾಗಿ ಮಾತನಾಡಿದರು. ''ರೋಗಮುಕ್ತ ಗ್ರಾಮ''ವನ್ನಾಗಿ ಮಾಡಲು ತಿಳಿಸಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗಂಗಮ್ಮ ಅವರು, ಬೇಸಿಗೆ ಸಮಯದಲ್ಲಿ ಸಾರ್ವಜನಿಕರು ಆರೋಗ್ಯ ರಕ್ಷಣೆ ಕುರಿತು ಅನುಸರಿಸಬೇಕಾದ ಮುಂಜಾಗ್ರತಾ ಕ್ರಮಗಳು, ರಾಷ್ಟ್ರೀಯ ಹಾವು ಕಡಿತ ನಿಯಂತ್ರಣ, ರಾಷ್ಟ್ರೀಯ ರೇಬೀಸ್ ನಿಯಂತ್ರಣ, ಕ್ಷಯರೋಗ ನಿರ್ಮೂಲನೆ, ಕುಷ್ಠರೋಗ ನಿರ್ಮೂಲನೆ, ಅಸಾಂಕ್ರಾಮಿಕ ರೋಗಗಳ ನಿಯಂತ್ರಣ ಕುರಿತು ಮಾತನಾಡಿದರು. ಮಲೇರಿಯಾ ನಿಯಂತ್ರಣದ ಕುರಿತು ಸಾರ್ವಜನಿಕರಿಗೆ ಕರಪತ್ರ ವಿತರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಮಾಜಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ತಿಪ್ಪವ್ವ ಶಿವಪ್ಪ ನಾಯಕ್, ತಾಲೂಕಾ ಮಲೇರಿಯಾ ತಾಂತ್ರಿಕ ಮೇಲ್ವಿಚಾರಕರಾದ ಪ್ರಮೋದ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳಾದ ಮಲ್ಲಮ್ಮ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ರಮೇಶ್, ಆಶಾ ಕಾರ್ಯಕರ್ತೆಯರಾದ ಮಂಜುಳಾ ಹಾಗೂ ಅನ್ನಪೂರ್ಣ ಸೇರಿದಂತೆ ಗ್ರಾಮದ ನಾಗರಿಕರು, ಮುಖಂಡರು ಮತ್ತು ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಕುಡಿಯುವ ನೀರು ಕುರಿತು ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರುಗಿದ ಕೊಪ್ಪಳ ತಾಲೂಕ ಮಟ್ಟದ ಸಭೆ
ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಕ್ರಮವಹಿಸಿ: ಟಿ.ಕೃಷ್ಣಮೂರ್ತಿ



ಕೊಪ್ಪಳ ಏ.30-

ಬೇಸಿಗೆ ಪ್ರಾರಂಭವಾಗಿರುವದರಿಂದ ಗ್ರಾಮೀಣ ಭಾಗ ಮತ್ತು ನಗರ ಪ್ರದೇಶಗಳಲ್ಲಿ ಕುಡಿಯುವ ನೀರು ಸಮಸ್ಯೆ ಆಗದಂತೆ ಮುಂಜಾಗ್ರತ ಕ್ರಮವಹಿಸಬೇಕೆಂದು ಕೊಪ್ಪಳ ತಾಲೂಕ ನೋಡಲ್ ಅಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತಿ ಉಪಕಾರ್ಯದರ್ಶಿಗಳಾದ ಟಿ.ಕೃಷ್ಣಮೂರ್ತಿ ಸೂಚಿಸಿದರು.

ಕೊಪ್ಪಳ ತಾಲೂಕ ಪಂಚಾಯತಿ ಕೊಪ್ಪಳ ಸಭಾಂಗಣದಲ್ಲಿ ಮಂಗಳವಾರ ಕುಡಿಯುವ ನೀರು ಕುರಿತು ಜರುಗಿದ ಕೊಪ್ಪಳ ತಾಲೂಕ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಂಬರುವ ದಿನಗಳಲ್ಲಿ 36 ಗ್ರಾಮಗಳನ್ನು ಕುಡಿಯುವ ನೀರಿನ ಸಮಸ್ಯಾತ್ಮಕ ಗ್ರಾಮಗಳೆಂದು ಗುರುತಿಸಲಾಗಿದ್ದು, ಅವುಗಳ ಪೈಕಿ ಈಗಾಗಲೇ 12 ಗ್ರಾಮಗಳಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗಿದ್ದರಿಂದ 12 ಖಾಸಗಿ ಬೋರ್ ವೆಲ್ ಗಳನ್ನು ಬಾಡಿಗೆ ರೂಪದಲ್ಲಿ ಪಡೆಯಲಾಗಿದೆ. ಮುಂದಿನ ದಿನಗಳಲ್ಲಿ ಸಮಸ್ಯಾತ್ಮಕ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಖಾಸಗಿ ಬೋರ್ ವೆಲ್‌ಗಳನ್ನು ಗುರುತಿಸಿ ಇಟ್ಟುಕೊಳ್ಳುವಂತೆ ಆಯಾ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಶಾಖಾಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದರು.

ತಾಲೂಕಿನ ವ್ಯಾಪ್ತಿಯಲ್ಲಿ ಸಾರ್ವಜನಿಕರಿಂದ ಕುಡಿಯುವ ನೀರಿನ ಕುಂದು ಕೊರತೆಗಳನ್ನು ಸ್ವೀಕರಿಸಿ ಬಗೆಹರಿಸಲು ತಾಲೂಕ ಪಂಚಾಯತಿಯ ಸಹಾಯವಾಣಿ ಸಂ.9620410509, 9902315311 ಹಾಗೂ ತಹಶೀಲ್ದಾರರ ಕಾರ್ಯಾಲಯ ಸಹಾಯವಾಣಿ ಸಂ.7483942249 ಸ್ಥಾಪಿಸಲಾಗಿದ್ದು ಇವುಗಳ ಬಗ್ಗೆ ಗ್ರಾಮ ಮತ್ತು ನಗರ ಪ್ರದೇಶದಲ್ಲಿ ಮಾಹಿತಿ ತಲುಪಿಸಲು ಕ್ರಮವಹಿಸುವಂತೆ ಸೂಚಿಸಿದರು.

ಬೇಸಿಗೆ ತಾಪಮಾನ ಹೆಚ್ಚಾಗಿರುವದರಿಂದ ಗ್ರಾಮೀಣ ಹಾಗು ನಗರ ಪ್ರದೇಶದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾದಲ್ಲಿ ಸಂಬಂಧಿಸಿದ ಅಧಿಕಾರಿಗಳು ತಕ್ಷಣವೇ ಸ್ಪಂದಿಸಿ ಸಮಸ್ಯೆಯನ್ನು ಬಗೆಹರಿಸಬೇಕು. ನೀರಿನ ಮೂಲಗಳನ್ನು ಪರೀಕ್ಷಿಸುವದು ಮತ್ತು ನೀರಿನ ಸಂಗ್ರಹಾರಗಳನ್ನು ಕಾಲ ಕಾಲಕ್ಕೆ ಸ್ವಚ್ಛಗೊಳಿಸುವದು ಅಗತ್ಯ ಜಿಪಿಎಸ್ ಫೋಟೊ ದಾಖಲಾತಿ ನಿರ್ವಹಿಸತಕ್ಕದ್ದು ಮತ್ತು ಗ್ರಾಮದಲ್ಲಿರುವ ಜಾನುವಾರು ತೊಟ್ಟಿಗಳನ್ನು ಸ್ವಚ್ಛಗೊಳಿಸಿ ಅವುಗಳಿಗೆ ಕುಡಿಯುವ ನೀರು ಭರ್ತಿ ಮಾಡಿದಲ್ಲಿ ಜಾನುವಾರುಗಳಿಗೆ ಅನುಕೂಲವಾಗುತ್ತದೆ ಎಂದರು.

ಯಾವುದೇ ರೀತಿಯಾಗಿ ಪೈಪ್‌ಲೈನ್ ಒಡೆದು ಕಲುಷಿತ ನೀರು ಸರಬರಾಜು ಆಗದಂತೆ ಕೂಡಲೇ ನಗರಸಭೆ, ಪಟ್ಟಣ ಪಂಚಾಯತಿ ಅಧಿಕಾರಿಗಳು ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಎಚ್ಚರವಹಿಸಬೇಕು. ಗ್ರಾಮ ಪಂಚಾಯತಿ ಹಂತದಲ್ಲಿ ಟಾಸ್ಕಫೋರ್ಸ ಸಭೆ ಜರುಗಿಸಲು ಇದೇ ಸಂದರ್ಭದಲ್ಲಿ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ನಗರಸಭೆಯ ಪೌರಾಯುಕ್ತ ಮಂಜುನಾಥ ಗುಂಡೂರು, ತಹಶೀಲ್ದಾರ ಬಸವರಾಜ ತೆನ್ನಳ್ಳಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರ ಹೊನ್ನಪ್ಪ, ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ಮಹೇಶ್ ಎಚ್., ತಾಲೂಕ ಮಟ್ಟದ ಅಧಿಕಾರಿಗಳು, ಎಲ್ಲಾ ಗ್ರಾಮ ಪಂಚಾಯತಿ ಆಡಳಿತಾಧಿಕಾರಿಗಳು, ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಗ್ರಾಮೀಣ ಕುಡಿಯುವ ಮತ್ತು ನೈರ್ಮಲ್ಯ ಇಲಾಖೆಯ ಶಾಖಾಧಿಕಾರಿಗಳು, ತಾಲೂಕ ಪಂಚಾಯತಿ ಸಿಬ್ಬಂದಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಅಕ್ರಮ ಮಣ್ಣು ಗಣೆಗಾರಿಕೆ ವಿರುದ್ಧ ಪ್ರತಿಭಟನೆ : ತಹಶೀಲ್ದಾರ್‌ಗೆ ಮನವಿ



ಚಿಂಚೋಳಿ,ಏ.30-

ತಾಲೂಕಿನ ಶಾಧಿಪುರ ಗ್ರಾಮದ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಅಕ್ರಮ ಮಣ್ಣು ಗಣೆಗಾರಿಕೆ ಹಾಗೂ ದಶಕಗಳಿಂದ ಬಾಕಿ ಉಳಿದಿರುವ ಸರ್ಕಾರಿ ಜಮೀನು ಹಸ್ತಾಂತರ ಸೇರಿದಂತೆ ಹಲವು ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ, ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಲಾಯಿತು.

ಶಾಧಿಪುರ ಗ್ರಾಮದ ಸರ್ವೆ ನಂ. 126/1 ಮತ್ತು 126/3ರಲ್ಲಿನ ಜಮೀನನ್ನು 2001ರಲ್ಲೇ ಸುಮಾರು 54 ರೈತ ಕುಟುಂಬಗಳಿಗೆ ಸರ್ಕಾರ ಮಂಜೂರು ಮಾಡಿದ್ದರೂ, ಕಳೆದ 24 ವರ್ಷಗಳಿಂದ ಸರ್ವೆ ಕಾರ್ಯ ಪೂರ್ಣಗೊಳ್ಳದೇ ಭೌತಿಕ ಸ್ವಾಧೀನ ನೀಡಲಾಗಿಲ್ಲ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಈ ಆಡಳಿತಾತ್ಮಕ ವಿಳಂಬವನ್ನು ದುರುಪಯೋಗಪಡಿಸಿಕೊಂಡು ಮಣ್ಣಿನ ಮಾಫಿಯಾ ಅಕ್ರಮ ಗಣೆಗಾರಿಕೆ ನಡೆಸಿ ಸರ್ಕಾರದ ಸಂಪತ್ತನ್ನು ಲೂಟಿ ಮಾಡುತ್ತಿದೆ ಎಂದು ದೂರಿದರು.

2001ರ ನಕ್ಷೆಯಂತೆ ತಕ್ಷಣ ಸರ್ವೆ ನಡೆಸಿ ಜಮೀನು ಹಸ್ತಾಂತರಿಸಬೇಕು, ಅಕ್ರಮ ಮಣ್ಣು ಸಾಗಾಣಿಕೆಯಲ್ಲಿ ತೊಡಗಿರುವ ಮಾತಾ ಮತ್ತು ಜೀವನ ಜ್ಯೋತಿ ಟ್ರಾನ್ಸ್ ಪೋರ್ಟ್ ಕಂಪನಿಗಳನ್ನು ನಿಷೇಧಿಸಬೇಕು ಹಾಗೂ ಸಹಕರಿಸುತ್ತಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಅಕ್ರಮ ಸಾಗಾಟಕ್ಕೆ ಬಳಸಲಾಗುತ್ತಿರುವ ಹಿಟಾಚಿ ಯಂತ್ರಗಳು ಹಾಗೂ ಲಾರಿಗಳನ್ನು ವಶಪಡಿಸಿಕೊಂಡು ಎಫ್‌ಐಆರ್ ದಾಖಲಿಸಬೇಕು. ತೆಲಂಗಾಣ ಗಡಿಭಾಗದಿಂದ ನಡೆಯುತ್ತಿರುವ ಅಕ್ರಮ ನುಸುಳುವಿಕೆಯನ್ನು ತಡೆಯಲು ಚೆಕ್‌ಪೋಸ್ಟ್ ಸ್ಥಾಪಿಸಬೇಕು ಎಂಬ ಬೇಡಿಕೆಯನ್ನೂ ರೈತರು ಮುಂದಿಟ್ಟರು.

ಕಳೆದ 14 ದಿನಗಳಿಂದ ಅಧಿಕಾರಿಗಳು ಸ್ಪಂದಿಸದ ಹಿನ್ನೆಲೆಯಲ್ಲಿ, ಬೇಡಿಕೆಗಳನ್ನು ಈಡೇರಿಸದಿದ್ದರೆ ಲೋಕಾಯುಕ್ತಕ್ಕೆ ದೂರು ನೀಡಲಾಗುವುದು ಎಂದು ಹೋರಾಟಗಾರರು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಸಂಘಟನೆಯ ತಾಲೂಕ ಅಧ್ಯಕ್ಷ ಲಿಂಬಾಜಿ ಚೌಹಾಣ್, ಶಾಂತಪ್ಪ, ಪಾರ್ವತಮ್ಮ, ದೇವೀಬಾಯಿ, ಶಂಕರ್ ಪವಾರ್, ನರೇಶ್ ಜಾದವ್, ಮಾರುತಿ ಗಂಜಗಿರಿ, ಪ್ರೇಮ್ ರಾಠೋಡ್, ಹೇಮಿಬಾಯಿ, ರುಕ್ಮಿಣಿಬಾಯಿ, ಚಂದು ಸೇರಿದಂತೆ ನೂರಾರು ರೈತರು ಭಾಗವಹಿಸಿದ್ದರು.

ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಜಾತ್ರಾ ಮಹೋತ್ಸವದಲ್ಲಿ ಸಿ.ಸಿ.ಕ್ಯಾಮರಾಗಳನ್ನು ಅಳವಡಿಸಿ- ಡಾ. ಸುರೇಶ ಇಟ್ನಾಳ



ಕೊಪ್ಪಳ ಏ.30-

ಶ್ರೀ ಕ್ಷೇತ್ರ ಹುಲಿಗಿಯ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ 2026ರ ವಾರ್ಷಿಕ ಜಾತ್ರಾ ಮಹೋತ್ಸವದ ನಿಮಿತ್ತ ರಥವನ್ನು ಪರಿಶೀಲಿಸಿ ಅರ್ಹತಾ ಪ್ರಮಾಣ ಪತ್ರ ನೀಡಬೇಕು ಮತ್ತು ಜಾತ್ರಾ ಅವಧಿಯಲ್ಲಿ ಸಿ.ಸಿ.ಕ್ಯಾಮರಾಗಳನ್ನು ಅಳವಡಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೊಪ್ಪಳ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ವಾರ್ಷಿಕ ಜಾತ್ರೆಯ ಪ್ರಯುಕ್ತ ಮೇ 11ರ ಸೋಮವಾರದಂದು ಮಹಾರಥೋತ್ಸವ ಜರುಗಲಿದ್ದು, ರಥೋತ್ಸವಕ್ಕಿಂತ ಮುಂಚಿತವಾಗಿ ರಥವನ್ನು ಕೊಪ್ಪಳ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಂದ ಸಂಪೂರ್ಣವಾಗಿ ಪರಿಶೀಲಿಸಿ ಅರ್ಹತಾ ಪ್ರಮಾಣ ಪತ್ರವನ್ನು ನೀಡಬೇಕು. ಈ ಬಗ್ಗೆ ಕೊಪ್ಪಳ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರರು ಹಾಗೂ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳು ಸೂಕ್ತ ಕ್ರಮವಹಿಸಬೇಕೆಂದರು.

ಸಿ.ಸಿ.ಕ್ಯಾಮರಾಗಳನ್ನು ಅಳವಡಿಸಿ: ಜಾತ್ರಾ ಕಾಲದಲ್ಲಿ ದೇವಸ್ಥಾನ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ಸಿ.ಸಿ.ಕ್ಯಾಮರಾಗಳನ್ನು ನದಿತೀರದ ಪ್ರದೇಶದಲ್ಲಿ, ಬಯಲು ಪ್ರದೇಶದಲ್ಲಿ, ದೇವಸ್ಥಾನದ ಮುಖ್ಯರಸ್ತೆ, ಭಕ್ತಾದಿಗಳು ಉಳಿದುಕೊಳ್ಳುವ ಜನಸಂದಣಿ ಪ್ರದೇಶದಲ್ಲಿ ನಿಗಾ ವಹಿಸಲು ಸಿ.ಸಿ.ಕ್ಯಾಮರಾಗಳನ್ನು ಅಳವಡಿಸಿ ಅಗತ್ಯ ಕ್ರಮ ವಹಿಸಲು ಜಿಲ್ಲಾ ಪೊಲೀಸ್ ಇಲಾಖೆ, ಮುನಿರಾಬಾದ್ ಪೊಲೀಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರು ಮತ್ತು ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಮೇ 5 ರಂದು ಕೊಪ್ಪಳದಲ್ಲಿ ವಾಕ್ ಇನ್ ಇಂಟರ್‌ಮ್ಯೂವ್

ಕೊಪ್ಪಳ,ಏ.30-

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ವಾಕ್ ಇನ್ ಇಂಟರ್‌ಮ್ಯೂವನ್ನು ಮೇ 5 ರಂದು ಬೆಳಿಗ್ಗೆ10 ರಿಂದ ಮಧ್ಯಾಹ್ನ 1.30 ರ ವರೆಗೆ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಆಯೋಜಿಸಲಾಗಿದೆ.

ಈ ವಾಕ್ ಇನ್ ಇಂಟರ್‌ಮ್ಯೂವ್‌ನಲ್ಲಿ ಧಾರವಾಡದ ಟಾಟಾ ಮೋಟಾರ್ಸ್ ಸಂಸ್ಥೆಯು ತಮ್ಮಲ್ಲಿನ ಖಾಲಿ ಇರುವ ಹುದ್ದೆಗಳಿಗೆ ನೇರ ಸಂದರ್ಶನ ನಡೆಸಲಿದ್ದಾರೆ. ಐ.ಟಿ.ಐ- ಆಲ್ ಟ್ರೇಡ್ ಅಥವಾ ಎಸ್.ಎಸ್.ಎಲ್.ಸಿ, ಪಿ.ಯು.ಸಿ., ಡಿಪ್ಲೊಮಾ ಅಥವಾ ಇತರೆ ಪದವಿ ಅಭ್ಯರ್ಥಿಗಳು ಈ ನೇರ ಸಂದರ್ಶನಕ್ಕೆ ಹಾಜರಾಗಬಹುದು. ಆಸಕ್ತ 18 ರಿಂದ 25 ವರ್ಷದೊಳಗಿನ ನಿರುದ್ಯೋಗಿ ಪುರಷರು ದೃಢೀಕರಿಸಲಾದ ತಮ್ಮ ವಿದ್ಯಾರ್ಹತೆಯ ಎಲ್ಲ ಪ್ರಮಾಣ ಪತ್ರಗಳ 2 ಪ್ರತಿಗಳೊಂದಿಗೆ ಮತ್ತು ಆಧಾರ ಕಾರ್ಡಿನ ಪ್ರತಿ, ಬಯೋಡಾಟಾ (ರೆಜುಮ್) ಹಾಗೂ ಪಾಸ್ ಪೋರ್ಟ್ ಅಳತೆಯ 2 ಭಾವಚಿತ್ರಗಳೊಂದಿಗೆ ಈ ವಾಕ್ ಇನ್ ಇಂಟರ್‌ಮ್ಯೂವನಲ್ಲಿ ಭಾಗವಹಿಸಿ, ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ.

ಉದ್ಯೋಕಾಂಕ್ಷಿಗಳು ://./ 18 ಮೂಲಕ ರಿಜಿಸ್ಟರ್ ಮಾಡಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಮೊದಲನೇ ಮಹಡಿ, ಕೊಪ್ಪಳ ಇವರನ್ನು ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಿಮ್ಮೂರು ಸುದ್ದಿ

ಸಂಪಾದಕೀಯ

ಬಿಜೆಪಿ ಬೆವರಿಳಿಸಿದ ಬಂಗಾಳದ ನವದುರ್ಗೆಯರು



ಕೇಂದ್ರ ಸರ್ಕಾರದ ವಿರುದ್ಧ, ದುಷ್ಟ-ಭ್ರಷ್ಟ ಬಿಜೆಪಿ ನಾಯಕರ ವಿರುದ್ಧ ತಕ್ಷಣ ಬೀದಿಗಿಳಿಯುವ ದೀದಿ, ಜನರೊಂದಿಗೆ ಜನರಾಗಿ ಬೆರೆತುಹೋಗುವ ಪರಿ ಅನನ್ಯವಾಗಿದೆ. ಅದಕ್ಕಿಂತಲೂ ಮುಖ್ಯವಾಗಿ, ಮಮತಾ ಬ್ಯಾನರ್ಜಿ ಮುಂಚೂಣಿಗೆ ತಂದಿರುವ ಮಹಿಳೆಯರಾದ, ಮಹುವಾ ಮೊಯಿತ್ರಾ ಮತ್ತು ಸಯೋನಿ ಘೋಷ್ ಎಂಬ ಗಟ್ಟಿ ವ್ಯಕ್ತಿತ್ವಗಳು, ಅವರು ಈ ಚುನಾವಣೆಯಲ್ಲಿ ನಿರ್ವಹಿಸಿದ ಪಾತ್ರ ಅಮೋಘವಾಗಿದೆ.

ಈ ಬಾರಿಯ ಪಶ್ಚಿಮ ಬಂಗಾಳದ ಚುನಾವಣೆಯಲ್ಲಿ ಎಸ್‌ಐಆರ್ ಹೆಚ್ಚು ಸದ್ದು ಮಾಡಿತು. ಅಂತಿಮ ಮತದಾರರ ಪಟ್ಟಿಯಿಂದ ಅಧಿಕೃತವಾಗಿಯೇ 63 ಲಕ್ಷ ಮತದಾರರ ಹೆಸರುಗಳನ್ನು ತೆಗೆದುಹಾಕಲಾಯಿತು. ಅದರಲ್ಲೂ ಅತಿ ಹೆಚ್ಚು ಮುಸ್ಲಿಂ ಮತದಾರರು ಇರುವ ಪ್ರದೇಶಗಳಲ್ಲಿ, ಮುಸ್ಲಿಮರು ಮತದಾನದಿಂದ ಹೊರಗುಳಿಯುವಂತೆ ನೋಡಿಕೊಳ್ಳಲಾಯಿತು. ಕೇಂದ್ರದಲ್ಲಿ ಅಧಿಕಾರದಲ್ಲಿರುವ ಮೋದಿ-ಶಾ ಅವರು ಹೇಳಿದಂತೆ ಚುನಾವಣಾ ಆಯೋಗ ಕೇಳಿದ್ದು, ಪ್ರಜಾಸತ್ತಾತ್ಮಕ ವ್ಯವಸ್ಥೆಯನ್ನೇ ಬುಡಮೇಲು ಮಾಡಿತು. ಸಾಂವಿಧಾನಿಕ ಸ್ವಾಯತ್ತ ಸಂಸ್ಥೆಯಾದ ಚುನಾವಣಾ ಆಯೋಗಕ್ಕೆ ಶಾಶ್ವತವಾಗಿ ಕಳಂಕ ಮೆತ್ತಿಕೊಂಡಿತು.

ಕೇಂದ್ರದ ಅಧಿಕಾರ, ಹಣಬಲ ಮತ್ತು ಧಾರ್ಮಿಕ ಧ್ರುವೀಕರಣವೆಂಬ ಅಸ್ತ್ರಗಳನ್ನು ಯಥೇಚ್ಛವಾಗಿ ಬಳಸುತ್ತಿರುವ ಮೋದಿ-ಶಾ, ಈ ಬಾರಿ ಪಶ್ಚಿಮ ಬಂಗಾಳವನ್ನು ಗೆಲ್ಲಲೇಬೇಕೆಂಬ ಹಠಕ್ಕೆ ಬಿದ್ದಿದ್ದಾರೆ. ಅದರಲ್ಲೂ ಬಂಗಾಳದ ದುರ್ಗೆಯಂತಿರುವ ಮಮತಾ ಬ್ಯಾನರ್ಜಿಯವರನ್ನು ಸೋಲಿಸಿ, ಅವರ ರಾಜಕೀಯ ಬದುಕನ್ನು ಕೊನೆಗೊಳಿಸಬೇಕೆಂಬ ತೀರ್ಮಾನಕ್ಕೆ ಬಂದಿದ್ದಾರೆ. ಅದಕ್ಕಾಗಿ ಪಶ್ಚಿಮ ಬಂಗಾಳವನ್ನು ಕದನಕಣವನ್ನಾಗಿಸಿದ್ದರು. ಅದು ಏಪ್ರಿಲ್ 28ರಂದು ನಡೆದ ಅಂತಿಮ ಹಂತದ ಮತದಾನದ ವೇಳೆಯಲ್ಲಿಯೂ ಸದ್ದು ಮಾಡಿತು.

ನಿನ್ನೆ ಮತಗಟ್ಟೆಯೊಂದರ ಬಳಿ ಬಂದ ಬಿಜೆಪಿ ಅಭ್ಯರ್ಥಿ ಸುವೇಂದು ಅಧಿಕಾರಿಯನ್ನು ಟಿಎಂಸಿ ಕಾರ್ಯಕರ್ತರು ಸುತ್ತುವರಿದು ಜೈ ಬಂಗಾಳ ಘೋಷಣೆ ಕೂಗಿದರು. ಚುನಾವಣಾ ಸಮಯದಲ್ಲಿ ಇಂತಹ ಘಟನೆಗಳು ಸರ್ವೇಸಾಮಾನ್ಯ. ಆದರೆ ಪಶ್ಚಿಮ ಬಂಗಾಳದ ಪರಿಸ್ಥಿತಿಯೇ ಬೇರೆ. ಸಣ್ಣ ಗಲಾಟೆಯೂ ವಿಕೋಪಕ್ಕೆ ತಿರುಗುತ್ತದೆ, ಹಿಂಸೆ-ರಕ್ತಪಾತಕ್ಕೆ ದಾರಿ ಮಾಡಿಕೊಡುತ್ತದೆ. ಅದನ್ನು ಕಾಯುತ್ತಿದ್ದವರಂತೆ ಸುವೇಂದು ಅಧಿಕಾರಿ, ಆ ತಕ್ಷಣವೇ ಗೃಹ ಸಚಿವ ಅಮಿತ್ ಶಾಗೆ ಫೋನಾಯಿಸಿದರು. ಮತಗಟ್ಟೆ ಬಳಿ ನನ್ನ ಮೇಲೆ ಗೂಂಡಾಗಳು ದಾಳಿ ಮಾಡಿದರು. ಅವರು ಮತದಾರರಲ್ಲ, ಮಮತಾ ಬ್ಯಾನರ್ಜಿ ಗೂಂಡಾಗಳು, ಅವರೆಲ್ಲರೂ ಹೊರಗಿನವರು ಎಂದು ಕೂಗಾಡಿದರು. ಅಂತಹ ಒಂದು ದೂರಿಗಾಗಿಯೇ ಕಾಯುತ್ತಿದ್ದ ಗೃಹ ಸಚಿವರು, ಆ ತಕ್ಷಣವೇ ದೇಶದ ಪೊಲೀಸ್ ವ್ಯವಸ್ಥೆ, ಎನ್‌ಐಎ, ಸೇನಾ ತುಕಡಿ ನಿಯೋಜಿಸಿದರು. ಅದಕ್ಕೆ ಕಾನೂನು ಸುವ್ಯವಸ್ಥೆ, ಭದ್ರತೆಯ ನೆಪ ಹೇಳಿದರು. ಈಗಾಗಲೇ ಎಸ್‌ಐಆರ್‌ನಿಂದ ಹೈರಾಣಾಗಿದ್ದ ಮತದಾರರಿಗೆ ಶಾಂತಿಯುತವಾಗಿ ಮತ ಚಲಾಯಿಸಲೂ ಆಗದಂತೆ ನೋಡಿಕೊಂಡರು.

ಇಷ್ಟಾದರೂ, ಪಶ್ಚಿಮ ಬಂಗಾಳದಲ್ಲಿ ಶೇ. 91.66ರಷ್ಟು ಮತದಾನವಾಗಿ ದಾಖಲೆ ಬರೆದಿದೆ. ತೃಣಮೂಲ ಕಾಂಗ್ರೆಸ್ ಅಧಿಕಾರಕ್ಕೆ ಬರಲಿದೆ ಎಂದು ಚುನಾವಣೋತ್ತರ ಸಮೀಕ್ಷೆಗಳು ಕೂಡ ಹೇಳುತ್ತಿವೆ. ಆದರೆ ಜನರ ನಡುವೆ ಆಡಳಿತ ವಿರೋಧಿ ಅಲೆ ಕೆಲಸ ಮಾಡುತ್ತಿದೆ ಎಂಬುದು ಸ್ವತಃ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿಯವರಿಗೂ ತಿಳಿದಿದೆ. ಊಹಾಪೋಹಗಳಿಗೆ ತೆರೆಎಳೆಯುವಂತೆ, ಇನ್ನೇನು ನಾಲ್ಕೈದು ದಿನಗಳಲ್ಲಿ ಫಲಿತಾಂಶವೂ ಹೊರಬರಲಿದೆ.

ಇಂತಹ ಸಂಕೀರ್ಣ ಸ್ಥಿತಿಯ ನಡುವೆಯೂ ಒಂದು ವಿಷಯವನ್ನು ಭಾರತೀಯ ರಾಜಕಾರಣ ಗಮನಿಸಲೇಬೇಕು. ಮಮತಾ ಬ್ಯಾನರ್ಜಿ ಅವರ ಟಿಎಂಸಿ, ಅಧಿಕಾರ ಉಳಿಸಿಕೊಳ್ಳಲು ನಡೆಸುತ್ತಿರುವ ಹೋರಾಟ ದೇಶದ ಗಮನ ಸೆಳೆದಿದೆ ಎಂಬುದನ್ನು ಒಪ್ಪಲೇಬೇಕು. ಏಕಾಂಗಿ ಮಹಿಳೆಯಾಗಿ ಕೇಂದ್ರ ಸರ್ಕಾರದ ಅಡೆ ತಡೆಗಳನ್ನು ಎದುರಿಸುತ್ತಿರುವ ರೀತಿ ವಿಶಿಷ್ಟವಾಗಿದೆ. ಆಕೆಯ ಸಿಡಿಲಬ್ಬರದ ಮಾತುಗಳಿಗೆ ಬಿಜೆಪಿ ನಾಯಕರ ಬಳಿ ಉತ್ತರವಿಲ್ಲದಾಗಿದೆ. ಬಂಗಾಳಿ ಜನ, ನೆಲ, ಭಾಷೆ, ಸಂಸ್ಕೃತಿ ಮತ್ತು ಸ್ವಾಭಿಮಾನದ ಪ್ರಶ್ನೆಯನ್ನು ಚುನಾವಣೆಯ ಮಹತ್ವದ ವಿಷಯವನ್ನಾಗಿಸಿದ್ದು ವಿಶೇಷವಾಗಿದೆ. ಅವರ ಜಾತ್ಯತೀತ ನಿಲುವು, ಬಹುತ್ವ ಭಾರತದ ಬದ್ಧತೆ ಪ್ರಶಂಸೆಗೆ ಪಾತ್ರವಾಗಿದೆ.

ಇಲ್ಲಿ ಮತ್ತೊಂದು ಮುಖ್ಯ ಸಂಗತಿ ಎಂದರೆ, ಕೇಂದ್ರ ಸರ್ಕಾರದ ವಿರುದ್ಧ, ದುಷ್ಟ-ಭ್ರಷ್ಟ ಬಿಜೆಪಿ ನಾಯಕರ ವಿರುದ್ಧ ತಕ್ಷಣ ಬೀದಿಗಿಳಿಯುವ ದೀದಿ, ಜನರೊಂದಿಗೆ ಜನರಾಗಿ ಬೆರೆತುಹೋಗುವ ಪರಿ ಅನನ್ಯವಾಗಿದೆ. ಅದಕ್ಕಿಂತಲೂ ಮುಖ್ಯವಾಗಿ, ಮಮತಾ ಬ್ಯಾನರ್ಜಿ ಮುಂಚೂಣಿಗೆ ತಂದಿರುವ ಮಹಿಳೆಯರಾದ, ಮಹುವಾ ಮೊಯಿತ್ರಾ ಮತ್ತು ಸಯೋನಿ ಘೋಷ್ ಎಂಬ ಗಟ್ಟಿ ವ್ಯಕ್ತಿತ್ವಗಳು, ಅವರು ಈ ಚುನಾವಣೆಯಲ್ಲಿ ನಿರ್ವಹಿಸಿದ ಪಾತ್ರ ಅಮೋಘವಾಗಿದೆ.

ಭಾರತೀಯ ಪುರುಷಪ್ರಧಾನ ರಾಜಕೀಯ ವ್ಯವಸ್ಥೆ ಮಹಿಳೆಯರನ್ನು ಎಲ್ಲಿ ಇಟ್ಟಿದೆ ಎಂದು ಪ್ರತ್ಯೇಕವಾಗಿ ಹೇಳಬೇಕಾಗಿಲ್ಲ. ಅದರಲ್ಲೂ ಮಹಿಳಾಪರ ಪೋಸು ಕೊಡುವ ಪ್ರಧಾನಿ ಮೋದಿಯವರ ಐಟಿ ಸೆಲ್, ವಿರೋಧ ಪಕ್ಷಗಳ ಮಹಿಳಾ ರಾಜಕಾರಣಿಗಳನ್ನು ಚಿತ್ರಿಸುವ ಬಗೆಯನ್ನು ಬಿಡಿಸಿ ಹೇಳಬೇಕಾಗಿಲ್ಲ. ಸೋನಿಯಾ, ಮಮತಾರನ್ನು ಅವರು ಮಹಿಳೆಯರೆಂದೇ ಪರಿಗಣಿಸುವುದಿಲ್ಲ. ಇಂತಹ ಪ್ರಕ್ಷುಬ್ಧ ಪರಿಸ್ಥಿತಿಯಲ್ಲಿಯೂ ಸಂಘಪರಿವಾರದ ಹುನ್ನಾರಗಳನ್ನು, ಬಿಜೆಪಿ ನಾಯಕರ ನಾಟಕವನ್ನು ಬಹಳ ಗಟ್ಟಿ ಧ್ವನಿಯಲ್ಲಿ ಬಯಲು ಮಾಡುತ್ತಿರುವವರು ಮಹುವಾ ಮೊಯಿತ್ರಾ ಮತ್ತು ಸಯೋನಿ ಘೋಷ್ ಎನ್ನುವುದರಲ್ಲಿ ಅನುಮಾನವೇ ಇಲ್ಲ.

ಮಹುವಾ ಮೊಯಿತ್ರಾ ಮತ್ತು ಸಯೋನಿ ಘೋಷ್ ಇವರನ್ನು ನೀವು ಇಷ್ಟಪಡಬಹುದು, ಪಡದಿರಬಹುದು. ದ್ವೇಷಿಸಬಹುದು, ದುಷ್ಟ ದುರ್ಗೆಯರೆನ್ನಬಹುದು. ಸೋಷಿಯಲ್ ಮೀಡಿಯಾದ ಟ್ರೋಲ್ ಎಂಬ ಅಸ್ತ್ರ ಪ್ರಯೋಗಿಸಿ ಮನಬಂದಂತೆ ಚಿತ್ರಿಸಬಹುದು, ಚಾರಿತ್ರ್ಯವಧೆ ಮಾಡಿ ಲೇವಡಿ ಮಾಡಬಹುದು. ಆದರೆ ಅವರನ್ನು ನಿರ್ಲಕ್ಷಿಸುವುದು ಸಾಧ್ಯವಿಲ್ಲ.

ಇದು ಕೇವಲ ರಾಜಕೀಯ ಅಧಿಕಾರದ ಪ್ರಶ್ನೆಯಲ್ಲ, ಅದಕ್ಕಿಂತಲೂ ಆಳವಾದ ವಿಚಾರ. ಅಧಿಕಾರಸ್ಥರನ್ನು ಎದುರಿಸಿ ನಿಲ್ಲುವ, ಅಂಜಿಕೆಯಿಲ್ಲದೆ ಪ್ರಶ್ನಿಸುವ ಮತ್ತು ತಮಗೆ ಅನಿಸಿದ್ದನ್ನು ನೇರವಾಗಿ ಪ್ರತಿಪಾದಿಸುವ ಈ ಛಲಗಾತಿಯರು ಇದ್ದಕ್ಕಿದ್ದಂತೆ ಎದ್ದು ನಿಂತವರಲ್ಲ. ಅವರ ಬುದ್ಧಿವಂತಿಕೆ, ದಿಟ್ಟತನ ಮತ್ತು ಆತ್ಮಸ್ಥೈರ್ಯ ಸಾಮಾನ್ಯದ್ದಲ್ಲ. ಇಂತಹ ವ್ಯಕ್ತಿತ್ವಗಳು ಸಾರ್ವಜನಿಕ ಚರ್ಚೆಯ ನಿಲುವು-ಧೋರಣೆಯನ್ನೇ ಬದಲಿಸಿಬಿಡುತ್ತವೆ.

ಸದ್ಯ ಪಶ್ಚಿಮ ಬಂಗಾಳದಲ್ಲಿ ಸತತವಾಗಿ ಮೂರು ಸಲ ಗೆದ್ದು, ನಾಲ್ಕನೇ ಬಾರಿಗೆ ಗೆಲ್ಲಲು ತೃಣಮೂಲ ಕಾಂಗ್ರೆಸ್ ತವಕಿಸುತ್ತಿದೆ. ಗೆಲುವು ಅಥವಾ ಸೋಲು ರಾಜಕೀಯ ಚಕ್ರದ ಭಾಗವಾಗಿ ಬರಬಹುದು ಮತ್ತು ಹೋಗಬಹುದು. ಆದರೆ ಈ ಮೂವರು ಮಹಿಳೆಯರು ಯಾವುದೇ ಮೀಸಲಾತಿಗಾಗಿ ಕಾಯದೆ, ಭಾರತೀಯ ರಾಜಕಾರಣದಲ್ಲಿ ತಮ್ಮದೇ ಆದ ಸ್ಥಾನವನ್ನು ಈಗಾಗಲೇ ನಿರ್ಮಿಸಿಕೊಂಡಿದ್ದಾರೆ. ಕೇವಲ ಮನೋಬಲ ಮತ್ತು ಗಟ್ಟಿಧ್ವನಿಯ ಮೂಲಕ ಮಹಿಳೆ ರಾಜಕೀಯದ ಕೇಂದ್ರಕ್ಕೆ ತಲುಪಬಹುದು ಮತ್ತು ಪ್ರಭಾವ ಬೀರಬಹುದು ಎಂಬುದನ್ನು ಇವರು ಸಾಬೀತುಪಡಿಸಿದ್ದಾರೆ. ನಿರಂತರ ಪ್ರತಿರೋಧದ ಶಕ್ತಿ ಇರುವುದು ಮಹಿಳೆಯರಲ್ಲಿ ಎಂಬುದನ್ನು ಸಾರುತ್ತಿದ್ದಾರೆ.

ಸೋಜಿಗದ ಸಂಗತಿ ಎಂದರೆ, ಸರಳತೆಯನ್ನು ಮೈಗೂಡಿಸಿಕೊಂಡ ಮಮತಾ ಬ್ಯಾನರ್ಜಿ ಎಂಬ ಹೆಣ್ಣುಮಗಳು ಮೂರು ಬಾರಿ ಮುಖ್ಯಮಂತ್ರಿಯಾದರೂ, ಪಶ್ಚಿಮ ಬಂಗಾಳದ ಮಹಿಳೆಯರ ಬದುಕು ಬದಲಾಗದಿರುವುದು.

ಪಶ್ಚಿಮ ಬಂಗಾಳದಲ್ಲಿ ಮಣ್ಣುಮುಕ್ಕಿದ್ದ 'ಎಕ್ಸಿಟ್ ಪೋಲ್'

ಬಂಗಾಳದ ನೆಲದಲ್ಲಿ ಸಮೀಕ್ಷಾ ಸಂಸ್ಥೆಗಳು ಮತದಾರರ ಒಲವನ್ನು, ವಿಶೇಷವಾಗಿ ಮಹಿಳಾ ಮತದಾರರ ಮೌನ ನಿಲುವನ್ನು ಗ್ರಹಿಸುವಲ್ಲಿ ಸಂಪೂರ್ಣವಾಗಿ ವಿಫಲವಾದವು. ಅಬ್ಬರದ ಪ್ರಚಾರ, ರಾಷ್ಟ್ರೀಯ ನಾಯಕರ ಸರಣಿ ಪ್ರಚಾರಗಳು ನೋಡಿ ಅವೆಲ್ಲವೂ ಬಿಜೆಪಿಯ ಪರ ಮತಗಳಾಗಿ ಪರಿವರ್ತನೆಯಾಗಲಿವೆ ಎಂದು ಸಮೀಕ್ಷೆಗಳು ತಪ್ಪಾಗಿ ವಿಶ್ಲೇಷಣೆ ಮಾಡಿದ್ದವು

ಚುನಾವಣೆಗಳು ಮುಗಿದ ಬೆನ್ನಲ್ಲೇ ಹೊರಬೀಳುವ ಚುನಾವಣೋತ್ತರ ಸಮೀಕ್ಷೆಗಳು (ಎಕ್ಸಿಟ್ ಪೋಲ್) ಮತದಾರರ ನಾಡಿಮಿಡಿತವನ್ನು ಅಳೆಯುವ ವೈಜ್ಞಾನಿಕ ಪ್ರಯತ್ನ ಎಂದು ಬಿಂಬಿಸಲಾಗುತ್ತದೆ. ಆದರೆ, ಈ ಸಮೀಕ್ಷೆಗಳು ನೀಡುವ ಅಂಕಿ-ಅಂಶಗಳೇ ಅಂತಿಮ ಸತ್ಯವಲ್ಲ ಎಂಬುದಕ್ಕೆ 2021ರ ಪಂಚರಾಜ್ಯ ವಿಧಾನಸಭಾ ಚುನಾವಣಾ ಫಲಿತಾಂಶವೇ ಅತ್ಯುತ್ತಮ ನಿದರ್ಶನ. ಅದರಲ್ಲೂ, ಇಡೀ ದೇಶದ ಗಮನ ಸೆಳೆದಿದ್ದ ಮತ್ತು ತೀವ್ರ ಕುತೂಹಲ ಕೆರಳಿಸಿದ್ದ ಪಶ್ಚಿಮ ಬಂಗಾಳದ ಕಣದಲ್ಲಿ, ಬಹುತೇಕ ಎಲ್ಲಾ ಪ್ರತಿಷ್ಠಿತ ಸಮೀಕ್ಷಾ ಸಂಸ್ಥೆಗಳ ಲೆಕ್ಕಾಚಾರಗಳು ವಾಸ್ತವದ ಕಠೋರ ಸತ್ಯದ ಮುಂದೆ ಸಂಪೂರ್ಣವಾಗಿ ಮಣ್ಣುಮುಕ್ಕಿದ್ದವು.

ಪಶ್ಚಿಮ ಬಂಗಾಳದಲ್ಲಿ ಆಡಳಿತರೂಢ ಮಮತಾ ಬ್ಯಾನರ್ಜಿ ನೇತೃತ್ವದ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಮತ್ತು ಪ್ರಬಲ ಪೈಪೋಟಿ ಒಡ್ಡಿದ್ದ ಬಿಜೆಪಿ ನಡುವೆ ತೀವ್ರ ಹಣಾಹಣಿ ಏರ್ಪಟ್ಟಿತ್ತು. ಸಮೀಕ್ಷಾ ಸಂಸ್ಥೆಗಳು ಈ ಬಿರುಸಿನ ಪ್ರಚಾರವನ್ನು ನೋಡಿ ಅತಂತ್ರ ವಿಧಾನಸಭೆಯ ಅಥವಾ ಬಿಜೆಪಿಯ ಭರ್ಜರಿ ಗೆಲುವಿನ ಭವಿಷ್ಯ ನುಡಿದಿದ್ದವು. ಜನ್ ಕಿ ಬಾತ್ ಸಂಸ್ಥೆ ಬಿಜೆಪಿಗೆ ಬರೋಬ್ಬರಿ 162 ರಿಂದ 185 ಸ್ಥಾನಗಳು ಒಲಿಯಲಿವೆ ಎಂದು ಊಹಿಸಿತ್ತು. ಪ್ರಖ್ಯಾತ ಆಕ್ಸಿಸ್ ಮೈ ಇಂಡಿಯಾ (134-160) ಹಾಗೂ ರಿಪಬ್ಲಿಕ್-ಸಿಎನ್‌ಎಕ್ಸ್ (138-148) ಸಂಸ್ಥೆಗಳು ಕೂಡ ಟಿಎಂಸಿಗಿಂತ ಬಿಜೆಪಿಯೇ ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿ ಅಧಿಕಾರ ಹಿಡಿಯುವ ಸುಳಿವು ನೀಡಿದ್ದವು. ಸಿ-ವೋರ್ಟ ಮಾತ್ರ ಟಿಎಂಸಿಗೆ (152-164) ಅಲ್ಪ ಮುನ್ನಡೆಯನ್ನು ನೀಡಿತ್ತು.

ಆದರೆ, ಚುನಾವಣಾ ಆಯೋಗದ ಅಧಿಕೃತ ಅಂತಿಮ ಫಲಿತಾಂಶ ಹೊರಬಿದ್ದಾಗ ಸಮೀಕ್ಷೆಗಳ ಮರ್ಮ ಬಯಲಾಯಿತು. 292 ಕ್ಷೇತ್ರಗಳಿಗೆ ನಡೆದ ಚುನಾವಣೆಯಲ್ಲಿ ಟಿಎಂಸಿ ಬರೋಬ್ಬರಿ 213 ಸ್ಥಾನಗಳನ್ನು ಬಗಲಿಗೆ ಹಾಕಿಕೊಂಡು ಪ್ರಚಂಡ ಬಹುಮತದೊಂದಿಗೆ ಅಧಿಕಾರ ಉಳಿಸಿಕೊಂಡಿತು. ಸಮೀಕ್ಷೆಗಳಲ್ಲಿ ನೂರರ ಗಡಿ ದಾಟಿ, ಅಧಿಕಾರ ಹಿಡಿಯುವ ಕನಸು ಕಂಡಿದ್ದ ಬಿಜೆಪಿ ಕೇವಲ 77 ಸ್ಥಾನಗಳಿಗೆ ತೃಪ್ತಿಪಡಬೇಕಾಯಿತು. ಎಡರಂಗ ಮತ್ತು ಕಾಂಗ್ರೆಸ್ ಮೈತ್ರಿಕೂಟ ಶೂನ್ಯ ಸಂಪಾದನೆ ಮಾಡಿದರೆ, ಇತರೆ ಅಭ್ಯರ್ಥಿಗಳು 2 ಸ್ಥಾನ ಗೆದ್ದರು. ಸಮೀಕ್ಷೆಗಳು ನೀಡಿದ್ದ ಅಂಕಿ-ಅಂಶಗಳಿಗೂ, ನೈಜ ಫಲಿತಾಂಶಕ್ಕೂ ನಡುವೆ ಅಜಗಜಾಂತರ ವ್ಯತ್ಯಾಸ ಕಂಡುಬಂತು.

ಬಂಗಾಳದ ನೆಲದಲ್ಲಿ ಸಮೀಕ್ಷಾ ಸಂಸ್ಥೆಗಳು ಮತದಾರರ



ಒಲವನ್ನು, ವಿಶೇಷವಾಗಿ ಮಹಿಳಾ ಮತದಾರರ ಮೌನ ನಿಲುವನ್ನು ಗ್ರಹಿಸುವಲ್ಲಿ ಸಂಪೂರ್ಣವಾಗಿ ವಿಫಲವಾದವು. ಅಬ್ಬರದ ಪ್ರಚಾರ, ರಾಷ್ಟ್ರೀಯ ನಾಯಕರ ಸರಣಿ ಪ್ರಚಾರಗಳು ನೋಡಿ ಅವೆಲ್ಲವೂ ಬಿಜೆಪಿಯ ಪರ ಮತಗಳಾಗಿ ಪರಿವರ್ತನೆಯಾಗಲಿವೆ ಎಂದು ಸಮೀಕ್ಷೆಗಳು ತಪ್ಪಾಗಿ ವಿಶ್ಲೇಷಣೆ ಮಾಡಿದ್ದವು. ಆದರೆ ಬಂಗಾಳದ ಜನತೆ, ಈ ಎಲ್ಲಾ ಲೆಕ್ಕಾಚಾರಗಳನ್ನು ಮೀರಿ ಟಿಎಂಸಿಗೆ ನಿರೀಕ್ಷೆಗೂ ಮೀರಿದ ಬೆಂಬಲ ನೀಡುವ ಮೂಲಕ, ಎಕ್ಸಿಟ್ ಪೋಲ್ ಅಂದಾಜುಗಳನ್ನು ಕೇವಲ ಕಾಗದದ ಮೇಲಿನ ಅಂಕಿಗಳನ್ನಾಗಿ ಮಾತ್ರ ಉಳಿಸಿದರು. ಪಶ್ಚಿಮ ಬಂಗಾಳದ ತೀವ್ರ ವೈಫಲ್ಯಕ್ಕೆ ಹೋಲಿಸಿದರೆ, ದಕ್ಷಿಣದ ತಮಿಳುನಾಡು ಮತ್ತು ಕೇರಳದಲ್ಲಿ ಸಮೀಕ್ಷೆಗಳು ವಿಜೇತರ ಟ್ರೆಂಡ್ ಅನ್ನು ಒಂದು ಹಂತದಲ್ಲಿ ಸರಿಯಾಗಿ ಗುರುತಿಸಿದ್ದವು. ತಮಿಳುನಾಡಿನಲ್ಲಿ ಡಿಎಂಕೆ ಮೈತ್ರಿಕೂಟಕ್ಕೆ ಆಕ್ಸಿಸ್ ಮೈ ಇಂಡಿಯಾ 175-195 ಸ್ಥಾನಗಳನ್ನು ನೀಡಿದ್ದರೆ, ವಾಸ್ತವದಲ್ಲಿ ಅದು 159 ಸ್ಥಾನ ಗೆದ್ದು ಸುಲಭವಾಗಿ ಅಧಿಕಾರ ಹಿಡಿಯಿತು. ಎಐಎಡಿಎಂಕೆ ಮೈತ್ರಿಕೂಟವು 75 ಸ್ಥಾನ ಪಡೆಯಿತು. ಅದೇ ರೀತಿ ಕೇರಳದಲ್ಲಿ ಆಡಳಿತ ವಿರೋಧಿ ಅಲೆಯಿಲ್ಲದೆ ಎಲ್‌ಡಿಎಫ್ ಮರಳಿ ಬರುತ್ತದೆ ಎಂದು ಟುಡೇಸ್ ಚಾಣಕ್ಯ (93-111) ನಿಖರವಾಗಿ ಅಂದಾಜಿಸಿತ್ತು. ನೈಜ ಫಲಿತಾಂಶದಲ್ಲೂ ಎಲ್‌ಡಿಎಫ್ 99 ಹಾಗೂ ಯುಡಿಎಫ್ 41 ಸ್ಥಾನ ಪಡೆದುಕೊಂಡವು.

ಇನ್ನು, ಅಸ್ಸಾಂ ಹಾಗೂ ಪುದುಚೇರಿ ರಾಜ್ಯಗಳಲ್ಲಿ ಎಕ್ಸಿಟ್ ಪೋಲ್ ಲೆಕ್ಕಾಚಾರಗಳು ವಾಸ್ತವ ಫಲಿತಾಂಶಕ್ಕೆ ಒಂಚೂರು ಹತ್ತಿರವಾಗಿದ್ದವು. ಅಸ್ಸಾಂನಲ್ಲಿ ಆಕ್ಸಿಸ್ ಮೈ ಇಂಡಿಯಾ ಎನ್‌ಡಿಎ ಮೈತ್ರಿಕೂಟಕ್ಕೆ 75 ರಿಂದ 85 ಸ್ಥಾನಗಳು ಬರಲಿವೆ ಎಂದು ಅಂದಾಜಿಸಿತ್ತು. ಅದರಂತೆ ಎನ್‌ಡಿಎ 75 ಸ್ಥಾನಗಳನ್ನು ಪಡೆದುಕೊಂಡಿತು ಹಾಗೂ ಯುಪಿಎ 50 ಸ್ಥಾನ ಪಡೆಯಿತು. ಪುದುಚೇರಿಯಲ್ಲೂ ಎನ್‌ಡಿಎ ಅಧಿಕಾರ ಹಿಡಿಯಲಿದೆ ಎಂಬ ಬಹುತೇಕ ಎಲ್ಲಾ ಸಮೀಕ್ಷೆಗಳ ಭವಿಷ್ಯ (16-20 ಸ್ಥಾನಗಳ ಅಂದಾಜು) ಹತ್ತಿರಹತ್ತಿರ ನಿಜವಾಗಿತ್ತು; ವಾಸ್ತವ ದಲ್ಲಿ ಎನ್‌ಡಿಎ 16 ಸ್ಥಾನ ಗೆದ್ದರೆ, ಯುಪಿಎ 8 ಸ್ಥಾನ ಗಳಿಸಿತು.

ಇದೇ ಹಿನ್ನೆಲೆಯಲ್ಲಿ, ಏಪ್ರಿಲ್ 29ರಂದು ಮುಕ್ತಾಯಗೊಂಡಿರುವ ಪ್ರಸ್ತುತ 2026ರ ಪಂಚರಾಜ್ಯ ಚುನಾವಣೆಗಳ ಹೊಸ ಎಕ್ಸಿಟ್ ಪೋಲ್ ಅಂಕಿ-ಅಂಶಗಳು ಸಹ ಇದೇ ರೀತಿ ಸುಳ್ಳಾಗುವ ಸಾಧ್ಯತೆಯನ್ನು ತಳ್ಳಿಹಾಕುವಂತಿಲ್ಲ. ಈಗಿನ ಸಮೀಕ್ಷೆಗಳಲ್ಲೂ ಪಶ್ಚಿಮ ಬಂಗಾಳದ ಬಗ್ಗೆ ತೀವ್ರ ಗೊಂದಲಮಯ ಹಾಗೂ ಪರಸ್ಪರ ವಿರುದ್ಧವಾದ ವರದಿಗಳಿವೆ; ಪಿ-ಮಾರ್ಕ್ ಸಮೀಕ್ಷೆಯು ಬಿಜೆಪಿಗೆ (150-175) ಬಹುಮತ ನೀಡಿದ್ದರೆ, ಪೀಪಲ್ಸ್ ಪಲ್ಸ್ ಸಮೀಕ್ಷೆಯು ಟಿಎಂಸಿಗೆ (177-187) ಭಾರಿ ಮುನ್ನಡೆ ನೀಡಿದೆ.

ಮತ್ತೊಂದೆಡೆ, ತಮಿಳುನಾಡಿನಲ್ಲಿ ನಟ ವಿಜಯ್ ಅವರ ತಮಿಳು ವೆಟ್ರಿ ಕಳಗಂ () ಅತಿ ದೊಡ್ಡ ಪಕ್ಷವಾಗಿ (98-120 ಸ್ಥಾನ) ಹೊರಹೊಮ್ಮಲಿದೆ ಎಂದು ಆಕ್ಸಿಸ್ ಮೈ ಇಂಡಿಯಾ ಅಚ್ಚರಿಯ ಲೆಕ್ಕಾಚಾರ ನೀಡಿದೆ. 2021ರ ಹಿಂದಿನ ಅನುಭವವನ್ನು ಗಮನಿಸಿದಾಗ, ಮೇ 4ರಂದು ಪ್ರಕಟವಾಗಲಿರುವ ನೈಜ ಫಲಿತಾಂಶದ ಎದುರು ಸದ್ಯದ ಈ ಅಬ್ಬರದ ಸಮೀಕ್ಷೆಗಳು ವಾಸ್ತವದ ನೆಲೆಗಟ್ಟಿನಲ್ಲಿ ಸಂಪೂರ್ಣ ವಾಗಿ ತಲೆಕೆಳಗಾದರೂ ಆಶ್ಚರ್ಯಪಡಬೇಕಿಲ್ಲ.

ಈ ಚುನಾವಣೋತ್ತರ ಸಮೀಕ್ಷೆಗಳು ಕೇವಲ ಒಂದು ಸ್ಥೂಲ ಅಂದಾಜು ಮಾತ್ರ ಎಂಬುದನ್ನು ಮರೆಯಬಾರದು. ಅಸ್ಸಾಂ ಮತ್ತು ಪುದುಚೇರಿಯಲ್ಲಿ ಇವುಗಳ ಭವಿಷ್ಯ ಯಶಸ್ವಿಯಾದರೂ, ಪಶ್ಚಿಮ ಬಂಗಾಳದಂತಹ ಸಂಕೀರ್ಣ ಹಾಗೂ ಭಾವನಾತ್ಮಕ ರಾಜಕೀಯ ಸನ್ನಿವೇಶವಿರುವ ರಾಜ್ಯಗಳಲ್ಲಿ ಸಮೀಕ್ಷೆಗಳ ಲೆಕ್ಕಾಚಾರಗಳು ಸಂಪೂರ್ಣವಾಗಿ ಬುಡಮೇಲಾಗುವ ಸಾಧ್ಯತೆಯೇ ಹೆಚ್ಚು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಎಕ್ಸಿಟ್ ಪೋಲ್‌ಗಳಿಗಿಂತ ಮತದಾರನ ರಹಸ್ಯ ಮೌನ ತೀರ್ಪೇ ಪರಮಸತ್ಯ ಎಂಬುದನ್ನು 2021ರ ಈ ಪಂಚರಾಜ್ಯ ಫಲಿತಾಂಶಗಳು ನಿರ್ವಿವಾದವಾಗಿ ದೃಢಪಡಿಸಿವೆ.

ಅಸ್ಸಾಂ ಅಖಾಡ ಕಾಂಗ್ರೆಸ್ - ಎಐಯುಡಿಎಫ್ ಜಗಳದಲ್ಲಿ ಕಮಲಕ್ಕೆ ಲಾಭವಾಗಲಿದೆಯೇ?

ಎಐಯುಡಿಎಫ್ ತನ್ನ ಅಲ್ಪಸಂಖ್ಯಾತ ನೆಲೆಯನ್ನು ಮತ್ತಷ್ಟು ಭದ್ರಪಡಿಸಿಕೊಳ್ಳಲು ಯತ್ನಿಸುತ್ತಿದ್ದರೆ, ಕಾಂಗ್ರೆಸ್ ತನ್ನ ಹಳೆಯ ವೈಭವವನ್ನು ಮರಳಿ ಪಡೆಯಲು ಹೆಣಗಾಡುತ್ತಿದೆ. ಈ ಇಬ್ಬರ ಜಗಳದಲ್ಲಿ ಬಿಜೆಪಿ ಮೂರನೆಯವನಾಗಿ ನಿರಾಳವಾಗಿ ಲಾಭ ಪಡೆಯುವ ನಿರೀಕ್ಷೆಯಲ್ಲಿದೆ. ರಾಜ್ಯದ ಭವಿಷ್ಯ ಅಂತಿಮವಾಗಿ ಪ್ರಜ್ಞಾವಂತ ಮತದಾರರ ತೀರ್ಮಾನದ ಮೇಲೆ ನಿಂತಿದೆ

ವಿಧಾನಸಭಾ ಚುನಾವಣೆ ಹತ್ತಿರವಾಗುತ್ತಿದ್ದಂತೆ ಅಸ್ಸಾಂ ರಾಜಕಾರಣದ ಕಾವು ದಿನದಿನವೂ ರಂಗೇರುತ್ತಿದ್ದು, ವಿರೋಧ ಪಕ್ಷಗಳ ಬಿರುಕು ಬಹಿರಂಗವಾಗಿದೆ. ಎಐಯುಡಿಎಫ್ ನಾಯಕ ಬದ್ರುದ್ದೀನ್ ಅಜ್ಮಲ್ ಅವರು ಕಾಂಗ್ರೆಸ್ ಮತ್ತು ಆಡಳಿತರೂಢ ಬಿಜೆಪಿ ಎರಡನ್ನೂ ಗುರಿಯಾಗಿಸಿಕೊಂಡು ಸಿಡಿಸಿರುವ ರಾಜಕೀಯ ಅಸ್ತ್ರ ಭಾರೀ ಚರ್ಚೆಗೆ ಗ್ರಾಸವಾಗಿದೆ. ತರುಣ್ ಗೋಗೋಯ್ ಮತ್ತು ರಾಹುಲ್ ಗಾಂಧಿ ಅವರ ವೈಫಲ್ಯವೇ ಅಸ್ಸಾಂ ಅನ್ನು ಬಿಜೆಪಿಗೆ ಒಪ್ಪಿಸಲು ಕಾರಣ ಹಾಗೂ ಹಿಮಂತ ಬಿಸ್ವಾ ಶರ್ಮಾ ಸರ್ಕಾರವನ್ನು ಕಿತ್ತೊಗೆಯಲೇಬೇಕು, ಆದರೆ ಅದಕ್ಕೆ ರಾಹುಲ್ ಗಾಂಧಿ ಪರ್ಯಾಯವಲ್ಲ ಎಂಬ ಅವರ ಹೇಳಿಕೆಯೇ ರಾಜ್ಯದ ತ್ರಿಕೋನ ರಾಜಕೀಯ ಸ್ಪರ್ಧೆಯ ನೈಜ ಚಿತ್ರಣವನ್ನು ಬಿಚ್ಚಿಟ್ಟಿದೆ.

ಅಸ್ಸಾಂನಲ್ಲಿ ಸತತ ಮೂರು ಅವಧಿಗೆ ಆಡಳಿತ ನಡೆಸಿದ್ದ ಕಾಂಗ್ರೆಸ್ ಪತನಕ್ಕೆ ಅದರ ನಾಯಕರ ಅಹಂಕಾರವೇ ಕಾರಣ ಎಂಬುದು ಅಜ್ಮಲ್ ಅವರ ಪ್ರಮುಖ ವಾದ. 2006ರಲ್ಲಿ ಅಜ್ಮಲ್ ಯಾರು? ಎಂದು ಅಂದಿನ ಸಿಎಂ ತರುಣ್ ಗೋಗೋಯ್ ವ್ಯಂಗ್ಯವಾಡಿದ್ದನ್ನು ಅವರು ಇಂದಿಗೂ ಮರೆತಿಲ್ಲ. ಅಲ್ಪಸಂಖ್ಯಾತರನ್ನು ಕೇವಲ ವೋಟ್ ಬ್ಯಾಂಕ್ ಆಗಿ ಬಳಸಿಕೊಂಡ ಕಾಂಗ್ರೆಸ್, ಅವರನ್ನು ರಾಜಕೀಯವಾಗಿ ಬೆಳೆಯಲು ಬಿಡಲಿಲ್ಲ. ಇದೇ ರಾಜಕೀಯ ಮೌಢ್ಯ ಮತ್ತು ರಾಹುಲ್ ಗಾಂಧಿವಯರ ದುರ್ಬಲ ನಾಯಕತ್ವವು 2016 ಮತ್ತು 2021ರ ಚುನಾವಣೆಗಳಲ್ಲಿ ಬಿಜೆಪಿಗೆ ಅಧಿಕಾರವನ್ನು ಉಡುಗೊರೆಯಾಗಿ ನೀಡಿತು ಎಂದು ಅವರು ನೇರವಾಗಿ ವಾಗ್ದಾಳಿ ನಡೆಸಿದ್ದಾರೆ.

ಕಾಂಗ್ರೆಸ್‌ಅನ್ನು ಟೀಕಿಸುವ ಭರದಲ್ಲಿ ಅಜ್ಮಲ್ ಅವರು



ಬಿಜೆಪಿ ಬಗ್ಗೆ ಯಾವುದೇ ಮೃದು ಧೋರಣೆ ಹೊಂದಿಲ್ಲ. ಹಾಲಿ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ನೇತೃತ್ವದ ಸರ್ಕಾರವನ್ನು ಅಧಿಕಾರದಿಂದ ಕೆಳಗಿಳಿಸುವುದು ಅನಿವಾರ್ಯ ಎಂದು ಹೇಳಿದ್ದಾರೆ. ಒತ್ತುವರಿ ತೆರವು ಕಾರ್ಯಾಚರಣೆಯ ನೆಪದಲ್ಲಿ ಮಿಯಾ ಮುಸ್ಲಿಮರನ್ನು (ಬಂಗಾಳಿ ಭಾಷಿಕ ವಲಸಿಗರು) ಗುರಿಯಾಗಿಸಿಕೊಂಡು ಕಿರುಕುಳ ನೀಡಲಾಗುತ್ತಿದೆ, ಹಾಗೂ ದ್ವೇಷದ ಭಾಷಣಗಳ ಮೂಲಕ ಸಮಾಜವನ್ನು ಒಡೆಯಲಾಗುತ್ತಿದೆ. ಅಸ್ಸಾಂನ ಅಸ್ಮಿತೆ ಉಳಿಸಲು ಈ ಸರ್ಕಾರವನ್ನು ಬೇರುಸಹಿತ ಕಿತ್ತೊಗೆಯಲೇಬೇಕು ಎಂದು ಅವರು ಕಟುವಾಗಿ ಎಚ್ಚರಿಸಿದ್ದಾರೆ.

ಅಜ್ಮಲ್ ಅವರ ಈ ಗಂಭೀರ ಆರೋಪಗಳಿಗೆ ಕಾಂಗ್ರೆಸ್ ಕೂಡ ಅಷ್ಟೇ ಪ್ರಬಲವಾಗಿ ತಿರುಗೇಟು ನೀಡುತ್ತಿದೆ. ಅಸ್ಸಾಂನಲ್ಲಿ ಹಿಮಂತ ಬಿಸ್ವಾ ಶರ್ಮಾ ಅವರಿಗೆ ಪರೋಕ್ಷವಾಗಿ ನೆರವಾಗುತ್ತಿರುವುದೇ ಬದ್ರುದ್ದೀನ್ ಅಜ್ಮಲ್, ಅವರು ವಾಸ್ತವದಲ್ಲಿ ಬಿಜೆಪಿಯ ಬಿ-ಟೀಮ್ ಎಂದು ಕೈ ನಾಯಕರು ಆರೋಪಿಸುತ್ತಾರೆ. ಅಜ್ಮಲ್ ಅವರ ವಿವಾದಾತ್ಮಕ ಮತ್ತು ಧ್ರುವೀಕರಣದ ಹೇಳಿಕೆಗಳೇ ಬಿಜೆಪಿಗೆ ಹಿಂದೂ ಮತಗಳನ್ನು ಒಗ್ಗೂಡಿಸಲು ಅಸ್ತ್ರವಾಗುತ್ತಿವೆ. ರಾಹುಲ್ ಗಾಂಧಿ ಅವರು ಸಂವಿಧಾನ ಮತ್ತು ಸೌಹಾರ್ದತೆಗಾಗಿ ಹೋರಾಡುತ್ತಿದ್ದು, ಅವರೇ ದೇಶಕ್ಕೆ ಮತ್ತು ರಾಜ್ಯಕ್ಕೆ ನೈಜ ಪರ್ಯಾಯ ನಾಯಕರು ಎಂದು ಕಾಂಗ್ರೆಸ್ ತನ್ನ ನಿಲುವನ್ನು ದೃಢವಾಗಿ ಸಮರ್ಥಿಸಿಕೊಳ್ಳುತ್ತಿದೆ.

ವಿರೋಧ ಪಕ್ಷಗಳ ನಡುವಿನ ಈ ಕಚ್ಚಾಟವು ಆಡಳಿತಾರೂಢ ಬಿಜೆಪಿಗೆ ಸಹಜವಾಗಿಯೇ ರಾಜಕೀಯ ವರದಾನವಾಗಿ ಪರಿಣಮಿಸಿದೆ. ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಅವರು ಈ ಒಡಕನ್ನು ಬಹಳ ಚಾಣಾಕ್ಷತನದಿಂದ ಗಮನಿಸುತ್ತಿದ್ದಾರೆ. ಕಾಂಗ್ರೆಸ್ ಮತ್ತು ಎಐಯುಡಿಎಫ್ ಪರಸ್ಪರ ಕೆಸರೆರಚಾಟದಲ್ಲಿ ತೊಡಗಿರುವಾಗ, ಬಿಜೆಪಿ ತನ್ನ ಅಜೆಂಡಾವನ್ನು ಮುಂದಿಟ್ಟುಕೊಂಡು ಪ್ರಚಾರದಲ್ಲಿ ನಿರತವಾಗಿದೆ. ವಿರೋಧ ಪಕ್ಷಗಳ ನಡುವಿನ ನಾಯಕತ್ವದ ಗೊಂದಲವನ್ನು ತನ್ನತ್ತ ಸೆಳೆಯುವಲ್ಲಿ ಕಮಲ ಪಾಳೆಯ ಯಶಸ್ವಿಯಾಗುತ್ತಿರುವ ಲಕ್ಷಣಗಳು ಸ್ಪಷ್ಟವಾಗಿ ಗೋಚರಿಸುತ್ತಿವೆ.

ಅಸ್ಸಾಂ ವಿಧಾನಸಭೆಯ 126 ಸ್ಥಾನಗಳ ಪೈಕಿ ಶೇ. 30ರಿಂದ 35ರಷ್ಟು ಮುಸ್ಲಿಂ ಮತಗಳು ಅತ್ಯಂತ ನಿರ್ಣಾಯಕ ಪಾತ್ರ ವಹಿಸುತ್ತವೆ. ಸಾಂಪ್ರದಾಯಿಕವಾಗಿ ಈ ಮತಗಳು ಕಾಂಗ್ರೆಸ್ ಮತ್ತು ಎಐಯುಡಿಎಫ್ ನಡುವೆ ಹಂಚಿಹೋಗುತ್ತವೆ. ಅಜ್ಮಲ್ ಅವರು ಕಾಂಗ್ರೆಸ್ ಮತ್ತು ರಾಹುಲ್ ಗಾಂಧಿಯನ್ನು ತಿರಸ್ಕರಿಸುವಂತೆ ಅಲ್ಪಸಂಖ್ಯಾತರಿಗೆ ಕರೆ ನೀಡುತ್ತಿರುವುದು ನೇರವಾಗಿ ವಿಪಕ್ಷಗಳ ಮತಗಳ ವಿಭಜನೆಗೆ ಕಾರಣವಾಗಲಿದೆ. ಆಡಳಿತ ವಿರೋಧಿ ಅಲೆಯ ಲಾಭವನ್ನು ಒಗ್ಗೂಡಿಸುವ ಬದಲು, ವಿಪಕ್ಷಗಳು ಪ್ರತ್ಯೇಕವಾಗಿ ಸ್ಪರ್ಧಿಸಿದರೆ ಅದರ ಸಂಪೂರ್ಣ ಲಾಭವು ಚುನಾವಣಾ ಅಂಕಗಣಿತದಲ್ಲಿ ಬಿಜೆಪಿಯ ಪಾಲಾಗುವುದು ನಿಚ್ಚಳ.

ಅಸ್ಸಾಂನ ಪ್ರಸ್ತುತ ರಾಜಕೀಯವು ಯಾರು ಯಾರ ಬಿ-ಟೀಮ್ ಎಂಬ ಆರೋಪಗಳ ಸುತ್ತಲೇ ಗಿರಕಿ ಹೊಡೆಯುತ್ತಿದೆ. ತಮ್ಮ ಪಕ್ಷವನ್ನು ಟೀಕಿಸುವ ಕಾಂಗ್ರೆಸ್ ನಾಯಕರು ವಾಸ್ತವದಲ್ಲಿ ತಾವೇ ಬಿಜೆಪಿಯ ಎ-ಟೀಮ್ ಆಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಅಜ್ಮಲ್ ದೂರುತ್ತಾರೆ. ಸರ್ಕಾರವನ್ನು ಸಮರ್ಥವಾಗಿ ಎದುರಿಸುವಲ್ಲಿ ವಿಫಲವಾಗಿರುವ ಕಾಂಗ್ರೆಸ್, ತನ್ನ ಅಸ್ತಿತ್ವದ ಉಳಿವಿಗಾಗಿ ಎಐಯುಡಿಎಫ್ ಮೇಲೆ ಗೂಬೆ ಕೂರಿಸುತ್ತಿದೆ ಎಂಬುದು ಅವರ ವಾದ. ಈ ಪರಸ್ಪರ ದೋಷಾರೋಪಣೆಯ ರಾಜಕಾರಣವು ಅಂತಿಮವಾಗಿ ಮತದಾರರನ್ನು, ವಿಶೇಷವಾಗಿ ಅಲ್ಪಸಂಖ್ಯಾತ ಮತ್ತು ಜಾತ್ಯತೀತ ಒಲವುಳ್ಳವರು ಯಾವ ಕಡೆ ವಾಲುತ್ತಾರೆ ಎಂಬುದು ಸದ್ಯದ ಕುತೂಹಲ ಸಂಗತಿ.

ಬದ್ರುದ್ದೀನ್ ಅಜ್ಮಲ್ ಅವರ ಹೇಳಿಕೆಗಳು ಅಸ್ಸಾಂನಲ್ಲಿ ಮುಂಬರುವ ಚುನಾವಣೆಯ ದಿಕ್ಸೂಚಿಯನ್ನು ಸ್ಪಷ್ಟಪಡಿಸಿವೆ. ಇದು ಕೇವಲ ಬಿಜೆಪಿ ಮತ್ತು ಕಾಂಗ್ರೆಸ್ ನಡುವಿನ ನೇರ ಹಣಾಹಣಿಯಾಗಿರದೆ, ತ್ರಿಕೋನ ಸ್ಪರ್ಧೆಯ ಕದನವಾಗಿ ಮಾರ್ಪಟ್ಟಿದೆ. ಎಐಯುಡಿಎಫ್ ತನ್ನ ಅಲ್ಪಸಂಖ್ಯಾತ ನೆಲೆಯನ್ನು ಮತ್ತಷ್ಟು ಭದ್ರಪಡಿಸಿಕೊಳ್ಳಲು ಯತ್ನಿಸುತ್ತಿದ್ದರೆ, ಕಾಂಗ್ರೆಸ್ ತನ್ನ ಹಳೆಯ ವೈಭವವನ್ನು ಮರಳಿ ಪಡೆಯಲು ಹೆಣಗಾಡುತ್ತಿದೆ. ಈ ಇಬ್ಬರ ಜಗಳದಲ್ಲಿ ಬಿಜೆಪಿ ಮೂರನೆಯವನಾಗಿ ನಿರಾಳವಾಗಿ ಲಾಭ ಪಡೆಯುವ ನಿರೀಕ್ಷೆಯಲ್ಲಿದೆ. ರಾಜ್ಯದ ಭವಿಷ್ಯ ಅಂತಿಮವಾಗಿ ಪ್ರಜ್ಞಾವಂತ ಮತದಾರರ ತೀರ್ಮಾನದ ಮೇಲೆ ನಿಂತಿದೆ.

ನವ ಜೋಡಿಗಳಿಗೆ ಶುಭ ಕೋರಿದ ಬಯ್ಯಾಪುರ

ಲಿಂಗಸುಗೂರು : ನಿಮ್ಮ ದಾಂಪತ್ಯ ಜೀವನ ಪ್ರೀತಿ,ವಿಶ್ವಾಸ, ನಂಬಿಕೆ ಮತ್ತು ನಗುವಿನಿಂದ ತುಂಬಿರಲಿ, ಸದಾ ಒಬ್ಬರನೊಬ್ಬರು ಅರಿತುಕೊಂಡು ಬದುಕಿ, ಜೀವನದ ಪ್ರತೀ ಹೆಜ್ಜೆಯಲ್ಲೂ ಜೊತೆಯಾಗಿ ಸಾಗಿ ಸುಂದರ ಬದುಕು ಕಟ್ಟಿಕೊಳ್ಳಿ ಎಂದು ಕಾಂಗ್ರೆಸ್ ಯುವ ಮುಖಂಡ ಅಭಿಷೇಕ ಗೌಡ ಪಾಟೀಲ್ ಬಯ್ಯಾಪುರ ನವ ಜೋಡಿಗಳಿಗೆ ಶುಭ ಹಾರೈಸಿದರು.

ಸಮೀಪದ ಹುನಕುಂಟಿ ಗ್ರಾಮದ ಶ್ರೀ ಬಸವೇಶ್ವರ ನೂತನ ದೇವಾಲಯ ಲೋಕಾರ್ಪಣೆ ಕಳಸಾರೋಹಣ, ಸಾಮೂಹಿಕ ವಿವಾಹ ಮತ್ತು ಧರ್ಮಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸತಿ ಪತಿಗಳು ಇಬ್ಬರು ಸುಖ -ದುಃಖಗಳಲ್ಲಿ ಜೊತೆಯಾಗಿ, ಕನಸುಗಳನ್ನು ಒಟ್ಟಿಗೆ ಕಟ್ಟುವ ಈ ಬಂಧ ಶಾಶ್ವತವಾಗಿರಲಿ,ನಿಮ್ಮ ಸಂಸಾರದಲ್ಲಿ ಸದಾ ಸಂತೋಷ,



ಸಮೃದ್ಧಿ, ಆರೋಗ್ಯ ತುಂಬಿರಲಿ ಎಂದರು. ಇದಕ್ಕೂ ಮೊದಲು ನೂತನ ದೇವಸ್ಥಾನಕ್ಕೆ ಭೇಟಿ ನೀಡಿ ಬಸವೇಶ್ವರರ ದರ್ಶನ ಪಡೆದು ದೇವರ ಕೃಪೆಗೆ ಪಾತ್ರರಾದರು. ಈ ಸಂದರ್ಭದಲ್ಲಿ ಗ್ರಾಮದ ಗುರು ಹಿರಿಯರು ಗ್ರಾಮದ ಕಾಂಗ್ರೆಸ್ ಕಾರ್ಯಕರ್ತರು ಇದ್ದರು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR

ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಏಕ ಕಾಲಕ್ಕೆ
ಬಳ್ಳಾರಿ,
ಕೊಪ್ಪಳ,
ಯಾದಗಿರಿ,
ರಾಯಚೂರು,
ಕಲಬುರ್ಗಿ,
ಬೀದರ,
ವಿಜಯನಗರ
ಜಿಲ್ಲೆಗಳಲ್ಲಿ ಪ್ರಕಟ

ಸಂಪಾದಕರು: ಸುಂದರ್ Editor : Sundar

Volume: 01, Issue: 112 RNI Number : KNKAN/25/A2770 01-05-2026 Friday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :112 ರಾಯಚೂರು 01-05-2026 ಶುಕ್ರವಾರ ಪುಟ 04 ಬೆಲೆ ರೂ.2/- ಮೊ:8660146563

ನರ್ಮದಾ ನದಿಯಲ್ಲಿ ಮಗುಚಿದ ಪ್ರವಾಸಿಗರ ದೋಣಿ: 7 ಸಾವು, 18 ಮಂದಿ ನಾಪತ್ತೆ

ಜಬಲ್ಪುರ (ಮಧ್ಯಪ್ರದೇಶ): ಏಕಾಏಕಿ ಬಿರುಗಾಳಿ ಬೀಸಿದ್ದರಿಂದ ನರ್ಮದಾ ನದಿಯಲ್ಲಿ ಪ್ರವಾಸಿಗರಿದ್ದ ಕ್ರೂಸ್ ದೋಣಿ ಮುಳುಗಿ ಏಳು ಜನ ಮೃತಪಟ್ಟು, ಹಲವರು ನಾಪತ್ತೆಯಾಗಿರುವ ಘಟನೆ ಮಧ್ಯಪ್ರದೇಶದ ಜಬಲ್ಪುರ ಜಿಲ್ಲೆಯ ಬರಗಿ ಅಣೆಕಟ್ಟೆಯ ಬಳಿ ಇಂದು ಸಂಭವಿಸಿದೆ.

40 ಪ್ರಯಾಣಿಕರಿದ್ದ ಕ್ರೂಸ್ ದೋಣಿ ಬಿರುಗಾಳಿಯಿಂದ ನದಿಯಲ್ಲಿ ಮುಳುಗಿ ಅವಘಡ ಸಂಭವಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಘಟನೆಯ ಬೆನ್ನಲ್ಲೇ ರಕ್ಷಣಾ ಕಾರ್ಯಾಚರಣೆ ಆರಂಭಿಸಿ, 18 ಜನರನ್ನು ರಕ್ಷಿಸಿದ್ದೇವೆ. ಆದರೆ ಇನ್ನೂ 15-18 ಜನರು ನಾಪತ್ತೆಯಾಗಿದ್ದಾರೆ ಎಂದು ಪೊಲೀಸ್ ವರಿಷ್ಠಾಧಿಕಾರಿ (ಬರಗಿ ಪಟ್ಟಣ) ಅಂಜುಲ್ ಮಿಶ್ರಾ ಮಾಹಿತಿ ನೀಡಿದ್ದಾರೆ.


ಹಠಾತ್ ಬಿರುಗಾಳಿಯಿಂದಾಗಿ ಕ್ರೂಸ್ ದೋಣಿ ಮುಳುಗಿದಾಗ ಅದರಲ್ಲಿ ಅಂದಾಜು 40 ಜನರಿದ್ದರು. ಸದ್ಯ ನದಿಯಿಂದ ಏಳು ಶವಗಳನ್ನು ಹೊರತೆಗೆಯಲಾಗಿದೆ. ಆದರೆ ಕಾಣೆಯಾದ ಪ್ರಯಾಣಿಕರನ್ನು ಪತ್ತೆಹಚ್ಚಲು ಮತ್ತು ರಕ್ಷಿಸಲು ಕಾರ್ಯಾಚರಣೆ ಭರದಿಂದ ಸಾಗುತ್ತಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ತಿಳಿಸಿದ್ದಾರೆ.

ಸಿಎಂ ಸಂತಾಪ: ಮಧ್ಯಪ್ರದೇಶದ ಮುಖ್ಯಮಂತ್ರಿ ಮೋಹನ್ ಯಾದವ್ ಅವರು ದುರಂತದ ಬಗ್ಗೆ ದುಃಖ ವ್ಯಕ್ತಪಡಿಸಿದ್ದು, ರಕ್ಷಣಾ ಕಾರ್ಯವನ್ನು ತ್ವರಿತಗೊಳಿಸಲು ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಜಬಲ್ಪುರದಲ್ಲಿ ತೀವ್ರ ಬಿರುಗಾಳಿಯಿಂದ ಬರಗಿ ಅಣೆಕಟ್ಟೆಯಲ್ಲಿ ಸಂಭವಿಸಿದ ದುರಂತ ಸಂಬಂಧ ಸ್ಥಳೀಯ ಆಡಳಿತ ಮತ್ತು ರಕ್ಷಣಾ ಪಡೆಗಳ ಕಾರ್ಯಾಚರಣೆ ನಿರಂತರವಾಗಿ ಮುಂದುವರೆದಿದೆ. ಲೋಕೋಪಯೋಗಿ ಸಚಿವ ರಾಕೇಶ್ ಸಿಂಗ್, ಪ್ರವಾಸೋದ್ಯಮ ಸಚಿವ ಧ್ರುವೇಂದ್ರ ಸಿಂಗ್ ಲೋಧಿ, ವಿಭಾಗೀಯ ಉಸ್ತುವಾರಿ ಎಸಿಎಸ್, ಎಡಿಜಿ ಮತ್ತು ಸ್ಥಳೀಯ ಸಾರ್ವಜನಿಕ ಪ್ರತಿನಿಧಿಗಳು ತಕ್ಷಣ ಸ್ಥಳಕ್ಕೆ ತಲುಪಲು ನಿರ್ದೇಶಿಸಲಾಗಿದೆ ಎಂದು ನಲ್ಲಿ ಸಿಎಂ ಬರೆದುಕೊಂಡಿದ್ದಾರೆ.

ತ್ವರಿತ ರಕ್ಷಣಾ ಕಾರ್ಯಾಚರಣೆಯ ಮೂಲಕ 15 ಪ್ರವಾಸಿಗರನ್ನು ರಕ್ಷಿಸಲಾಗಿದೆ. ಕಾಣೆಯಾದವರನ್ನು ಸಾಧ್ಯವಾದಷ್ಟು ಬೇಗ ಪತ್ತೆಹಚ್ಚಲು ಕಾರ್ಯಾಚರಣೆ ನಡೆಯುತ್ತಿದೆ. ಈ ಸಮಯದಲ್ಲಿ ರಾಜ್ಯ ಸರ್ಕಾರವು ಪೀಡಿತ ಕುಟುಂಬಗಳೊಂದಿಗೆ ನಿಲ್ಲುತ್ತದೆ. ಮತ್ತು ಸಾಧ್ಯವಿರುವ ಎಲ್ಲ ಸಹಾಯವನ್ನು ಮಾಡುವುದಾಗಿ ಸಿಎಂ ಭರವಸೆ ನೀಡಿದ್ದಾರೆ.

ಇಂದು ಸಂಜೆ 6:00 ರ ಸುಮಾರಿಗೆ ಹಠಾತ್ ಬಿರುಗಾಳಿಯಿಂದಾಗಿ ಪ್ರವಾಸಿಗರನ್ನು ಕರೆದೊಯ್ಯುತ್ತಿದ್ದ ಕ್ರೂಸ್ ದೋಣಿ ಮಗುಚಿ ಈ ದುರಂತ ಸಂಭವಿಸಿದೆ ಎಂದು ಪ್ರತ್ಯಕ್ಷದರ್ಶಿಗಳು ತಿಳಿಸಿದ್ದಾರೆ. ಜಬಲ್ಪುರದಿಂದ ಸುಮಾರು 35 ಕಿಲೋಮೀಟರ್ ದೂರದಲ್ಲಿರುವ ನರ್ಮದಾ ನದಿಯ ದಂಡೆಯಲ್ಲಿರುವ ಬರಗಿ ಅಣೆಕಟ್ಟೆಯಲ್ಲಿ ಮಧ್ಯಪ್ರದೇಶ ಪ್ರವಾಸೋದ್ಯಮ ನಿರ್ವಹಿಸುವ ರೆಸಾರ್ಟ್ ಹಲವಾರು ಜಲ ಕ್ರೀಡಾ ಚಟುವಟಿಕೆಗಳನ್ನು ನಿರ್ವಹಿಸುತ್ತದೆ.



ಮೇ.03ರಂದು ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರ ರಾಯಚೂರು ಜಿಲ್ಲಾ ಪ್ರವಾಸ ಕಾರ್ಯಕ್ರಮ

ರಾಯಚೂರು ಏ.30-

ರಾಜ್ಯದ ಉಪ ಮುಖ್ಯ ಮಂತ್ರಿಗಳಾದ ಡಿ.ಕೆ. ಶಿವಕುಮಾರ್ ಅವರು ಮೇ.03ರಂದು ರಾಯಚೂರು ಜಿಲ್ಲಾ ಪ್ರವಾಸ ಕೈಗೊಂಡಿದ್ದಾರೆ.



ಅವರು ಅಂದು ಬೆಳಿಗ್ಗೆ 11.30ಕ್ಕೆ ಹೊಸಪೇಟೆ ತಾಲೂಕಿನ ಹಂಪಿಯ ಕನ್ನಡ ವಿಶ್ವವಿದ್ಯಾಲಯದ ಹೆಲಿಪ್ಯಾಡ್ ಆವರಣದಿಂದ ನಿರ್ಗಮಿಸಿ, ಮಧ್ಯಾಹ್ನ 12ಗಂಟೆಗೆ ರಾಯಚೂರು ಜಿಲ್ಲೆಯ ಸಿಂಧನೂರಿನ ತಾಲೂಕು ಕ್ರೀಡಾಂಗಣಕ್ಕೆ ಆಗಮಿಸಿ, ವಿಧಾನ ಪರಿಷತ್ ಸದಸ್ಯರಾದ ಬಸನಗೌಡ ಬಾದರ್ಲಿ ಇವರ ಶ್ರೀ.ಬಸನಗೌಡ ಫೌಂಡೇಷನ್ ಸಿಂಧನೂರು ವತಿಯಿಂದ ಹಮ್ಮಿಕೊಂಡಿರುವ ಉಚಿತ ಸಾಮೂಹಿಕ ವಿವಾಹ ಹಾಗೂ ಇತರೆ ಕಾರ್ಯಕ್ರಮಗಳಲ್ಲಿ ಭಾಗವಹಿಸಲಿದ್ದಾರೆ.

ಮಧ್ಯಾಹ್ನ 3ಗಂಟೆಗೆ ಸಿಂಧನೂರು ತಾಲೂಕು ಕ್ರೀಡಾಂಗಣದಿದ ಹೆಲಿಕ್ಯಾಪ್ಟರ್ ಮೂಲಕ ನಿರ್ಗಮಿಸಿ ಕೇಂದ್ರ ಸ್ಥಾನ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ ಎಂದು ಉಪಮುಖ್ಯಮಂತ್ರಿಗಳ ಹೆಚ್ಚುವರಿ ಕಾರ್ಯದರ್ಶಿ ಬಿ.ಎಸ್. ಶ್ರೀಧರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಮಿಷನ್ ಏಡ್ಸ್ ಸುರಕ್ಷಾ ಅಭಿಯಾನ
ಪರಿಣಾಮಕಾರಿ ಅನುಷ್ಠಾನಗೊಳಿಸಿ: ಜಿಲ್ಲಾಧಿಕಾರಿ ನಿತೀಶ್ ಕೆ

ರಾಯಚೂರು,ಏ.30-

ಯಾವುದೇ ಕಾಯಿಲೆಯಾಗಿರಲಿ ಅದನ್ನು ಹರಡದಂತೆ ಮುಂಜಾಗ್ರತಾ ಕ್ರಮ ವಹಿಸುವುದು ಮುಖ್ಯವಾಗಿದೆ. ಮೊಬೈಲ್‌ನಲ್ಲಿ ಎಚ್‌ಐವಿ ಸ್ಥಿತಿಗತಿಯನ್ನು ಪರಿಶೀಲನೆಗೆ ಒಳಪಡಿಸಿಕೊಳ್ಳ ಮೂಲಕ ಜಿಲ್ಲೆಯಲ್ಲಿ ಮಿಷನ್ ಏಡ್ಸ್ ಸುರಕ್ಷಾ ಅಭಿಯಾನವನ್ನು ಪರಿ ಣಾಮಕಾರಿಯಾಗಿ ಅನುಷ್ಠಾನಗೊಳಿಸಬೇಕೆಂದು ಜಿಲ್ಲಾಧಿಕಾರಿ ನಿತೀಶ್ ಕೆ. ಅವರು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.



ಏಪ್ರಿಲ್ 29ರ ಬುಧವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಜಿಲ್ಲಾ ಆರೋಗ್ಯ ಅಭಿಯಾನ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಸರ್ಕಾರವು ಸಮುದಾಯದ ಆರೋಗ್ಯ ಸಂರಕ್ಷಣೆಗೆ ಮತ್ತು ಸಮಾಜದ ಯುವ ಜನತೆಯ ಆರೋಗ್ಯ ಸುರಕ್ಷತೆಗೆ ಹೆಚ್ಚಿನ ಒತ್ತು ನೀಡಿ ಹೆಚ್‌ಐವಿ ಸೋಂಕನ್ನು ಆರಂಭದಲ್ಲಿಯೇ ಗುರ್ತಿಸಲು ಸರಳ ವಿಧಾನವಾದ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ವೈಯಕ್ತಿಕ ಸ್ಥಿತಿಯಲು ಜಿಲ್ಲೆಯಾದ್ಯಂತ ವ್ಯಾಪಕ ಜಾಗೃತಿ ಮೂಡಿಸಬೇಕು ಎಂದರು.

ಈಗಾಗಲೆ ವೈದ್ಯರು, ಸಿಬ್ಬಂದಿಯರು ಅಭಿಯಾನವನ್ನು ಯಶಸ್ವಿಯಾಗಿ ಕೈಗೊಂಡಿದ್ದು ,ಸಂತಸದಾಯಕವಾಗಿದೆ. ಆದರೂ ಸಹ ಗೌಪ್ಯತೆಯೊಂದಿಗೆ ಸ್ವಯಂ ಪರೀಕ್ಷೆ ಮಾಡಿಕೊಳ್ಳಲು ಸಹಾಯಕವಾದ ಕ್ಯೂಆರ್ ಕೋಡ್ ಸ್ಕ್ಯಾನ್ ಮಾಡಿ ಪ್ರಶ್ನೋತ್ತರದಲ್ಲಿ ಸ್ವಯಂ ಉತ್ತರಗಳಿಂದ, ಸೋಂಕು ಹರಡಬಹುದಾದ ಸಾಧ್ಯತೆಗಳಿದ್ದಲ್ಲಿ ಕನಿಷ್ಟ ಶೇಖಡಾ 95 ರಷ್ಟು ಜನ ತಪಾಸಣೆ ಮಾಡಿಸಿಕೊಳ್ಳಲು, ಖಚಿತಪಟ್ಟ ಸೋಂಕಿತರಲ್ಲಿ ಶೇ.95 ರಷ್ಟು ಜನರನ್ನು ಎಆರ್‌ಟಿ ಕೇಂದ್ರ ಗಳಿಗೆ ಚಿಕಿತ್ಸೆ ಗೆ ಬರುವಂತೆ ಮಾಡಲು ಹಾಗೂ ಸೋಂಕಿತರಾಗಿ ಎಆರ್‌ಟಿ ಚಿಕಿತ್ಸೆ ಪಡೆಯುವರಲ್ಲಿ ಶೇ.95 ರಷ್ಟು ಜನರನ್ನು ಸದಾ ನಿಗಾವಣೆ, ಆಪ್ತ ಸಮಾಲೋಚನೆ, ಜಾಗೃತಿ ಮೂಲಕ ಚಿಕಿತ್ಸೆ ಬಿಡದಂತೆ, ವೈರಲ್ ಲೋಡ್ ಹೆಚ್ಚಾಗದಂತೆ ಹಾಗೂ ಹೈರಿಸ್ಕಲ್ಲಿ ಇರುವ ಜನತೆಗೆ ಮೂಲ ಉದ್ದೇಶ ತಲುಪಿಸಬೇಕೆಂದು ಸಂಬಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ರಕ್ತದಾನ ಶಿಬಿರಗಳ ಆಯೋಜನೆಗೆ ಸೂಚನೆ: ರಾಯಚೂರು ಮತ್ತು ಸಿಂಧನೂರುನಲ್ಲಿರುವ ಬ್ಲಡ್ ಬ್ಯಾಂಕ್‌ಗಳನ್ನು ಪ್ರತಿ ತಿಂಗಳು ಶಿಬಿರ ಏರ್ಪಡಿಸಿ, ರಕ್ತದ ಕೊರತೆಯಾಗದಂತೆ ನೋಡಿಬೇಕು. ಸಂಗ್ರಹಣೆಯ 25% ರಷ್ಟು ರಿಮ್ಸ್ ಬ್ಲಡ್ ಬ್ಯಾಂಕ್‌ಗೆ ನೀಡುವ ಬಗ್ಗೆ ಹೆಚ್ಚಿನ ಕಾಳಜಿ ವಹಿಸಬೇಕು ಎಂದರು.

100 ದಿನಗಳ ಕ್ಷಯಮುಕ್ತ ಅಭಿಯಾನಕ್ಕೆ ಸೂಕ್ತ ಯೋಜನೆ ರೂಪಿಸಿ: 100 ದಿನಗಳ ಕ್ಷಯಮುಕ್ತ ಅಭಿಯಾನದಡಿ ಕ್ಷಯರೋಗ ನಿರ್ಮೂಲನೆ ಮಾಡಲು ಮಾನದಂಡದಡಿ ಗುರುತಿಸಲ್ಪಟ್ಟ 209 ಗ್ರಾಮಗಳಲ್ಲಿ ಚಿಕಿತ್ಸೆ ಪಡೆಯುತ್ತಿರುವ ಕುಟುಂಬದ ಎಲ್ಲ ಸದಸ್ಯರು ಸೇರಿದಂತೆ ಸಂಪೂರ್ಣ ಜನಸಂಖ್ಯೆಯನ್ನು ಪರೀಕ್ಷಿಸಿ ಅಗತ್ಯವಿದ್ದವರಿಗೆ ಕಫ ಪರೀಕ್ಷೆ,

3 ನೇ ಪುಟಕ್ಕೆ

ಪುಣೆ : ಕ್ಲೋರಿನ್ ಸೋರಿಕೆ, 24 ಮಂದಿ ಆಸ್ಪತ್ರೆಗೆ ದಾಖಲು

ಪುಣೆ, ಏ. 30 (ಪಿಟಿಐ)



ಪುಣೆಯ ಕೊಂಧ್ವಾ'ದ'ಲ್ಲಿ ಕ್ಲೋರಿನ್ ಅನಿಲ ಸೋರಿಕೆಯಾದ ನಂತರ ಕನಿಷ್ಠ 22 ನಿವಾಸಿಗಳು ಮತ್ತು ಇಬ್ಬರು ಅಗ್ನಿಶಾಮಕ ದಳದವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ ಎಂದು ಅಗ್ನಿಶಾಮಕ ಅಧಿಕಾರಿಗಳು ತಿಳಿಸಿದ್ದಾರೆ.

ಗಂಗಾಧಾಮ್ ಪ್ರದೇಶದ ನಿಷ್ಕ್ರಿಯ ನೀರು ಶುದ್ಧೀಕರಣ ಘಟಕದ ಗೋಡೌನ್‌ನಲ್ಲಿ ಕ್ಲೋರಿನ್ ಹೊಂದಿರುವ ಕೈಬಿಟ್ಟ ಟ್ಯಾಂಕ್‌ನಿಂದ ಸೋರಿಕೆ ಉಂಟಾಗಿದೆ ಎಂದು ಅವರು ಹೇಳಿದರು.ಸೋರಿಕೆ ಮತ್ತು ನಂತರದ ಅನಿಲ ಹರಡುವಿಕೆಯ ನಂತರ, ಸುತ್ತಮುತ್ತಲಿನ ನಿವಾಸಿಗಳು ಉಸಿರಾಟದ ತೊಂದರೆ ಅನುಭವಿಸಿದರು.

ಕರೆ ಸ್ವೀಕರಿಸಿದ ನಂತರ, ಅಗ್ನಿಶಾಮಕ ತಂಡಗಳನ್ನು ಕಳುಹಿಸಲಾಯಿತು. ಹಲವಾರು ನಾಗರಿಕರನ್ನು ಸ್ಥಳಾಂತರಿಸಲಾಯಿತು.

ಕೆ.ಪಿ.ಎಸ್.ಸಿ ಗೆಜೆಟೆಡ್ ಪ್ರೊಬೇಷನರಿ ವ್ಯಕ್ತಿತ್ವ ಪರೀಕ್ಷೆಗೆ
ಅರ್ಹತೆ ಪಡೆದ ಅಭ್ಯರ್ಥಿಗಳಿಗಾಗಿ ಅಣುಕು ವ್ಯಕ್ತಿತ್ವ ಪರೀಕ್ಷೆ ಆಯೋಜನೆ

ರಾಯಚೂರು,ಏ.30-

ಕರ್ನಾಟಕ ಲೋಕಸೇವಾ ಆಯೋಗ (ಕೆ.ಪಿ.ಎಸ್.ಸಿ) ವತಿಯಿಂದ 2023-24ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ ಗ್ರೂಪ್-ಎ ಹಾಗೂ ಬಿ ವೃಂದದ ಒಟ್ಟು 384 ಹುದ್ದೆಗಳ (310-ಆರ್‌ಪಿಸಿ+74-ಹೆಚ್‌ಕೆ) ನೇಮಕಾತಿ ಪ್ರಕ್ರಿಯೆ ನಡೆಯುತ್ತಿದ್ದು, ಮುಖ್ಯ ಪರೀಕ್ಷೆಯಲ್ಲಿ ತೇರ್ಗಡೆಗೊಂಡು 1:3ರ ಅನುಪಾತದಲ್ಲಿ ವ್ಯಕ್ತಿತ್ವ ಪರೀಕ್ಷೆಗೆ ಅರ್ಹತೆ ಪಡೆದ ಅಭ್ಯರ್ಥಿಗಳಿಗಾಗಿ ಸಂದರ್ಶನ ಪೂರ್ವ ಸಿದ್ದತೆ ಹಾಗೂ ಆತ್ಮವಿಶ್ವಾಸ ವೃದ್ಧಿ ಉದ್ದೇಶದಿಂದ ರಾಯಚೂರು ಜಿಲ್ಲಾಡಳಿತ ವತಿಯಿಂದ ಅಣುಕು ವ್ಯಕ್ತಿತ್ವ ಪರೀಕ್ಷೆ (Mock Personality Test) ಆಯೋಜಿಸಲಾಗುತ್ತಿದೆ.



ಸ್ಪರ್ಧಾತ್ಮಕ ಪರೀಕ್ಷೆಗಳಲ್ಲಿ ಯಶಸ್ಸು ಸಾಧಿಸಲು ವಿಷಯ ಜ್ಞಾನದ ಜೊತೆಗೆ ವ್ಯಕ್ತಿತ್ವ, ಸಂವಹನ ಕೌಶಲ್ಯ, ನಿರ್ಧಾರ ಕೈಗೊಳ್ಳುವ ಸಾಮರ್ಥ್ಯ, ಆಡಳಿತಾತ್ಮಕ ಮನೋಭಾವ ಹಾಗೂ ಸಮಕಾಲೀನ ವಿಷಯಗಳ ಅರಿವು ಅತ್ಯಂತ ಅವಶ್ಯಕವಾಗಿದೆ. ಈ ಹಿನ್ನೆಲೆಯಲ್ಲಿ ಅಭ್ಯರ್ಥಿಗಳಿಗೆ ನೈಜ ಸಂದರ್ಶನದ ಅನುಭವ ಕಲ್ಪಿಸುವ ನಿಟ್ಟಿನಲ್ಲಿ ಈ ಕಾರ್ಯಕ್ರಮ ರೂಪಿಸಲಾಗಿದೆ.

ಅಣುಕು ವ್ಯಕ್ತಿತ್ವ ಪರೀಕ್ಷೆಯಲ್ಲಿ ಅನುಭವಿ ಜಿಲ್ಲಾಮಟ್ಟದ ಅಧಿಕಾರಿಗಳು, ವಿಷಯ ತಜ್ಞರು, ಹಿರಿಯ ಸ್ಪರ್ಧಾತ್ಮಕ ಪರೀಕ್ಷಾ ಮಾರ್ಗದರ್ಶಕರು ಹಾಗೂ ಸಂದರ್ಶನ ಪ್ಯಾನೆಲ್ ಸದಸ್ಯರು ಭಾಗವಹಿಸಿ, ಅಭ್ಯರ್ಥಿಗಳ ಸಂದರ್ಶನ ನಡೆಸುವ ಮೂಲಕ ವೈಯಕ್ತಿಕ ಪ್ರತಿಕ್ರಿಯೆ, ಸಂದರ್ಶನ ತಂತ್ರಗಳು, ಸಾಮಾನ್ಯ ತಪ್ಪುಗಳು ಹಾಗೂ ವ್ಯಕ್ತಿತ್ವ ಅಭಿವೃದ್ದಿಗೆ ಸಂಬಧಿಸಿದ ಉಪಯುಕ್ತ ಸಲಹೆಗಳನ್ನು ನೀಡಲಿದ್ದಾರೆ. ಭಾಗವಹಿಸಲು ಇಚ್ಚಿಸುವ ಅರ್ಹ ಅಭ್ಯರ್ಥಿಗಳು ತಮ್ಮ ಹೆಸರು, ಪರೀಕ್ಷಾ

3 ನೇ ಪುಟಕ್ಕೆ

ಸರಕಾರಿ ಆಸ್ಪತ್ರೆಯಲ್ಲಿ ಪತ್ನಿಗೆ ಹೆರಿಗೆ ಮಾಡಿಸಿ, ಸರಳತೆ ಮೆರದ ಜಿ.ಪಂ ಸಿಇಒ





ರಾಯಚೂರು,ಏ.30-

ಸರಕಾರಿ ಆಸ್ಪತ್ರೆಯಲ್ಲಿ ಆರ್ಥಿಕವಾಗಿ ದುರ್ಬಲರು ಮಾತ್ರ ಸೇವೆ ಪಡೆಯುತ್ತಾರೆ ಎಂದು ಅಸಡ್ಡೆ ತೋರುವವರಿಗೆ ರಾಯಚೂರು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ್ ಕಾಂದೂ ಅವರು ತಮ್ಮ ಪತ್ನಿಯ ಹೆರಿಗೆಯನ್ನು ಏಪ್ರಿಲ್ 26ರ ಭಾನುವಾರ ದಂದು ರಾಯಚೂರು ನಗರದ ರಿಮ್ಸ್ ಆಸ್ಪತ್ರೆಯಲ್ಲಿ ಮಾಡಿಸಿ, ಸರಳತೆ ಮೆರೆಯುವ ಮೂಲಕ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಸರ್ಕಾರಿ ಆಸ್ಪತ್ರೆಗಳಲ್ಲಿ ಚಿಕಿತ್ಸೆ ಪಡೆಯುವಂತೆ ಸಂದೇಶ ರವಾನಿಸಿದ್ದಾರೆ.

ನಗರದಲ್ಲಿ ಹಲವಾರು ಖಾಸಗಿ ಅಸ್ಪತ್ರೆಗಳಿದ್ದರೂ ಸಹ ಮನಸ್ಸು ಮಾಡದೆ ಸರಕಾರದ ಆಸ್ಪತ್ರೆಗಳಲ್ಲಿ ಸುಸಜ್ಜಿತ ಹೆರಿಗೆ ಕೊಠಡಿ, ವಾರ್ಡ್, ನುರಿತ ತಜ್ಞ ವೈದ್ಯರ ಸೇವೆ, ನಿಯಮಿತವಾಗಿ ನಿಗಾ ವಹಿಸುವ ಸಿಬ್ಬಂದಿಗಳ ಸೇವೆಯನ್ನು ಪ್ರತಿಯೊಬ್ಬರೂ ಪಡೆಯಲಿ ಎಂಬ ಸದುದ್ದೇಶದಿಂದ ತಮ್ಮ ಪತ್ನಿಯ ಹೆರಿಗೆಯನ್ನು ರಿಮ್ಸ್ ಆಸ್ಪತ್ರೆಯಲ್ಲಿ ಮಾಡಿಸಿದ್ದು, ಅವರ ಪತ್ನಿ ಗಂಡು ಮಗುವಿಗೆ ಜನ್ಮ ನೀಡಿದ್ದಾರೆ. ಪ್ರಸ್ತುತ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಆಧೀನದ ನಗರದ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಆರೈಕೆಯಲ್ಲಿದ್ದು, ತಾಯಿ ಮಗು

3 ನೇ ಪುಟಕ್ಕೆ

ಹೇಮರೆಡ್ಡಿ ಮಲ್ಲಮ್ಮ ಜಯಂತಿ ಪೂರ್ವಭಾವಿ ಸಭೆ
ಅರ್ಥಪೂರ್ಣ ಆಚರಣೆ ಅಗತ್ಯ ಸಿದ್ಧತೆ ಮಾಡಿಕೊಳ್ಳಿ: ಎಡಿಸಿ ಶಿವಾನಂದ



ರಾಯಚೂರು,ಏ.30-

ಹೇಮರೆಡ್ಡಿ ಮಲ್ಲಮ್ಮ ಜಯಂತಿ ಅದ್ದೂರಿ ಮತ್ತು ಅರ್ಥಪೂರ್ಣವಾಗಿ ಆಚರಿಸಲು ಅಗತ್ಯ ಸಿದ್ಧತೆ ಮಾಡಿಕೊಳ್ಳಬೇಕು ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ ಅವರು ಸಂಬಧಿಸಿದ ಇಲಾಖೆಯ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಏಪ್ರಿಲ್ 30ರ ಬುಧವಾರ ದಂದು ನಗರದ ನೂತನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಶ್ರೀ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಹೇಮರೆಡ್ಡಿ ಮಲ್ಲಮ್ಮ ಜಯಂತಿ ಮೇ.10ರಂದು ಆಚರಣೆ ಮಾಡಲಾಗುವುದು. ಜಯಂತಿ ದಿನದಂದು ಜಿಲ್ಲೆಯ ಎಲ್ಲ ಸರ್ಕಾರಿ ಕಚೇರಿ, ತಾಲೂಕು ಕೇಂದ್ರಗಳಲ್ಲಿ ಮತ್ತು ತಾಲೂಕು ಕಚೇರಿ, ಗ್ರಾಮ ಪಂಚಾಯತ್, ಶಾಲಾ, ಕಾಲೇಜು ಹಾಗೂ ವಸತಿ ನಿಲಯಗಳಲ್ಲಿ ಶ್ರೀ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಕಡ್ಡಾಯವಾಗಿ ಆಚರಣೆ ಮಾಡಬೇಕಾಗಿದ್ದು, ಈ ಬಗ್ಗೆ ಸಂಬಧಿಸಿದ ಅಧಿಕಾರಿಗಳು ಕ್ರಮ ವಹಿಸಬೇಕು ಎಂದರು.

ಜಿಲ್ಲಾ ಕೇಂದ್ರದಲ್ಲಿ ಹೇಮರೆಡ್ಡಿ ಮಲ್ಲಮ್ಮ ಜಯಂತಿ ಆಚರಣೆಗಾಗಿ ಸಂಬಂಧಿಸಿದ ಇಲಾಖೆ ಅಚ್ಚುಕಟ್ಟು ವ್ಯವಸ್ಥೆ ಕಲ್ಪಿಸಬೇಕು. ಮೇ 10ರ ಬೆಳಗ್ಗೆ 10 ಗಂಟೆಗೆ ನಗರದ ಪಂಡಿತ ಸಿದ್ದರಾಮ ರಂಗಮಂದಿರದಲ್ಲಿ ವೇದಿಕೆ ಕಾರ್ಯಕ್ರಮ ನಡೆಯಲಿದ್ದು, ಎಲ್ಲ ಇಲಾಖೆಗಳು ಪರಸ್ಪರ ಸಮನ್ವಯದೊಂದಿಗೆ ಜಯಂತಿ ಆಚರಣೆಗೆ ಅಚ್ಚುಕಟ್ಟು ವ್ಯವಸ್ಥೆ ಕಲ್ಪಿಸಬೇಕು. ಜಯಂತಿ ಆಚರಣೆ ಕಾರ್ಯಕ್ರಮಕ್ಕೆ ಸಮಾಜದ ಬಂಧುಗಳ ಸಹಕಾರವೂ ಅಗತ್ಯವಿದ್ದು, ಜಿಲ್ಲಾಡಳಿತದೊಂದಿಗೆ ಸಹಕರಿಸಿ ವ್ಯವಸ್ಥಿತ ಜಯಂತಿ ಆಚರಣೆಗೆ ಸಮಾಜದವರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಬೇಕೆಂದರು.

ಸರ್ಕಾರದ ಮಾರ್ಗಸೂಚಿಯನ್ವಯ ಜಯಂತಿ

3 ನೇ ಪುಟಕ್ಕೆ

ಆಸ್ತಿಗಾಗಿ ಅಣ್ಣ-ತಮ್ಮನ ನಡುವೆ ಗಲಾಟೆ, ಬಾಲಕ ಬಲಿ

ಸಿಂಧನೂರು: ತಾಲೂಕಿನ ಅಲಬನೂರು ಗ್ರಾಮದಲ್ಲಿ ಏ.29 ಬುಧವಾರ ಬೆಳಿಗ್ಗೆ ಸುಮಾರು 8 ಗಂಟೆಗೆ ನಾಗರಾಜ ತಂದೆ ಸಿದ್ದಪ್ಪ (13) ವರ್ಷ ಕೊಲೆಯಾದ ಬಾಲಕ ಸಿದ್ದಪ್ಪ ಹಾಗೂ ಆತನ ತಮ್ಮ ಬಸವರಾಜ ನಡುವೆ ಆಸ್ತಿಗೆ ಸಂಬಂಧಿಸಿದಂತೆ ಆವಾಗವಾಗ ವಾಗ್ವಾದ ನಡೆಯುತ್ತಲೆ ಇತ್ತು. ಇದರ ಬಗ್ಗೆ ನ್ಯಾಯಾಲಯದಲ್ಲಿ ವಿಚಾರಣೆ ನಡೆಯುತ್ತಿದೆ ಎನ್ನಲಾಗಿದೆ. 4 ಎಕರೆಯ ಜಮೀನಿನನಲ್ಲಿ ಇಬ್ಬರಿಗೆ ಸಮನಾಗಿ ಪಾಲು ಕೊಡಲು ಕೊಲೆ ಆರೋಪಿ ತಮ್ಮ ಬಸವರಾಜ ಅಣ್ಣ ಸಿದ್ದಪ್ಪನಿಗೆ ಕೇಳಿದ್ದರು ಸಹ ಪಾಲು ಕೊಡದೇ ಅಣ್ಣ ಸಿದ್ದಪ್ಪ ಸತಾಯಿಸಿದ್ದೆ ಈ ಘಟನೆಗೆ ಕಾರಣವಾಗಿದೆ.

ಈ ವಿಚಾರದ ಬಗ್ಗೆ ತುಂಬಾ ವರ್ಷಗಳಿಂದಲೂ ಇಬ್ಬರ ನಡುವೆ ವೈಷಮ್ಯವಿತ್ತು. ಕೊಲೆ ಆರೋಪಿ ಬಸವರಾಜ ಸಿರುಗುಪ್ಪದಲ್ಲಿ ಹೆಂಡತಿ ಮನೆಯಲ್ಲಿ ವಾಸವಾಗಿದ್ದು, ಏ.28 ಮಂಗಳವಾರದಂದು ಅಲಬನೂರಿಗೆ ಬಂದು, ಆಸ್ತಿ ವಿಷಯಕ್ಕೆ ಗಲಾಟೆ ನಡೆದಿದೆ. ಏ.29 ಬುಧವಾರ ಅಣ್ಣ ಸಿದ್ದಪ್ಪ ಊರಲ್ಲಿರುವ ಮದುವೆಯಲ್ಲಿ ಅಡುಗೆ ಮಾಡಲು ಹೋಗಿದ್ದು, ಅತ್ತಿಗೆ ಹಾಗೂ ಅಣ್ಣನ ಚಿಕ್ಕ ಮಕ್ಕಳು ಮನೆಯಲ್ಲಿದ್ದರು.

ತಮ್ಮ ಬಸವರಾಜ ಅಣ್ಣನ ಮನೆಗೆ ಹೋಗಿ ಅತ್ತಿಗೆಗೆ ಒನಕೆಯಿಂದ ಒಡೆದು ಚಾಕು ಹಾಕಲು ಹೋದಾಗ ತಪ್ಪಿಸಿಕೊಂಡು ಹೋಗಿದ್ದು, ಎದುರಿಗೆ ಬಂದ 13 ವರ್ಷದ ಅಣ್ಣನ ಮಗ ನಾಗಾರಾಜುಗೆ ಚಾಕುವಿನಿಂದ ಇರಿದು ಕೊಲೆ ಮಾಡಿ ಮತ್ತೆ ಅತ್ತಿಗೆ ಮೇಲೆ ಹಲ್ಲೆಗೆ ಮುಂದಾಗಿದ್ದಾನೆ ಆಗ ತಪ್ಪಿಸಿಕೊಂಡು ಹೋಗಿ ಜೀವ ಉಳಿಸಿಕೊಂಡಿದ್ದಾಳೆ.

ವಿಷಯ ತಿಳಿದು ಗ್ರಾಮೀಣ ಪೊಲೀಸ್ ಠಾಣೆಯ ಪಿಎಸ್‌ಐ ಮೌನೇಶ ರಾಠೋಡ್ ಸಿಬ್ಬಂದಿಗಳ ಜೊತೆಗೆ ಅಲಬನೂರು ಗ್ರಾಮಕ್ಕೆ ತೆರಳಿ ಕೊಲೆ ಮಾಡಿದ ಆರೋಪಿ ಬಸವರಾಜನನ್ನು ಬಂಧಿಸಿ ಮೃತ ದೇಹವನ್ನು ತಾಲೂಕು ಸಾರ್ವಜನಿಕ ಆಸ್ಪತ್ರೆಗೆ ಮರಣೋತ್ತರ ಪರೀಕ್ಷೆಗಾಗಿ ಕಳುಹಿಸಿದ್ದಾರೆ.



ಹಲ್ಲೆಗೊಳಗಾದ ಅಮೃತಮ್ಮ ಗಂಡ ಸಿದ್ದಪ್ಪರನ್ನು ಚಿಕಿತ್ಸೆ ಗೆಂದು ತಾಲೂಕು ಸಾರ್ವಜನಿಕ ಆಸ್ಪತ್ರೆಗೆ ದಾಖಲು ಮಾಡಿ ಚಿಕಿತ್ಸೆ ನೀಡಲಾಗುತ್ತಿದೆ. ನನ್ನ ಮಗನನ್ನು ಕೊಲೆ ಮಾಡಿದ ಬಸವರಾಜ ಹಾಗೂ ವೀರೇಶ ಆತನ ತಾಯಿ ಚಿನ್ನಮ್ಮ ಇವರ ಮೇಲೆ ಕ್ರಮ ಕೈಗೊಳ್ಳುವಂತೆ ಮೃತಪಟ್ಟ ಬಾಲಕನ ತಂದೆ ಸಿದ್ದಪ್ಪ ಪೊಲೀಸ್ ಅಧಿಕಾರಿಗಳಿಗೆ ಒತ್ತಾಯ ಮಾಡಿದರು.

ಬೆಂಗಳೂರು 'ಗ್ಯಾಸ್ ಚೇಂಬರ ಆಗದಂತೆ ತಡೆಯಲು ಹಸಿರು ಹೊದಿಕೆ ಹೆಚ್ಚಳ ಅನಿವಾರ್ಯ: ಅರಣ್ಯ ಸಚಿವ ಈಶ್ವರ ಖಂಡ್ರೆ

ಕೊಪ್ಪಳ ಏ.30

ವೈಜ್ಞಾನಿಕವಾಗಿ ಪರಿಸರ ಸಮತೋಲನ ಕಾಪಾಡಿಕೊಳ್ಳಲು ಶೇ. 33% ರಷ್ಟು ಹಸಿರು ಹೊದಿಕೆ ಇದ್ದಾಗ ಮಾತ್ರ ಆರೋಗ್ಯಕರ ನಗರವನ್ನು ಕಟ್ಟಲು ಸಾಧ್ಯ, ಬೆಳೆಯುತ್ತಿರುವ ಬೆಂಗಳೂರಿನಲ್ಲಿ ಹಸಿರು ಹೊದಿಕೆ ಕ್ಷೀಣಿಸುತ್ತಿದ್ದು, 1.40 ಕೋಟಿ ಜನಸಂಖ್ಯೆ ಇರುವ ಬೆಂಗಳೂರು ನಗರದಲ್ಲಿ ಕನಿಷ್ಠ 10 ಕೋಟಿ ಮರಗಳನ್ನು ಪೋಷಿಸುವ ಅಗತ್ಯವಿದೆ ಎಂದು ಅರಣ್ಯ, ಪರಿಸರ ಜಾಗೂ ಜೀವಿಶಾಸ್ತ್ರ, ಸಚಿವರಾದ ಈಶ್ವರ ಬಿ ಖಂಡ್ರೆ, ಅವರು ಅಭಿಪ್ರಾಯ ವ್ಯಕ್ತಪಡಿಸಿದರು.

ಕರ್ನಾಟಕ ಮಾಧ್ಯಮ ಅಕಾಡೆಮಿ ಹಾಗೂ ಅಸರ್ ಸೋಷಿಯಲ್ ಇಂಪ್ಯಾಕ್ಟ್ ಅಡ್ವೈಸರ್ ಸಂಸ್ಥೆಯ ಸಹಯೋಗದಲ್ಲಿ ಇಂದು ನಗರದ ಖಾಸಗಿ ಹೋಟೆಲ್ ನಲ್ಲಿ ಆಯೋಜಿಸಿದ್ದ ಬೆಂಗಳೂರಿನಲ್ಲಿ ತಾಪಮಾನ ವೈಪರೀತ್ಯ ಹಾಗೂ ಅದರ ಪರಿಣಾಮಗಳ ಕುರಿತು ಮಾಧ್ಯಮ ಕಾರ್ಯಾಗಾರವನ್ನು ಉದ್ಘಾಟಿಸಿ ಮಾತನಾಡಿದ ಅವರು ಒಬ್ಬ ಮನಷ್ಯನಿಗೆ ಉತ್ತಮ ಆಮ್ಲಜನಕ ದೊರಕಲು ಕನಿಷ್ಠ 7 ಮರಗಳು ಇರಬೇಕು ಎಂದು ವಿಜ್ಞಾನ ಪ್ರತಿಪಾದಿಸುತ್ತದೆ ಎಂದರು.

ಬೆಂಗಳೂರಿನ ಪರಿಸರದಲ್ಲಾಗುತ್ತಿರುವ ಬದಲಾವಣೆ ಹಾಗೂ ಅರಣ್ಯ ಇಲಾಖೆಯ ಮುಂದಿನ ಯೋಜನೆಗಳ ಕುರಿತು ಸುದೀರ್ಘವಾಗಿ ಮಾತನಾಡಿದ ಅವರು ಒಂದು ಕಾಲದಲ್ಲಿ 'ನಿವೃತ್ತರ ಸ್ವರ್ಗ' ಹಾಗೂ 'ಹವಾನಿಯಂತ್ರಿತ ನಗರ' ಎಂದು ಖ್ಯಾತಿ ಪಡೆದಿದ್ದ ಬೆಂಗಳೂರು ಇಂದು ಕಾಂಕ್ರೀಟ್ ಜಂಗಲ್ ಆಗಿ ಮಾರ್ಪಡುತ್ತಿರುವುದು ಆತಂಕಕಾರಿ ವಿಷಯವಾಗಿದೆ.

ಬೆಂಗಳೂರು ಇದೇ ರೀತಿಯ ಬೆಳವಣಿಗೆ ಹಾಗೂ ವಾಹನ ದಟ್ಟಣೆ ಹೆಚ್ಚಿಸಿಕೊಂಡಲ್ಲಿ ನವದೆಹಲಿಯಂತೆ 'ಗ್ಯಾಸ್ ಚೇಂಬ'ರ್ ಆಗುವುದನ್ನು ತಪ್ಪಿಸಲು ಹಸಿರು ಹೊದಿಕೆಯನ್ನು ಹೆಚ್ಚಿಸುವ ತತ್ ಕ್ಷಣದ ಅಗತ್ಯವಿದೆ ಎಂದು ಹೇಳಿದರು.

★ಗತವೈಭವದ ಮರುಸ್ಥಾಪನೆ:★

ಕೆಂಪೇಗೌಡರು ನಿರ್ಮಿಸಿದ ಹಸಿರು ಬೆಂಗಳೂರನ್ನು ಮರಳಿ ಪಡೆಯಲು ಅರಣ್ಯ ಇಲಾಖೆ ಬದ್ಧವಾಗಿದೆ. ನಗರದ ಸುತ್ತಮುತ್ತಲ ಹಸಿರು ಹೊದಿಕೆಯನ್ನು ಮರುಸ್ಥಾಪಿಸಲು ಮತ್ತು ಪರಿಸರ ಮಾಲಿನ್ಯ ತಡೆಗಟ್ಟಲು ಕಠಿಣ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಸಚಿವರು ಭರವಸೆ ನೀಡಿದರು.

ಮಾಲಿನ್ಯ ಮತ್ತು ಕೆರೆಗಳ ಅವನತಿ:

ಬೆಂಗಳೂರಿನಲ್ಲಿದ್ದ ಸುಮಾರು 250 ಕೆರೆಗಳಲ್ಲಿ ಹಲವು ಅಭಿವೃದ್ಧಿಯಲ್ಲಿ ಮಾಯವಾಗಿದ್ದು, ಇನ್ನೂ ಕೆಲವು ಇಂದು ತ್ಯಾಜ್ಯ ನೀರು ಸೇರಿ ಕಲುಷಿತಗೊಂಡಿವೆ. ಇದರಿಂದ ಜಲ ಮತ್ತು ವಾಯು ಮಾಲಿನ್ಯ ಉಂಟಾಗುತ್ತಿದ್ದು, ಸಾರ್ವಜನಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಸಂಚಾರ ದಟ್ಟಣೆ ಮತ್ತು ವಾಹನಗಳ ಕಾರ್ಬನ್ ಡೈಆಕ್ಸೈಡ್ ಹೊರಸೂಸುವಿಕೆಯಿಂದ ತಾಪಮಾನ ಏರುತ್ತಿದೆ ಎಂದು ಅವರು ಆತಂಕ ವ್ಯಕ್ತಪಡಿಸಿದರು.

★11 ಕೋಟಿ ಸಸಿಗಳ ನಾಟಿ:★

ಅರಣ್ಯ ಇಲಾಖೆಯ ಸಾಧನೆಯನ್ನು ಹಂಚಿಕೊಂಡ ಸಚಿವರು, ಕಳೆದ ಮೂರು ವರ್ಷಗಳಲ್ಲಿ ರಾಜ್ಯದಾದ್ಯಂತ ಸುಮಾರು 11 ಕೋಟಿ ಸಸಿಗಳನ್ನು ನೆಡಲಾಗಿದೆ. ಇವುಗಳಲ್ಲಿ ಎಷ್ಟು ಸಸಿಗಳು ಬದುಕುಳಿದಿವೆ ಎಂಬುದರ ಬಗ್ಗೆ ವೈಜ್ಞಾನಿಕ ಸಮೀಕ್ಷೆ ನಡೆಸಿ, ಆ ವರದಿಯನ್ನು ಇಲಾಖೆಯ ವೆಬ್ಸೈಟ್ನಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಅಪ್ಲೋಡ್ ಮಾಡಲು ಸೂಚನೆ ನೀಡಿದ್ದೇನೆ,



ಎಂದು ಮಾಹಿತಿ ನೀಡಿದರು.

ಬೆಂಗಳೂರಿನ ಶ್ವಾಸ ತಾಣಗಳ ರಕ್ಷಣೆಗೆ ಅರಣ್ಯ ಇಲಾಖೆ ಮೆಗಾ ಪ್ಲಾನ್ ರೂಪಿಸಿದ್ದು, ನಗರದ ಆಯಕಟ್ಟಿನ ಪ್ರದೇಶಗಳಾದ ಕಾಡುಗೋಡಿ ಮತ್ತು ತುರಹಳ್ಳಿ ಭಾಗದಲ್ಲಿ ಅಕ್ರಮವಾಗಿ ಒತ್ತುವರಿಯಾಗಿದ್ದ ಸುಮಾರು 10,000 ಕೋಟಿ ಮೌಲ್ಯದ ಅರಣ್ಯ ಭೂಮಿಯನ್ನು ಮರುವಶಪಡಿಸಿಕೊಳ್ಳಲಾಗಿದೆ. ಸಿಲಿಕಾನ್ ಸಿಟಿಯಲ್ಲಿ ದಿನೇ ದಿನೇ ಕುಸಿಯುತ್ತಿರುವ ಹಸಿರು ಹೊದಿಕೆಯನ್ನು ಹೆಚ್ಚಿಸಲು ಮತ್ತು ಪರಿಸರ ಸಮತೋಲನ ಕಾಯ್ದುಕೊಳ್ಳಲು ಕರ್ನಾಟಕ ಅರಣ್ಯ ಇಲಾಖೆ ಐತಿಹಾಸಿಕ ಹೆಜ್ಜೆ ಇರಿಸಿದೆ.

★ಮರುವಶವಾದ ಭೂಮಿಯಲ್ಲಿ 'ನೆಡುತೋಪು'ಗಳ ನಿರ್ಮಾಣ:★

ಕೇವಲ ಒತ್ತುವರಿ ತೆರವು ಮಾಡುವುದಷ್ಟೇ ಅಲ್ಲದೆ, ಭೂಗಳ್ಳರು ಮತ್ತೆ ಅತಿಕ್ರಮಣ ಮಾಡದಂತೆ ತಡೆಯಲು ಇಲಾಖೆ ಮಾಸ್ಟರ್ ಪ್ಲಾನ್ ರೂಪಿಸಿದೆ. ಮರುವಶಪಡಿಸಿಕೊಂಡ ಜಾಗಕ್ಕೆ ತಕ್ಷಣವೇ ಕಾಂಪೌಂಡ್ ನಿರ್ಮಿಸಿ, ಸಾವಿರಾರು ಸಸಿಗಳನ್ನು ನೆಡುವ ಮೂಲಕ ಆ ಪ್ರದೇಶಗಳನ್ನು 'ನೆಡುತೋಪು' ( ) ಗಳನ್ನಾಗಿ ಪರಿವರ್ತಿಸಲಾಗುವುದು. ಇದು ನಗರದ ಜನತೆಗೆ ಶುದ್ಧ ಗಾಳಿ ನೀಡುವ ನೈಸರ್ಗಿಕ ಕೇಂದ್ರಗಳಾಗಿ ಕಾರ್ಯನಿರ್ವಹಿಸಲಿವೆ ಎಂದು ತಿಳಿಸಿದರು.

★ಬೆಂಗಳೂರಿಗೆ ಸಿಗಲಿದೆ ಮತ್ತೊಂದು 'ಲಾಲ್ಬಾಗ್'

ನಗರದ ಹಸಿರು ವಿಸ್ತೀರ್ಣ ಹೆಚ್ಚಿಸುವ ಸಲುವಾಗಿ ಬೆಂಗಳೂರು ಉತ್ತರ ತಾಲೂಕಿನ ಮಾದಪ್ಪನಹಳ್ಳಿಯ 153 ಎಕರೆ ಪ್ರದೇಶದಲ್ಲಿ 'ವಿಶ್ವಗುರು ಬಸವಣ್ಣನವರ ಬೃಹತ್ ಜೈವಿಕ ಉದ್ಯಾನವನ' ತಲೆ ಎತ್ತಲಿದೆ ಎಂದು ಹೇಳಿದರು.

★ಹವಾಮಾನ ಬದಲಾವಣೆ ತಡೆಗೆ ಜಿಲ್ಲಾ ಮಟ್ಟದ ಕ್ರಿಯಾ ಯೋಜನೆ★

ಪರಿಸರ ಮಾಲಿನ್ಯ ನಿಯಂತ್ರಣಕ್ಕಾಗಿ ಸಂಸ್ಥೆ ರೂಪಿಸಿರುವ ಕರ್ನಾಟಕ ರಾಜ್ಯ ಕ್ರಿಯಾ ಯೋಜನೆಗೆ ಸರ್ಕಾರದ ಒಪ್ಪಿಗೆ ಸಿಕ್ಕಿದೆ. ರಾಜ್ಯದ ಎಲ್ಲಾ 31 ಜಿಲ್ಲೆಗಳಲ್ಲಿ ಹವಾಮಾನ ವೈಪರೀತ್ಯ ಎದುರಿಸಲು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ತರಬೇತಿ ಮತ್ತು ಅನುಷ್ಠಾನ ಪ್ರಕ್ರಿಯೆಗಳು ಶೀಘ್ರವೇ ಆರಂಭವಾಗಲಿವೆ.

''ವೃಕ್ಷೋ ರಕ್ಷಿತಃ ರಕ್ಷಿತಃ'' ಎಂಬ ಧ್ಯೇಯದೊಂದಿಗೆ ಬೆಂಗಳೂರಿನ ಕೆರೆಗಳ ಪುನರ್ನಿರ್ಮಾಣ ಮತ್ತು ನಗರದ ಹಸಿರು ವಲಯವನ್ನು ವಿಸ್ತರಿಸುವುದೇ ನಮ್ಮ ಅಂತಿಮ ಗುರಿಯಾಗಿದೆ ಎಂದು ಅವರು ತಿಳಿಸಿದರು.

ಇಂದಿನ ಕಾರ್ಯಾಗಾರದಲ್ಲಿ ವಿಷಯ ತಜ್ಞರು ಮಂಡಿಸುವ ವಿಷಯ ಹಾಗೂ ಮಾಧ್ಯಮ ಪ್ರತಿನಿಧಿಗಳು ಚರ್ಚಿಸುವ ವಿಷಯದ ಕುರಿತು ವಿಸ್ತೃತ ವರದಿ ಸಲ್ಲಿಸಿದಲ್ಲಿ ಅರಣ್ಯ ಇಲಾಖೆ ವತಿಯಿಂದ ಕ್ರಮವಹಿಸಲಾಗುವುದು ಎಂದರು.

ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷರಾದ ಆಯೇಷಾ ಖಾನಂ ಅವರು ಗಣ್ಯರನ್ನು ಸ್ವಾಗತಿಸಿ, ಪ್ರಾಸ್ತಾವಿಕವಾಗಿ ಮಾತನಾಡಿ, ಬದಲಾಗುತ್ತಿರುವ ಬೆಂಗಳೂರು ನಗರದಲ್ಲಾಗುತ್ತಿರುವ ಪರಿಸರ ಬದಲಾವಣೆ ಹಾಗೂ ಹೆಚ್ಚುತ್ತಿರುವ ಶಾಖದ ಕುರಿತು ವರದಿ ಮಾಡಿ ಸರ್ಕಾರದ ಗಮನ ಸೆಳೆಯುವ ಕರ್ತವ್ಯ ನಿರ್ವಹಿಸುವ ಮಾಧ್ಯಮಗಳು ಹಾಗೂ ಸರ್ಕಾರದ ನಡುವೆ ಸೇತುವೆಯಾಗಿ ಕಾರ್ಯನಿರ್ವಹಿಸುವ ಜವಬ್ದಾರಿಯಿಂದ ಇಂತಹ ವಿನೂತನ ಕಾರ್ಯಾಗಾರವನ್ನು ಹಮ್ಮಿಕೊಳ್ಳಲಾಗಿದೆ ಎಂದರು.

ಪ್ರಸ್ತುತ ದಶಕದಲ್ಲಿ ತಾಪಮಾನ ಏರಿಕೆ ವಿಷಯ ಜಾಗತಿಕವಾಗಿ ಆಳುವ ಸರ್ಕಾರಗಳ ಗಮನ ಸೆಳೆಯುತ್ತಿದೆ ಹಾಗೂ ಜನ-ಸಾಮಾನ್ಯರ ಸಾವು-ನೋವುಗಳಿಗೆ ಕಾರಣವಾಗುತ್ತಿದೆ. ಇಂತಹ ಗಂಭೀರ ವಿಷಯವನ್ನು ಕುರಿತು ಸರ್ಕಾರದ ಗಮನ ಸೆಳೆಯುವುದರ ಜೊತೆಗೆ ಜನ-ಸಾಮಾನ್ಯರು ಪಾಲಿಸಬೇಕಾದ ಜಾಗೃತಿ ಅಂಶಗಳ ಕುರಿತು ಇಂದಿನ ಈ ಕಾರ್ಯಾಗಾರ ಬೆಳಕು ಚೆಲ್ಲಿಲಿದೆ.

ಮಾಧ್ಯಮ ಅಕಾಡೆಮಿಯ ಈ ಕಾರ್ಯಾಗಾರದಲ್ಲಿ ಚರ್ಚಿಸುವ ಹಾಗೂ ಮಂಡಿಸಿದ ವಿಷಯಗಳ ಕುರಿತು ಸರ್ಕಾರದ ಮುಂದಿನ ಕ್ರಮಕ್ಕಾಗಿ ವರದಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಮುಖ್ಯ ಭಾಷಣಕಾರರಾಗಿ ಆಗಮಿಸಿದ್ದ ಕರ್ನಾಟಕ ರಾಜ್ಯ ನೈಸರ್ಗಿಕ ವಿಪತ್ತು ನಿರ್ವಹಣಾ ಕೇಂದ್ರದ ನಿರ್ದೇಶಕರಾದ ಎಂ ಎಸ್ ದಿವಾಕರ್ ಅವರು ಮಾತನಾಡಿ ಪರಿಸರ ವೈಪರೀತ್ಯಗಳು ಸಾಮಾನ್ಯವಾಗಿ ಸಂಭವಿಸುತ್ತಲೇ ಇರುತ್ತವೆ. ಪ್ರಸ್ತುತ ತಂತ್ರಜ್ಞಾನ ಹಾಗೂ ಮಾಧ್ಯಮ ಸಂವಹನದ ಪರಿಣಾಮ ಹೆಚ್ಚು ಸುದ್ದಿಯಾಗುತ್ತಿದೆ. ಇತಿಹಾಸ ತೆಗೆದು ನೋಡಿದಾಗ ಹಲವಾರು ದಾಖಲೆಗಳನ್ನು ಗಮನಿಸಬಹುದಾಗಿದೆ ಎಂದರು.

ಅಧ್ಯಯನಗಳ ಪ್ರಕಾರ ಈ ವರ್ಷ ಮಳೆ ಕಡಿಮೆಯಾಗುವುದು ಎಂದು ವರದಿ ಹೇಳುತ್ತದೆ, ಬಿಸಿಲಿನ ತಾಪಮಾನ ಹೆಚ್ಚಾಗಿರುವುದು ತಿಳಿದು ಬಂದಿರುವ ವಿಷಯವಾಗಿರುವುದರಿಂದ ಈಗಾಗಲೇ ಬೆಂಗಳೂರಿನ ಐಐಎಸ್ಸಿ ಸಹಭಾಗಿತ್ವದಲ್ಲಿ ಈ ಬಿಸಿಲು ಸಂದರ್ಭದಲ್ಲಿ ಜನ-ಸಾಮಾನ್ಯರು ಕೈಗೊಳ್ಳಬೇಕಾದ ಕ್ರಮಗಳ ಕುರಿತು ವರದಿ ತಯಾರಿಸಿ ಜನ ಜಾಗೃತಿ ಮೂಡಿಸಲಾಗುತ್ತಿದೆ.

1980 ರಲ್ಲಿಯೇ ಕರ್ನಾಟಕ ಪರಿಸರ ಬದಲಾವಣೆಗಳ ಕುರಿತು ಅಧ್ಯಯನಕ್ಕಾಗಿ ಡಿ ಎಮ್ ಸಿ ಸ್ಥಾಪಿಸುವ ಮೂಲಕ ಭಾರತದಲ್ಲಿಯೇ ಈ ವಿಷಯದಲ್ಲಿ ಮುಂಚೂಣಿಯಲ್ಲಿದೆ. ನಮ್ಮ ರಾಜ್ಯದಲ್ಲಿ ಹೋಬಳಿಗೊಂದರಂತೆ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಈ ವ್ಯವಸ್ಥೆ ಭಾರತದ ಯಾವುದೇ ರಾಜ್ಯಗಳಲ್ಲಿ ಇಲ್ಲ.

ಬಿಸಿಲಿನ ಕುರಿತು ವರದಿ ಮಾಡುವ ಪತ್ರಕರ್ತರಿಗೆ ಬಿಸಲು ಪೂರ್ಣ ದಿನ ಒಂದೇ ರೀತಿ ಇರುವುದಿಲ್ಲ, ಯಾವುದೋ ಒಂದು ಸಮಯದಲ್ಲಿ ತನ್ನ ಗರಿಷ್ಠ ತಾಪಮಾನ ದಾಖಲಿಸಿ ಕಡಿಮೆಯಾಗುತ್ತದೆ. ಅದೇ ರೀತಿ ಆ ಬಿಸಿಲಿನ ತಾಪಮಾನಕ್ಕೆ ಬಿಸಿಯಾಗುವ ಪರಿಸರ ನಂತರ ಸಂಜೆಯಾದಂತೆ ತಣ್ಣಗಾಗುವಲ್ಲಿ ತೆಗೆದುಕೊಳ್ಳುವ ಸಮಯ ಪ್ರದೇಶದಿಂದ ಪ್ರದೇಶಕ್ಕೆ ವ್ಯತ್ಯಾಸ ಹೊಂದಿರುತ್ತದೆ. ಕೆಲವು ಕಡೆ ಹೆಚ್ಚು ಸಮಯ ತೆಗೆದುಕೊಂಡರೆ ಮತ್ತೊಂದು ಕಡೆ ಕಡಿಮೆ ಸಮಯ ತೆಗೆದುಕೊಳ್ಳುತ್ತದೆ ಅದರ ಆಧಾರದ ಮೇಲೆ ಒಟ್ಟಾರೆ ತಾಪಮಾನವನ್ನು ಅಳೆಯಬೇಕಾಗುತ್ತದೆ ಎಂದು ತಿಳಿಸಿದರು.

ಉದ್ಘಾಟನಾ ಸಮಾರಂಭದ ನಂತರ ಆರಂಭವಾದ ಕಾರ್ಯಾಗಾರದಲ್ಲಿ ಅಸರ್ ಸೋಶಿಯಲ್ ಇಂಪ್ಯಾಕ್ಟ್ ಅಡ್ವೈಸರ್ಸ್ ಸಂಸ್ಥೆಯ ಮುಖ್ಯ ಸಂವಹನಾಧಿಕಾರಿ ಬ್ರಿಕೇಶ್ ಸಿಂಗ್ ಅವರು ಭಾಗವಹಿಸಿ, 'ಕಾರ್ಯಾಗಾರದ ಉದ್ದೇಶ ಮತ್ತು ಪ್ರಸ್ತುತತೆ' ವಿಷಯದ ಕುರಿತು ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು. ಈ ಕಾರ್ಯಾಗಾರವು ಪ್ರಸ್ತುತ ಸಾಮಾಜಿಕ ಸನ್ನಿವೇಶದಲ್ಲಿ ಈ ಚರ್ಚೆಯ ಅಗತ್ಯತೆ ಮತ್ತು ಮುಂದಿನ ಗುರಿಗಳ ಬಗ್ಗೆ ಬೆಳಕು ಚೆಲ್ಲಲಿದೆ ಎಂದರು.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರದ ನಿರ್ದೇಶಕರಾದ ಎಂ.ಎಸ್. ದಿವಾಕರ್ ಅವರು ರಾಜ್ಯದಲ್ಲಿ ಶಾಖದ ಅಲೆಗಳ ಮುನ್ಸೂಚನೆ ಮತ್ತು ನಿರ್ವಹಣೆಯ ಬಗ್ಗೆ ದತ್ತಾಂಶ ಸಹಿತ ವಿವರಿಸಿದರು.

ಐಐಹೆಚ್ಎಸ್‌ನ ಹಿರಿಯ ಸಹವರ್ತಿ ಎಸ್. ಸ್ವಾತಿ ಅವರು ಬೆಂಗಳೂರಿನಲ್ಲಿ ಹೆಚ್ಚುತ್ತಿರುವ ಉಷ್ಣಾಂಶದ ಕಾರಣಗಳ ಬೆಂಗಳೂರಿನ ಸ್ಥಿತಿಗತಿ ಬಗ್ಗೆ ಬೆಳಕು ಚೆಲ್ಲಿದರು. ಹೀಟ್ ವಾಚ್ ಸಂಸ್ಥೆಯ ಸ್ಥಾಪಕ ಅಪೇಕ್ಷಿತಾ ವರ್ಷನಯ್ ಅವರು ತೀವ್ರ ಉಷ್ಣಾಂಶದಿಂದ ಬಾಧಿತರಾಗುವ ದುರ್ಬಲ ವರ್ಗಗಳ ಬಗ್ಗೆ ಕಳಕಳಿ ವ್ಯಕ್ತಪಡಿಸಿದರು.

ಬಿಬಿಎಂಪಿಯ ಹವಾಮಾನ ಕ್ರಿಯಾ ಕೋಶದ ಕಾರ್ಯನಿರ್ವಾಹಕ ಇಂಜಿನಿಯರ್ ನಿತ್ಯಾ ಜೆ ಅವರು ಏರುತ್ತಿರುವ ತಾಪಮಾನವನ್ನು ಎದುರಿಸಲು ನಗರವು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು.

ಬಿಸಿಲಿನ ತಾಪದಿಂದ ತತ್ತರಿಸುತ್ತಿರುವ ಹೊರಾಂಗಣ ಕಾರ್ಮಿಕರೊಂದಿಗೆ 'ಸೊಕ್ರಟಸ್' ಸಂಸ್ಥೆಯ ಭಾರ್ಗವಿ ನಾಗೇಂದ್ರ ಅವರ ನೇತೃತ್ವದಲ್ಲಿ ವಿಶೇಷ ಸಂವಾದ ನಡೆಯಿತು.

ಪ್ರತಿಯೊಂದು ಗೋಷ್ಠಿಯ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಸಂವಾದ ನಡೆಸಿದ್ದು ವಿಶೇಷವಾಗಿತ್ತು.

ಬುದ್ಧ, ಬಸವ, ಅಂಬೇಡ್ಕರ್ ಸಮಾನತೆ ಸಂದೇಶ ಸಾರಿದ ಮಹಾತ್ಮರು: ಶಾಸಕ ಅಲ್ಲಂಪ್ರಭು ಪಾಟೀಲ

ಕಲಬುರಗಿ,

''ಬುದ್ಧ, ಬಸವ ಹಾಗೂ ಅಂಬೇಡ್ಕರ್ ಮಹಾತ್ಮರು ಮಾನವ ಸಮಾಜಕ್ಕೆ ಸಮಾನತೆಯ ಹಣ್ಣು ತಿನಿಸಿದ ಮಹಾನ್ ವ್ಯಕ್ತಿಗಳು'' ಎಂದು ದಕ್ಷಿಣ ಮತಕ್ಷೇತ್ರದ ಶಾಸಕ ಅಲ್ಲಂಪ್ರಭು ಪಾಟೀಲ ಹೇಳಿದರು.



ನಗರದ ಸರ್ಕಾರಿ ಮಹಿಳಾ ಪ್ರಥಮ ದರ್ಜೆ ಕಾಲೇಜಿನಲ್ಲಿ ಬುದ್ಧ, ಬಸವ ಹಾಗೂ ಅಂಬೇಡ್ಕರ್ ಜಯಂತಿ ಅಂಗವಾಗಿ ಸಂವಿಧಾನ ಸಂರಕ್ಷಣಾ ಸಮಿತಿಯ ಸಹಯೋಗದಲ್ಲಿ ಆಯೋಜಿಸಿದ್ದ ವಚನ ಸಾಹಿತ್ಯ, ಸಂವಿಧಾನ, ಮಹಿಳಾ ಸಬಲೀಕರಣ ಮತ್ತು ಸವಾಲುಗಳು ಕುರಿತ ಉಪನ್ಯಾಸ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು. ಮಾನವನಿಗೆ ಹುಟ್ಟು ಸಾವು ಸಹಜವಾದರೂ, ಕೆಲವರು ತಮ್ಮ ಆದರ್ಶಗಳು ಮತ್ತು ಸಾಧನೆಗಳ ಮೂಲಕ ಅಮರರಾಗುತ್ತಾರೆ. ಆ ಪಟ್ಟಿಯಲ್ಲಿ ಗೌತಮ ಬುದ್ಧ, ಬಸವಣ್ಣ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಸದಾ ಅಗ್ರಸ್ಥಾನದಲ್ಲಿದ್ದಾರೆ ಎಂದು ಹೇಳಿದರು. ಶಾಕ್ಯ ವಂಶದಲ್ಲಿ ಜನಿಸಿದ ಸಿದ್ಧಾರ್ಥನು ಸಮಾಜದಲ್ಲಿನ ದುಃಖ, ಅಸಮಾನತೆ ಹಾಗೂ ಮಾನವೀಯ ನೋವುಗಳನ್ನು ಕಂಡು 27ನೇ ವಯಸ್ಸಿನಲ್ಲಿ ರಾಜಮನೆತನ ತೊರೆದು ಸತ್ಯಾನ್ವೇಷಣೆಗೆ ಹೊರಟರು. ಕಠಿಣ ತಪಸ್ಸು ಮತ್ತು ಧ್ಯಾನದ ಬಳಿಕ ಜ್ಞಾನೋದಯ ಹೊಂದಿ ಬುದ್ಧರಾದರು. ಆಸೆಯೇ ದುಃಖಕ್ಕೆ ಮೂಲ ಕಾರಣ ಎಂದು ಅಷ್ಟಾಂಗ ಮಾರ್ಗ ಬೋಧಿಸಿ, ಜಾತಿ ತಾರತಮ್ಯ ಹಾಗೂ ಮೂಢನಂಬಿಕೆಗಳ ವಿರುದ್ಧ ಹೋರಾಡಿದರು ಎಂದು ವಿವರಿಸಿದರು.

ಮುಂದೆ 12ನೇ ಶತಮಾನದಲ್ಲಿ ಬಸವಣ್ಣವರು ವಿಶ್ವದ ಪ್ರಥಮ ಪ್ರಜಾಪ್ರಭುತ್ವ ಸಂಸತ್ತಾದ ಅನುಭವ ಮಂಟಪ ಸ್ಥಾಪಿಸಿ, ಶರಣರ ಮೂಲಕ ಸಮಾನತೆ, ಸಹೋದರತೆ ಹಾಗೂ ಜಾತಿ ವ್ಯವಸ್ಥೆ ನಿರ್ಮೂಲನೆಗೆ ಕ್ರಾಂತಿ ನಡೆಸಿದರು. ಮಹಿಳೆಯರು ಮತ್ತು ಹಿಂದುಳಿದ ವರ್ಗಗಳಿಗೆ ಸಾಮಾಜಿಕ ನ್ಯಾಯ ಒದಗಿಸಲು ವಚನ ಸಾಹಿತ್ಯದ ಮೂಲಕ ಜಾಗೃತಿ ಮೂಡಿಸಿದರು ಎಂದು ಹೇಳಿದರು.

ಈ ಸಂದರ್ಭದಲ್ಲಿ ಲೇಖಕಿ ಡಾ. ಜಯದೇವಿ ಗಾಯಕವಾಡ ಅವರು ವಚನ ಸಾಹಿತ್ಯ, ಸಂವಿಧಾನ ಮತ್ತು ಮಹಿಳಾ ಸಬಲೀಕರಣದ ಸವಾಲುಗಳು ವಿಷಯದ ಮೇಲೆ ವಿಶೇಷ ಉಪನ್ಯಾಸ ನೀಡಿದರು.

ಕಾರ್ಯಕ್ರಮದಲ್ಲಿ ಸಂವಿಧಾನ ಸಂರಕ್ಷಣಾ ಸಮಿತಿಯ ಮುಖಂಡರಾದ ಭೀಮರಾವ್ ಟಿಟಿ, ಆರ್.ಜಿ. ಶೆಟ್ಟಾರ ಮಹಾನಗರ ಪಾಲಿಕೆ ಸದಸ್ಯೆ ಲತಾ ರಾಥೋಡ್, ಕಾಲೇಜು ಸುಧಾರಣಾ ಸಮಿತಿ ಸದಸ್ಯರಾದ ಲಾಲ ಅಹ್ಮದ್ ಸೇಟ್, ಅಶೋಕ ವೀರನಾಯಕ, ಮಾನವ ಬಂಧುತ್ವ ವೇದಿಕೆಯ ನಾಗೇಂದ್ರ ಜವಳಿ, ಎದ್ದೇಳು ಕರ್ನಾಟಕದ ಮೈಲಾರಿ ದೊಡ್ಮನಿ ಸೇರಿದಂತೆ ಹಲವರು ಉಪಸ್ಥಿತರಿದ್ದರು. ಕಾಲೇಜಿನ ಪ್ರಾಂಶುಪಾಲರಾದ ಡಾ. ಪ್ರಕಾಶ್ ಮೋರಗೆ ಅಧ್ಯಕ್ಷತೆ ವಹಿಸಿದ್ದರು. ಡಾ. ಪದ್ಮಾವತಿ ಧನಿ ಪ್ರಾಸ್ತಾ ವಿಕವಾಗಿ ಮಾತನಾಡಿ, ಡಾ. ಭಾಗ್ಯ ಜ್ಯೋತಿ ಪಾಟೀಲ ಕಾರ್ಯಕ್ರಮ ನಿರೂಪಿಸಿದರು. ಡಾ. ಪ್ರಿಯದರ್ಶಿನಿ ಸ್ವಾಗತಿಸಿ, ಸುನೀಲ ಮಾರುತಿ ಮಾನಪಡೆ ವಂದನಾರ್ಪಣೆ ಮಾಡಿದರು.

ಎಲ್ಲಾ ಭಾಗ್ಯಗಳಲ್ಲಿ ಆರೋಗ್ಯ ಭಾಗ್ಯ ಪ್ರಮುಖ : ಕಾಶಿನಾಥ

ಚಿತ್ತಾಪುರ,

ಪಟ್ಟಣದ ರೇವಣಸಿದ್ದಪ್ಪ ಕಾಂತಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಭಾಂಗಣದಲ್ಲಿ ತಾಲೂಕು ಆಸ್ಪತ್ರೆ, ಚಿತ್ತಾಪುರ, ರಾಷ್ಟ್ರೀಯ ಸೇವಾ ಯೋಜನೆ ಹಾಗೂ ಭಾರತೀಯ ರೆಡ್ ಕ್ರಾಸ್ ಸಂಯುಕ್ತಾಶ್ರಯದಲ್ಲಿ 2025-26ನೇ ಶೈಕ್ಷಣಿಕ ಸಾಲಿನ ಒಂದು ದಿನದ ಉಚಿತ ಆರೋಗ್ಯ ತಪಾಸಣಾ ಶಿಬಿರ ನಡೆಯಿತು.



ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಮಾತನಾಡಿದ ಹಿರಿಯ ಪತ್ರಕರ್ತ ಕಾಶಿನಾಥ, ಎಲ್ಲಾ ಭಾಗ್ಯಗಳಲ್ಲಿ ಆರೋಗ್ಯ ಭಾಗ್ಯವೇ ಅತ್ಯಂತ ಮುಖ್ಯವಾಗಿದೆ ಎಂದು ಹೇಳಿದರು.

ಆರೋಗ್ಯಯುತ ಸಮಾಜ ನಿರ್ಮಾಣವಾಗಬೇಕಾದರೆ ಅದು ಯುವಕ-ಯುವತಿಯರ ಕೈಯಲ್ಲಿದೆ. ಇಂದಿನ ಯುವಕರು ದುಶ್ಚಟಗಳಿಗೆ ಬಲಿಯಾಗಿ ತಮ್ಮ ಆರೋಗ್ಯವನ್ನು ತಾವೇ ಹಾಳು ಮಾಡಿಕೊಳ್ಳುತ್ತಿದ್ದಾರೆ. ದೇವಸ್ಥಾನಗಳು, ಆಸ್ಪತ್ರೆಗಳು ಜನರಿಂದ ತುಂಬಿ ತುಳುಕುತ್ತಿದ್ದು, ಪೊಲೀಸ್ ಠಾಣೆಗಳ ಸಂಖ್ಯೆಯೂ ಹೆಚ್ಚುತ್ತಿರುವುದು ಸಮಾಜದ ದುರಂತ ಎಂದು ವಿಷಾದಿಸಿದರು.

ಕಾರ್ಯಕ್ರಮವನ್ನು ಉದ್ಘಾಟಿಸಿದ ದಂತ ಆರೋಗ್ಯ ಅಧಿಕಾರಿ ಡಾ. ಖನಿಜ್ ಫಾತಿಮಾ ಮಾತನಾಡಿ, ಜೀವನ ಶೈಲಿ ಹೇಗಿದೆಯೋ ಆರೋಗ್ಯವೂ ಹಾಗೆಯೇ ಇರುತ್ತದೆ. ವಿಶೇಷವಾಗಿ ಯುವಕರು ಆರೋಗ್ಯದ ಕಡೆ ಹೆಚ್ಚಿನ ಗಮನ ಹರಿಸಬೇಕು, ಹಲ್ಲಿನ ಸುರಕ್ಷತೆ ಕಾಪಾಡಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಸರ್ಕಾರಿ ಆಸ್ಪತ್ರೆಯ ಆಪ್ತ ಸಮಾಲೋಚಕಿ ಸುಜ್ಞಾನಿ ಪಾಟೀಲ್ ಮಾತನಾಡಿ, ಇಂದಿನ ಯುವಕರೇ ಮುಂದಿನ ಪ್ರಜೆಗಳು. ವಿಶೇಷವಾಗಿ ಎಚ್ಐವಿ ಸೋಂಕಿನ ಬಗ್ಗೆ ಜಾಗೃತಿ ಅಗತ್ಯ ಎಂದು ವಿವರಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಡಾ. ಮಲ್ಲಿಕಾರ್ಜುನ ಬಿರಾದಾರ್ ಮಾತನಾಡಿ, ಆರೋಗ್ಯವೇ ಭಾಗ್ಯ ಎಂಬ ಸಂದೇಶವನ್ನು ಅರಿತು ಯುವಜನತೆ ಬದುಕಬೇಕು. ದೇವರು ನೀಡಿದ ಉತ್ತಮ ಆರೋಗ್ಯವನ್ನು ಹಾಳು ಮಾಡಿಕೊಳ್ಳಬಾರದು ಎಂದು ಕರೆ ನೀಡಿದರು.

ಎನ್ನೆಸ್ಸೆಸ್ ಅಧಿಕಾರಿಗಳಾದ ಡಾ. ಶಶಿಧರ್ ಯಡ್ರಾಮಿ, ಆಸ್ಮಾ ನಿಖತ್, ಪ್ರಾಧ್ಯಾಪಕರಾದ ಪ್ರೊ.ಮಲ್ಲಪ್ಪ ಮಾನೇಗಾರ್, ಶರಣಬಸಪ್ಪ ರಾಯ್ಕೋಟಿ, ರೋಹಿಣಿ ಕಲ್ಮಟ್, ನಾಗವೇಣಿ, ಲಕ್ಷ್ಮೀಪುತ್ರ ಪಾಸೋಡಿ, ಕೈಲಾಸಪತಿ ವಿಶ್ವಕರ್ಮ, ಶರಣಪ್ಪ ದಿಗ್ಗಾಂವ, ಮರೆಪ್ಪ ಮೇತ್ರೆ, ಶ್ರೀಕಾಂತ್, ಅಭಿಷೇಕ್, ವಿಜಯಲಕ್ಷ್ಮೀ ರಾಠೋಡ, ಮಂಜುನಾಥ ದೇಶಪಾಂಡೆ, ಆಸ್ಪತ್ರೆಯ ನಿಜಾಮುದ್ದೀನ್, ಗುರುರಾಜ್ ಮುಗುಳಿ, ಪತ್ರಕರ್ತ ಸಂತೋಷಕುಮಾರ ಕಟ್ಟಿಮನಿ ಸೇರಿದಂತೆ ಸಿಬ್ಬಂದಿಗಳು, ವಿದ್ಯಾರ್ಥಿಗಳು ಇದ್ದರು.

ಎನ್ನೆಸ್ಸೆಸ್ ಅಧಿಕಾರಿ ಡಾ.ಸಂಗಪ್ಪ ಮಾಮನಶೆಟ್ಟಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಡಾ.ಸುಗುರೇಶ್ವರ ಆರ್ ಮಠಪತಿ ಸ್ವಾಗತಿಸಿದರು, ಮಲ್ಲಪ್ಪ ತೊಟ್ನಳ್ಳಿ ನಿರೂಪಿಸಿದರು, ಡಾ.ವಿಲಾಸ್ ವಂದಿಸಿದರು.

ನಂತರ ಆರೋಗ್ಯ ತಪಾಸಣೆ ನಡೆಯಿತು. ವಿದ್ಯಾರ್ಥಿಗಳು ಶಿಬಿರದ ಸಂಪೂರ್ಣ ಸದುಪಯೋಗ ಪಡಿಸಿಕೊಂಡರು.

ನೇರ ವೇತನ ಪಾವತಿ ವ್ಯವಸ್ಥೆ ಅಳವಡಿಸಲು ಆಗ್ರಹ

ಕಲಬುರಗಿ,ಏ.30-

ಬಾಕಿ ಇರುವ ಸಂಬಳವನ್ನು ತಕ್ಷಣ ಬಿಡುಗಡೆ ಮಾಡಬೇಕು ಹಾಗೂ ನೇರ ವೇತನ ಪಾವತಿ ವ್ಯವಸ್ಥೆ ಜಾರಿಗೊಳಿಸಬೇಕು ಎಂದು ಆಗ್ರಹಿಸಿ ಗುಲ್ಬರ್ಗಾ ವಿಶ್ವವಿದ್ಯಾಲಯ ಹೊರಗುತ್ತಿಗೆ ನೌಕರರ ಸಂಘದ ಸದಸ್ಯರು ಬುಧವಾರ ವಿವಿ ಕಾರ್ಯಸೌಧ ಎದುರು ಧರಣಿ ಸತ್ಯಾಗ್ರಹ ಆರಂಭಿಸಿದರು.



2026ರ ಎರಡು ತಿಂಗಳ ಬಾಕಿ ವೇತನವನ್ನು ಕೂಡಲೇ ಪಾವತಿಸಬೇಕು. ಪ್ರತಿ ತಿಂಗಳು 7ನೇ ತಾರೀಖಿನೊಳಗೆ ಕಡ್ಡಾಯವಾಗಿ ಸಂಬಳ ನೀಡಬೇಕು. ಕಾರ್ಮಿಕ ಇಲಾಖೆಯ ಆದೇಶದಂತೆ 2025-26 ಮತ್ತು 2026-27ನೇ ಸಾಲಿನ ತುಟ್ಟಿಭತ್ಯೆಯನ್ನು ವೇತನದೊಂದಿಗೆ ಸೇರಿಸಿ ಪಾವತಿಸಬೇಕು ಎಂದು ನೌಕರರು ಒತ್ತಾಯಿಸಿದರು.

ವಿಶ್ವವಿದ್ಯಾಲಯದ ವಿವಿಧ ವಿಭಾಗಗಳಲ್ಲಿ ಸುಮಾರು 281 ಮಂದಿ ಹೊರಗುತ್ತಿಗೆ ನೌಕರರು ದಶಕಗಳಿಂದ ಸೇವೆ ಸಲ್ಲಿಸುತ್ತಿದ್ದಾರೆ. ಕಾಯಂ ನೌಕರರಷ್ಟೇ ಜವಾಬ್ದಾರಿಯಿಂದ ಕೆಲಸ ನಿರ್ವಹಿಸುತ್ತಿದ್ದರೂ ಉದ್ಯೋಗ ಭದ್ರತೆ ಇಲ್ಲದೆ ಕಡಿಮೆ ವೇತನಕ್ಕೆ ಕೆಲಸ ಮಾಡುತ್ತಿರುವುದಾಗಿ ಅವರು ಅಸಮಾಧಾನ ವ್ಯಕ್ತಪಡಿಸಿದರು.

ರಾಜ್ಯದ ಇತರ ವಿಶ್ವವಿದ್ಯಾಲಯಗಳಲ್ಲಿ ಹೊರಗುತ್ತಿಗೆ ನೌಕರರಿಗೆ ನೇರ ವೇತನ ಪಾವತಿ ವ್ಯವಸ್ಥೆ ಜಾರಿಯಲ್ಲಿದ್ದು, ಅದೇ ಮಾದರಿಯನ್ನು ಇಲ್ಲಿ ಕೂಡ ಅನುಷ್ಠಾನಗೊಳಿಸಬೇಕು ಎಂದು ಆಗ್ರಹಿಸಿದರು. ಹಲವು ವರ್ಷಗಳಿಂದ ಮನವಿ ಸಲ್ಲಿಸಿದ್ದರೂ ಆಡಳಿತ ಮಂಡಳಿ ಸ್ಪಂದಿಸಿಲ್ಲ ಎಂದು ದೂರಿದರು.

ಕುಲಪತಿ ಹೇಳಿಕೆಗೆ ಆಕ್ರೋಶ
:

ವಿಶ್ವವಿದ್ಯಾಲಯದ ಹೊಸ ಕುಲಪತಿ ಪ್ರೊ. ಉಡಿಕೇರಿ ಅವರು, ''ಹೊರಗುತ್ತಿಗೆ ಸಿಬ್ಬಂದಿ ನಮ್ಮವರಲ್ಲ, ಗುತ್ತಿಗೆ ಸಂಸ್ಥೆಯವರೇ'' ಎಂದು ಹೇಳಿರುವುದಕ್ಕೆ ನೌಕರರು ತೀವ್ರ ಅಸಮಾಧಾನ

ವ್ಯಕ್ತಪಡಿಸಿದರು. ನೇಮಕಾತಿ ಆದೇಶದ ಪ್ರಕಾರ ತಾವು ವಿಶ್ವವಿದ್ಯಾಲಯದಲ್ಲೇ ಸೇವೆ ಸಲ್ಲಿಸುತ್ತಿದ್ದೇವೆ. ಹಿಂದಿನ ಕುಲಪತಿಗಳ ಅವಧಿಯಲ್ಲಿ ಇಂತಹ ಸಮಸ್ಯೆ ಎದುರಾಗಿರಲಿಲ್ಲ. ಈಗ ಮಾತ್ರ ಏಕೆ ಈ ರೀತಿಯ ನಿರ್ಲಕ್ಷ್ಯ ಎಂಬ ಪ್ರಶ್ನೆ ಎತ್ತಿದರು.

ಧರಣಿಯಲ್ಲಿ ನೌಕರರ ಸಂಘದ ಅಧ್ಯಕ್ಷ ಶೀಲಪ್ರಕಾಶ ದೊಡ್ಡಮನಿ, ಗೌರವ ಅಧ್ಯಕ್ಷ ವಿಜಯಕುಮಾರ ಕೆಂಗಲ, ಕಾರ್ಯದರ್ಶಿ ಚಂದ್ರಶಾ ಎಂ.ಎಸ್., ವಿಜಯ ಕೆಂಗಾಲ, ಅಂಬುಜಾ ಕದಂ, ಸವಿತಾ ಮಹೇಶ್ವರಿ, ನಾಗರಾಜ್ ಟೆಂಗಳಿ, ಸೇರಿದಂತೆ ಇತರೆ ನೌಕರರು ಇದ್ದರು.

ಜಿಲ್ಲಾಧಿಕಾರಿ ಕಚೇರಿ ಎದುರು ಹಿಂಸಾತ್ಮಕ ಪ್ರತಿಭಟನೆ : 28 ಮಂದಿ ವಿರುದ್ಧ ಪ್ರಕರಣ ದಾಖಲು

ಕಲಬುರಗಿ,ಏ.30-

ನಗರದ ಜಿಲ್ಲಾಧಿಕಾರಿ ಕಚೇರಿ ಎದುರು ನಡೆದ ತಳವಾರ ಎಸ್ಟಿ ಮೀಸಲಾತಿ ಪ್ರತಿಭಟನೆ ಹಿಂಸಾತ್ಮಕ ಸ್ವರೂಪ ಪಡೆದ ಹಿನ್ನೆಲೆ, ಪ್ರಮುಖ ನಾಯಕರು ಸೇರಿದಂತೆ ಒಟ್ಟು 28 ಮಂದಿಯ ವಿರುದ್ಧ ಸ್ಟೇಷನ್ ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.



ಏ.27ರಂದು ಜಿಲ್ಲಾಧಿಕಾರಿ ಕಚೇರಿ ಮುಂಭಾಗ ನಡೆದ ಪ್ರತಿಭಟನೆಯಲ್ಲಿ ಸಾರ್ವಜನಿಕ ಶಾಂತಿಗೆ ಭಂಗ ತಂದಿರುವ ಗಂಭೀರ ಆರೋಪಗಳು ಕೇಳಿಬಂದಿವೆ. ಪ್ರತಿಭಟನಾಕಾರರು ಯಾವುದೇ ಪೂರ್ವಾನುಮತಿ ಪಡೆಯದೇ ಅಕ್ರಮವಾಗಿ ಗುಂಪುಗೂಡಿದ್ದು, ಬಳಿಕ ಪ್ರತಿಭಟನೆ ತೀವ್ರಗೊಂಡು ಪೊಲೀಸರು ಅಳವಡಿಸಿದ್ದ ಬ್ಯಾರಿಕೇಡ್‌ಗಳನ್ನು ಕಿತ್ತೆಸೆದು ಒಳನುಗ್ಗಲು ಯತ್ನಿಸಿದ್ದಾರೆ ಎನ್ನಲಾಗಿದೆ.

ಈ ವೇಳೆ ಗಾಯಾಳುಗಳನ್ನು ಸಾಗಿಸುತ್ತಿದ್ದ ಆ್ಯಂಬುಲೆನ್ಸ್ ಮೇಲೆಯೂ ಕಲ್ಲು ತೂರಾಟ ನಡೆಸಿ ಸಾರ್ವಜನಿಕ ಆಸ್ತಿಪಾಸ್ತಿಗೆ ಹಾನಿ ಉಂಟುಮಾಡಲಾಗಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಪ್ರಕರಣ ಸಂಬಂಧ ತಳವಾರ ಸಮಾಜದ ರಾಜ್ಯಾಧ್ಯಕ್ಷ ಸರ್ದಾರ್ ರಾಯಪ್ಪ, ಜೆಡಿಎಸ್ ಮುಖಂಡ ಶಿವಕುಮಾರ್ ನಾಟಿಕಾರ್, ಬಿಜೆಪಿ ಮುಖಂಡ ಅವ್ವಣ್ಣ ಮ್ಯಾಕೇರಿ ಸೇರಿದಂತೆ 28 ಮಂದಿಯ ವಿರುದ್ಧ ಅಕ್ರಮ ಕೂಟ ರಚನೆ, ಸಾರ್ವಜನಿಕ ಕರ್ತವ್ಯಕ್ಕೆ ಅಡ್ಡಿ ಹಾಗೂ ಆಸ್ತಿ ಹಾನಿ ಕಾಯ್ದೆಯಡಿ ಪ್ರಕರಣ ದಾಖಲಿಸಲಾಗಿದೆ.

ಘಟನೆಯನ್ನು ಜಿಲ್ಲಾಡಳಿತ ಗಂಭೀರವಾಗಿ ಪರಿಗಣಿಸಿದ್ದು, ಪೊಲೀಸರು ತನಿಖೆ ಮುಂದುವರಿಸಿದ್ದಾರೆ.

ಒಂದನೇಯ ಪುಟದಿಂದ

ಮಿಷನ್ ಏಡ್ಸ್ ಸುರಕ್ಷಾ ಅಭಿಯಾನ
ಪರಿಣಾಮಕಾರಿ ಅನುಷ್ಠಾನಗೊಳಿಸಿ: ಜಿಲ್ಲಾಧಿಕಾರಿ ನಿತೀಶ್ ಕೆ

ಹ್ಯಾಂಡ್‌ಹೆಲ್ಡ್ ಎಕ್ಸ್‌ರೇ ಮಿಷಿನ್, ಮುಂತಾದವುಗಳಿದ ಪರೀಕ್ಷಿಸಿ, ಸೋಂಕು ಖಚಿತವಾದಲ್ಲಿ ಉಚಿತ ಚಿಕಿತ್ಸೆಯನ್ನು ನೀಡಿ ಗುಣಪಡಿಸಲು, ಅರ್ಹ ವ್ಯಕ್ತಿಗಳಿಗೆ ನಿಕ್ಷಯ್ ಮಿತ್ರ ಅಡಿ ದಾನಿಗಳಿಂದ ಪೌಷ್ಟಿಕ ಆಹಾರ ಒದಗಿಸಲು ಜಿಲ್ಲಾಧಿಕಾರಿಗಳು ಸೂಚಿಸಿದರು.

2030ರ ಒಳಗೆ ಕ್ಷಯರೋಗ ಮುಕ್ತ ಭಾರತದ ಗುರಿ ತಲುಪಲು ಕಂದಾಯ ಇಲಾಖೆ, ಗ್ರಾಮ ಪಂಚಾಯತ, ಸ್ಥಳೀಯ ಸಂಸ್ಥೆಗಳ, ವಿವಿಧ ಇಲಾಖೆಗಳ ಸಹಕಾರ ಪಡೆದು ಯಶಸ್ವಿಗೊಳಿಸಲು ಸೂಚಿಸಿದರು.

ಗುಣಮಟ್ಟದದಿಂದ ಹೆರಿಗೆ ನಿರ್ವಹಣೆ: ಜಿಲ್ಲೆಯ ಎಲ್ಲ ಆಸ್ಪತ್ರೆಗಳಲ್ಲಿನ ಸಂಪನ್ಮೂಲಗಳ ಬಳಕೆಯಿಂದ ಗುಣಮಟ್ಟದ ಸೇವೆ ನೀಡುತ್ತಿರುವುದು ಆಶಾದಾಯಕವಾಗಿದ್ದು, ಯಾವುದೇ ಪರಿಕರ, ಉಪಕರಣಗಳ ಅಗತ್ಯತೆವಿದ್ದರೆ ನಿಯಮಾನುಸಾರ ಬೇಡಿಕೆ ಸಲ್ಲಿಸುವಂತೆ ಸಂಬಧಿಸಿದ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳು ಸೂಚಿಸಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸುರೇಂದ್ರ ಬಾಬು, ಜಿಲ್ಲಾ ಶಸ್ತ ಚಿಕಿತ್ಸ ಕ ಡಾ.ವಿಜಯ ಶಂಕರ, ಡಿಪಿಡಿಓ ಡಾ.ಚಂದ್ರಶೇಖರಯ್ಯ ಸ್ವಾಮಿ, ಆರ್‌ಸಿಹೆಚ್ ಅಧಿಕಾರಿ ಡಾ.ನಂದಿತಾ ಎಮ್.ಎನ್., ಡಿಎಸ್‌ಓ ಡಾ.ಗಣೇಶ್ ಕೆ, ಡಿಟಿಓ ಡಾ.ಮಹಮ್ಮದ್ ಶಾಕೀರ್ ಮೊಹಿಯುದ್ದೀನ್, ಪರಿಸರ ಇಲಾಖೆ ಅಧಿಕಾರಿ, ಸಹಾಯಕ ಔಷಧ ನಿಯಂತ್ರಕರು ಸೇರಿದಂತೆ ಜಿಲ್ಲೆಯ ಎಲ್ಲ ತಾಲೂಕಾ ಆರೋಗ್ಯಾಧಿಕಾರಿಗಳು, ಸಾರ್ವಜನಿಕ ಆಸ್ಪತ್ರೆ, ತಾಯಿ ಮಕ್ಕಳ ಆಸ್ಪತ್ರೆಯ ಮುಖ್ಯ ಆಡಳಿತ ವೈದ್ಯಾಧಿಕಾರಿಗಳು, ಡಿಹೆಚ್‌ಇಓ, ಡಿಪಿಎಮ್, ಡಿಡಿಎಮ್, ಎನ್‌ಕ್ಯೂಎಎಸ್, ಆರ್‌ಕೆಎಸ್‌ಕೆ ಸಲಹೆಗಾರರು ಹಾಗೂ ಹೆಚ್‌ಐವಿ ಏಡ್ಸ್ ನಿರ್ಮೂಲನೆಗೆ ಕೆಲಸ ಮಾಡುತ್ತಿರುವ ಸಂಘಟನೆಗಳ ಪದಾಧಿಕಾರಿಗಳು, ಡ್ಯಾಪ್ಕೋ ಸಿಬ್ಬಂದಿಗಳು ಇದ್ದರು.

ಕೆ.ಪಿ.ಎಸ್.ಸಿ ಗೆಜೆಟೆಡ್ ಪ್ರೊಬೇಷನರಿ ವ್ಯಕ್ತಿತ್ವ ಪರೀಕ್ಷೆಗೆ
ಅರ್ಹತೆ ಪಡೆದ ಅಭ್ಯರ್ಥಿಗಳಿಗಾಗಿ ಅಣುಕು ವ್ಯಕ್ತಿತ್ವ ಪರೀಕ್ಷೆ ಆಯೋಜನೆ

ನೋಂದಣಿ ಸಂಖ್ಯೆ, ಸಂಪರ್ಕ ಸಂಖ್ಯೆ ಹಾಗೂ ಮುಖ್ಯ ಪರೀಕ್ಷೆಯ ವಿವರಗಳನ್ನು ಜಿಲ್ಲಾಡಳಿತದ ಸೂಚನೆಯಂತೆ ಮುಂಚಿತವಾಗಿ ನೋಂದಾಯಿಸಿಕೊಳ್ಳುವುದು ಕಡ್ಡಾಯವಾಗಿದೆ.

ನೋಂದಣಿ ಹಾಗೂ ಹೆಚ್ಚಿನ ಮಾಹಿತಿಗಾಗಿ ಕಾರ್ಯಕ್ರಮ ಆಯೋಜನಾ ಅಧಿಕಾರಿಗಳಾದ ಮಹಮ್ಮದ್ ಯೂಸೂಫ್, ಯೋಜನಾ ನಿರ್ದೇಶಕರು ಸಿಯೋಲ್ ಇವರ ಮೊಬೈಲ್ ಸಂಖ್ಯೆ: 9964012161ಗೆ ಸಂಪರ್ಕ ಮಾಡಬಹುದಾಗಿದೆ. ಕಾರ್ಯಕ್ರಮದ ದಿನಾಂಕ ಹಾಗೂ ಸ್ಥಳವನ್ನು ಶೀಘ್ರದಲ್ಲೇ ಪ್ರತ್ಯೇಕವಾಗಿ ಪ್ರಕಟಿಸಲಾಗುವುದು.

ಜಿಲ್ಲೆಯ ಸ್ಪರ್ಧಾತ್ಮಕ ಪರೀಕ್ಷಾ ಅಭ್ಯರ್ಥಿಗಳು ಈ ಅಪರೂಪದ ಅವಕಾಶವನ್ನು ಸದುಪಯೋಗಪಡಿಸಿಕೊಂಡು ವ್ಯಕ್ತಿತ್ವ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡುವಂತೆ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ. ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸರಕಾರಿ ಆಸ್ಪತ್ರೆಯಲ್ಲಿ ಪತ್ನಿಗೆ ಹೆರಿಗೆ
ಮಾಡಿಸಿ, ಸರಳತೆ ಮೆರದ ಜಿ.ಪಂ ಸಿಇಒ

ಆರೋಗ್ಯವಾಗಿದ್ದಾರೆ.

ಸರಕಾರದ ಸೌಲಭ್ಯ ಪ್ರತಿಯೊಬ್ಬರು ಪಡೆಯಿರಿ: ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ ಕುಮಾರ ಕಾಂದೂ ಅವರು ಮಾತನಾಡಿ, ಸರಕಾರವು ಗ್ರಾಮೀಣ ಪ್ರದೇಶ ಸೇರಿದಂತೆ ಎಲ್ಲ ಸರಕಾರಿ ಆಸ್ಪತ್ರೆಗಳಲ್ಲಿ ತಾಯಿ ಮಗುವಿನ ಆರೈಕೆಗಾಗಿ ನುರಿತ ಹೆರಿಗೆ ತಜ್ಞರು, ಸುಸಜ್ಜಿತ ಹೆರಿಗೆ ಕೊಠಡಿ, ಆಧುನಿಕ ಪರಿಕರಗಳು, ಸೂಕ್ತ ಪ್ರಯೋಗಾಲಯ ಪರೀಕ್ಷೆಗಳು, ಸಕಾಲದಲ್ಲಿ ಔಷಧೋಪಚಾರ, ಪೌಷ್ಟಿಕ ಆಹಾರ ಒದಗಿಸುವುದನ್ನು ಖುದ್ದು ಪರಿಶೀಲನೆಯಲ್ಲಿ ಕಂಡು ಬರುತ್ತಿರುವುದರಿಂದ ಸರಕಾರದ ಸೌಲಭ್ಯಗಳು ಜನ ಸಾಮಾನ್ಯರು ಪಡೆಯಬೇಕು. ತಾಯಿ ಮಕ್ಕಳ ಆಸ್ಪತ್ರೆ ಅಥವಾ ರಿಮ್ಸ್ ಆಸ್ಪತ್ರೆಯಲ್ಲಿ ಹೆರಿಗೆ ಮಾಡಿಸುವ ನಿರ್ಧಾರ ಕೈಗೊಂಡಿದ್ದು, ರಿಮ್ಸ್‌ನಲ್ಲಿ ಹೆರಿಗೆಯಾಗಿದ್ದು, ಪ್ರಸ್ತುತ ಮುಂದಿನ ಆರೈಕೆಗೆ ತಾಯಿ ಮಕ್ಕಳ ಆಸ್ಪತ್ರೆಯಲ್ಲಿ ಆರೈಕೆ ಪಡೆಯುತ್ತಿದ್ದಾರೆ. ಇದು ವೈಯಕ್ತಿಕವಾಗಿ ನಮಗೆ ಹೆಮ್ಮೆಯ ವಿಷಯವಾಗಿದೆ ಎಂದರು.

ಹೇಮರೆಡ್ಡಿ ಮಲ್ಲಮ್ಮ ಜಯಂತಿ ಪೂರ್ವಭಾವಿ ಸಭೆ
ಅರ್ಥಪೂರ್ಣ ಆಚರಣೆ ಅಗತ್ಯ ಸಿದ್ಧತೆ ಮಾಡಿಕೊಳ್ಳಿ: ಎಡಿಸಿ

ಆಚರಣೆ ನಡೆಯಬೇಕು. ಶಿಷ್ಟಾಚಾರ ಅನುಸಾರ ಆಮಂತ್ರಣ ಪತ್ರಿಕೆ ಮುದ್ರಿಸಿ ವಿತರಿಸಬೇಕು. ಜಯಂತಿಗೆ ಆಗಮಿಸುವ ಜನತೆಗೆ ಕುಡಿಯುವ ನೀರು, ಉಪಹಾರ, ಆಸನದ ವ್ಯವಸ್ಥೆ ಮಾಡಬೇಕು ಎಂದು ಸಂಬಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಇದೇ ಸಂದರ್ಭದಲ್ಲಿ ರೆಡ್ಡಿ ಸಮಾಜದ ಜಿಲ್ಲಾಧ್ಯಕ್ಷರಾದ ಡಾ.ಬಸನಗೌಡ, ತಾಲೂಕು ಅಧ್ಯಕ್ಷರಾದ ರಾಮನಗೌಡ ಏಗನೂರು, ಚಂದ್ರಶೇಖರ ಮಿರ್ಜಾಪುರ, ವಸಂತ ರೆಡ್ಡಿ, ನವೀನ್ ಕುಮಾರ್, ವಿರುಪಣ್ಣ ಚೌಧರಿ, ಜಿ.ಎಸ್.ರಾಮನಗೌಡ, ಸುರೇಶ, ಪರಮೇಶ್ವರ ಸೇರಿದಂತೆ ಇತರರು ಇದ್ದರು.

ಬಲಾಢ್ಯರಿಗೆ ಕಾನೂನು ನಿಯಮ ಪ್ರಯೋಗಿಸದೆ
ಬಡ ಬೀದಿ ಬದಿ ವ್ಯಾಪಾರಿಗಳ ಮೇಲೆ ದೌರ್ಜನ್ಯ!

ಸಿಂಧನೂರು: ನಗರದ ಗಂಗಾವತಿ ರಸ್ತೆಯ ತೋಟಗಾರಿಕೆ ಇಲಾಖೆಯ ಕಾಂಪೌಂಡ್ ಗೆ ಹೊಂದಿಕೊಂಡು ಇಟ್ಟಿರುವ ಡಬ್ಬಾ ಅಂಗಡಿಗಳನ್ನು ಪೊಲೀಸ್ ಬಂದೋಬಸ್ತನೊಂದಿಗೆ ಮಂಗಳವಾರ ಬೆಳಿಗ್ಗೆ ತೆರವುಗೊಳಿಸಲು ಮುಂದಾದ ವೇಳೆ ಬೀದಿ ಬದಿ ವ್ಯಾಪಾರಿಗಳು, ಮುಖಂಡರು, ಹಾಗೂ ಇಲಾಖೆಯ ಅಧಿಕಾರಿಗಳ ಮಧ್ಯೆ ವಾಗ್ವಾದ ನಡೆಯಿತು.





ತೋಟಗಾರಿಕೆ ಇಲಾಖೆಯ ಜಮೀನನ್ನು ಅತಿಕ್ರಮಿಸಿರುವ ಬಲಾಢ್ಯರ ಮೇಲೆ ಕಾನೂನು ನಿಯಮ ಪ್ರಯೋಗಿಸದೇ ಬಡಪಾಯಿ ಬೀದಿ ಬದಿ ವ್ಯಾಪಾರಿಗಳ ಮೇಲೆ ದೌರ್ಜನ್ಯ ನಡೆಸುವುದು ಎಷ್ಟು ಸರಿ? ಇದು ಸರಿಯಲ್ಲ. ಬೀದಿ ಬದಿ ವ್ಯಾಪಾರಿಗಳನ್ನು ಈ ಹಿಂದೆ ಏಕಾಏಕಿ ಜಿಲ್ಲಾಡಳಿತ, ತಾಲೂಕಾಡಳಿತ, ಸೇರಿ, ಒಕ್ಕಲೆಬ್ಬಿಸಿದ್ದರಿಂದ ಅವರೆಲ್ಲ ಬೀದಿ ಪಾಲಾಗಿ ನಿರುದ್ಯೋಗಿಗಳಾಗಿದ್ದು, ಜೀವನ ನಿರ್ವಹಣೆಗೆ ಪಡಿಪಾಟಲು ಅನುಭವಿಸುತ್ತಿದ್ದಾರೆ. ಕಾನೂನಿನ ನೆಪದಲ್ಲಿ ಜೀವನೋಪಾಯಕ್ಕಾಗಿ ಸಣ್ಣಪುಟ್ಟ ಡಬ್ಬಾ ಅಂಗಡಿಗಳನ್ನಿಟ್ಟುಕೊಂಡು ಹೊಟ್ಟೆ ತುಂಬಿಸಿಕೊಳ್ಳಲು ಬಿಡದೇ ಬಡವರು ಬದುಕುವ ಹಕ್ಕನ್ನೇ ಕಿತ್ತುಕೊಳ್ಳುವ ಹುನ್ನಾರ ನಡೆದಿದೆ ಇದು ಯಾವ ನ್ಯಾಯ ? ಎಂದು ಸಣ್ಣ ಪುಟ್ಟ ಬೀದಿ ಬದಿ ವ್ಯಾಪಾರಸ್ಥರು ತಮ್ಮ ಆಕ್ರೋಶ ವ್ಯಕ್ತಪಡಿಸಿದರು.

ಈಗಾಗಲೇ ತೋಟಗಾರಿಕೆ ಇಲಾಖೆಗೆ ಹತ್ತಾರು ಬಾರಿ ಮನವಿಪತ್ರ, ಅರ್ಜಿಗಳನ್ನು ನೀಡಿ, ಇಲಾಖೆಯ ವ್ಯಾಪ್ತಿಯಲ್ಲಿರುವ ಜಮೀನಿನ ಹದ್ದುಬಸ್ತ್ ಗುರುತಿಸುವಂತೆ ಒತ್ತಾಯಿಸಲಾಗಿದೆ. ಆದರೂ ಇಲ್ಲಿಯವರೆಗೂ ಹದ್ದುಬಸ್ತ್ ಗುರುತಿಸಿಲ್ಲ, ದಕ್ಷಿಣ ಮತ್ತು ಪಶ್ಚಿಮ ದಿಕ್ಕಿನಲ್ಲಿ ಬಲಾಢ್ಯರು ಜಮೀನನ್ನು ಅತಿಕ್ರಮಿಸಿದರೂ ತೋಟಗಾರಿಕೆ ಇಲಾಖೆ ಸೇರಿದಂತೆ ಜಿಲ್ಲಾಡಳಿತ ತಾಲೂಕಾಡಳಿತ ಸುಮ್ಮನೆ ಕುಳಿತಿದೆ.

ಆದರೆ ಬಡ ವ್ಯಾಪಾರಿಗಳ ಮೇಲೆ ಬಲಪ್ರಯೋಗಿಸುವ ಕೆಲಸ ನಡೆಯುತ್ತಿದೆ. ಶಾಸಕರು, ಜಿಲ್ಲಾಧಿಕಾರಿ ಗಳು ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳ ಸಭೆ ಕರೆದು ಚರ್ಚಿಸಿ ತೀರ್ಮಾನ ತೆಗೆದುಕೊಳ್ಳುವಂತೆ ಈಗಾಗಲೇ ಮನವಿ ಮಾಡಿಕೊಂಡಿದ್ದರೂ ಸಹ ಡಬ್ಬಾ ಅಂಗಡಿಗಳನ್ನು ದೌರ್ಜನ್ಯ ಮತ್ತು ದಬ್ಬಾಳಿಕೆಯಿಂದ ತೆರವುಗೊಳಿಸಲು ಮುಂದಾಗುವುದು ಸರಿಯಲ್ಲ.

ಕೂಡಲೇ ಇದನ್ನು ಕೈಬಿಡಬೇಕು ಒಂದು ವೇಳೆ ದೌರ್ಜನ್ಯಕ್ಕೆ ಮುಂದಾದರೆ, ನಮ್ಮ ಹೋರಾಟ ತೀವ್ರಗೊಳಿಸಬೇಕಾಗುತ್ತದೆ. ನಮ್ಮ ಪ್ರಾಣದ ಮೇಲೆ ನೀವು ತೆರವು ಕಾರ್ಯ ನಡೆಸಿ ಎಂದು ಡಿ.ಎಚ್.ಪೂಜಾರ್ ಆಕ್ರೋಶ ವ್ಯಕ್ತಪಡಿಸಿದರು.

ಶಹರ ಪೊಲೀಸ್ ಠಾಣೆಯ ಪಿಐ ವೀರರೆಡ್ಡಿ, ಗ್ರಾಮೀಣ ಪೊಲೀಸ್ ಠಾಣೆಯ ಪಿಎಸ್‌ಐ ಮೌನೇಶ ರಾಥೋಡ್ ಬಂದೋಬಸ್ತ್ ಒದಗಿಸಿದ್ದರು. ಇದೇ ವೇಳೆ ಬೀದಿ ಬದಿ ವ್ಯಾಪಾರಿಗಳು, ಅವರ ಕುಟುಂಬಸ್ಥರು ಸೇರಿದಂತೆ ವಿವಿಧ ಪೊಲೀಸ್ ಇಲಾಖೆ ಅಧಿಕಾರಿಗಳು ಇದ್ದರು.

ಪತ್ರಿಕೆ ಓದುವ ಹವ್ಯಾಸ ಬೆಳಸಿಕೊಳ್ಳಿ

ವಿಶ್ವ ಮಲೇರಿಯಾ ಜಾಗೃತಿ ದಿನ: ಬೇವಿನಾಳ ಗ್ರಾಮದಲ್ಲಿ ಸಾರ್ವಜನಿಕರಿಗೆ ಅರಿವು

ಕೊಪ್ಪಳ ಏ.30-

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಸರ್ವೇಕ್ಷಣಾ ಘಟಕ ಹಾಗೂ ರೋಗವಾಹಕ ಆಶ್ರಿತ ರೋಗಗಳ ನಿಯಂತ್ರಣಾಧಿಕಾರಿಗಳ ಕಛೇರಿ, ತಾಲೂಕಾ ಆರೋಗ್ಯಾಧಿಕಾರಿಗಳ ಕಛೇರಿ, ಕೊಪ್ಪಳ ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರ ಕೂಕನಪಳ್ಳಿ ಇವರ ಸಂಯುಕ್ತಾಶ್ರಯದಲ್ಲಿ ''ವಿಶ್ವ ಮಲೇರಿಯಾ ಜಾಗೃತಿ ದಿನ''ದ ಅಂಗವಾಗಿ ಸೋಮವಾರದಂದು ಬೇವಿನಾಳ ಗ್ರಾಮದ ಕೆಂಚಮ್ಮ ದೇವಿ ದೇವಸ್ಥಾನದ ಹತ್ತಿರ ಜಾಗೃತಿ ಕಾರ್ಯಕ್ರಮದ ಮೂಲಕ ಸಾರ್ವಜನಿಕರಿಗೆ ಅರಿವು ಮೂಡಿಸಲಾಯಿತು.

ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶಿವಾನಂದ ವ್ಹಿ.ಪಿ ಅವರು ಮಾತನಾಡಿ, ಪ್ರತಿ ವರ್ಷ ಏಪ್ರಿಲ್ 25ರಂದು ''ವಿಶ್ವ ಮಲೇರಿಯಾ ದಿನ'' ಕಾರ್ಯಕ್ರಮ ಆಚರಿಸಲಾಗುತ್ತದೆ. ಮಾರಣಾಂತಿಕ ರೋಗದ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸಲು ಮತ್ತು ಇದನ್ನು ಸಂಪೂರ್ಣವಾಗಿ ನಿರ್ಮೂಲನೆ ಮಾಡುವ ನಿಟ್ಟಿನಲ್ಲಿ ಜಾಗತಿಕ ಸಮುದಾಯವನ್ನು ಒಗ್ಗೂಡಿಸುವುದು ಈ ದಿನದ ಮುಖ್ಯ ಉದ್ದೇಶವಾಗಿದೆ. 2026ರ ಘೋಷವಾಕ್ಯ ''ಮಲೇರಿಯಾ ಅಂತ್ಯದತ್ತ ಪಯಣ : ಈಗ ನಮಗೆ ಸಾಧ್ಯವಿದೆ ಈಗ ನಾವು ಮಾಡಲೇಬೇಕು'' ಎಂಬುವುದಾಗಿದೆ. ಅನಾಫಿಲಿಸ್ ಹೆಣ್ಣು ಸೋಂಕಿತ ಸೊಳ್ಳೆಗಳಿಂದ ಮಲೇರಿಯಾ ಜ್ವರ ಹರಡುತ್ತದೆ. ಈ ರೋಗದ ಲಕ್ಷಣಗಳು ತಲೆನೋವು, ವಾಂತಿ, ವಿಪರೀತ ಚಳಿಜ್ವರ, ಮೈನಡುಕ, ಬಿಟ್ಟು-ಬಿಟ್ಟು ಜ್ವರ ಬರುವ ಲಕ್ಷಣಗಳಿದ್ದರೆ ತಮ್ಮ ಸಮೀಪದ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ, ರಕ್ತ ಪರೀಕ್ಷೆ ಮಾಡಿಸಬೇಕು. ರೋಗ ಖಚಿತ ಪಟ್ಟರೆ ಚಿಕಿತ್ಸೆ ಪಡೆದುಕೊಳ್ಳಬೇಕು. ಯಾವುದೇ ಕಾರಣಕ್ಕೂ ಜ್ವರದ ಬಗ್ಗೆ ನಿರ್ಲಕ್ಷ್ಯತನ ಮಾಡಬಾರದು ಮತ್ತು ಸ್ಥಳೀಯ ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ, ಆರೋಗ್ಯ ನಿರೀಕ್ಷಣಾಧಿಕಾರಿ ಹಾಗೂ ಆಶಾ ಕಾರ್ಯಕರ್ತೆಯರನ್ನು ಸಂಪರ್ಕಿಸಬೇಕು ಎಂದರು.



ಸಾರ್ವಜನಿಕರು ತಮ್ಮ ತಮ್ಮ ಮನೆಗಳಲ್ಲಿ ನೀರು ಶೇಖರಿಸುವ ಡ್ರಮ್, ಬ್ಯಾರಲ್, ಸಿಮೆಂಟ್ ತೊಟ್ಟಿ, ಕಲ್ಲಿನದೋಣಿ ಇನ್ನಿತರ ನೀರು ಸಂಗ್ರಹ ಪರಿಕರಗಳನ್ನು ವಾರದಲ್ಲಿ 2 ಬಾರಿ ಸ್ವಚ್ಛವಾಗಿ ತೊಳೆದು, ಒಣಗಿಸಿ ಪುನಃ ನೀರು ತುಂಬಬೇಕು. ನೀರಿನ ಸಲಕರಣೆಗಳಿಗೆ ಭದ್ರವಾಗಿ ಮುಚ್ಚಳದಿಂದ ಮುಚ್ಚಬೇಕು, ಸಾಯಂಕಾಲದ ವೇಳೆ ಬೇವಿನ ಸೊಪ್ಪಿನ ಹೊಗೆ ಹಾಕಬೇಕು. ಸೊಳ್ಳೆ ಕಡಿತದಿಂದ ದೂರವಿರಲು ವೈಯಕ್ತಿಕ ರಕ್ಷಣೆ ಮಾಡಿಕೊಳ್ಳಬೇಕು. ''ಮಲೇರಿಯಾ ನಿಯಂತ್ರಣ ಪ್ರತಿಯೊಬ್ಬರ ಜವಾಬ್ದಾರಿ'' ಮನೆಯ ಸುತ್ತ ಮುತ್ತ ನೀರು ನಿಲ್ಲದಂತೆ ಎಚ್ಚರಿಕೆ ವಹಿಸಬೇಕು. ಮನೆಯಲ್ಲಿ ನೀರು ಶೇಖರಣ ತೊಟ್ಟಿಗಳಲ್ಲಿ ಸೊಳ್ಳೆಗಳು ಮೊಟ್ಟೆಗಳನ್ನಿಟ್ಟು ಸಂತಾನಭಿವೃದ್ಧಿ ಮಾಡುತ್ತವೆ. ಲಾರ್ವಾ ನಾಶಕ್ಕಾಗಿ ಸ್ವಚ್ಛಗೊಳಿಸುತ್ತಿರಬೇಕು. ಆರೋಗ್ಯ ಇಲಾಖೆ ಸಿಬ್ಬಂದಿಗಳು ಮತ್ತು ಆಶಾ ಕಾರ್ಯಕರ್ತೆಯರು ಭೇಟಿ ನೀಡಿದಾಗ ಸಹಕರಿಸಿ, ರಕ್ತಲೇಪನ ನೀಡಿ, ಮಲೇರಿಯಾ ಮುಕ್ತ ಕೊಪ್ಪಳ ಜಿಲ್ಲೆಯನ್ನಾಗಿ ಮಾಡಲು ಕೈಜೋಡಿಸಲು ತಿಳಿಸಿದರು.

ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಾದ ಗೀತಾ ಅವರು ಗ್ರಾಮದ ಸ್ವಚ್ಛತೆ, ಬಾಲ್ಯ ವಿವಾಹ ನಿಷೇಧ, ನೀರಿನ ಹಿತ-ಮಿತ ಬಳಕೆ ಹಾಗೂ ಹಸಿಕಸ-ಒಣಕಸ ವಿಂಗಡಣೆ ಮತ್ತು ವಿಲೇವಾರಿ ಕುರಿತು ವಿವರವಾಗಿ ಮಾತನಾಡಿದರು. ''ರೋಗಮುಕ್ತ ಗ್ರಾಮ''ವನ್ನಾಗಿ ಮಾಡಲು ತಿಳಿಸಿದರು.

ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿ ಗಂಗಮ್ಮ ಅವರು, ಬೇಸಿಗೆ ಸಮಯದಲ್ಲಿ ಸಾರ್ವಜನಿಕರು ಆರೋಗ್ಯ ರಕ್ಷಣೆ ಕುರಿತು ಅನುಸರಿಸಬೇಕಾದ ಮುಂಜಾಗ್ರತಾ ಕ್ರಮಗಳು, ರಾಷ್ಟ್ರೀಯ ಹಾವು ಕಡಿತ ನಿಯಂತ್ರಣ, ರಾಷ್ಟ್ರೀಯ ರೇಬೀಸ್ ನಿಯಂತ್ರಣ, ಕ್ಷಯರೋಗ ನಿರ್ಮೂಲನೆ, ಕುಷ್ಠರೋಗ ನಿರ್ಮೂಲನೆ, ಅಸಾಂಕ್ರಾಮಿಕ ರೋಗಗಳ ನಿಯಂತ್ರಣ ಕುರಿತು ಮಾತನಾಡಿದರು. ಮಲೇರಿಯಾ ನಿಯಂತ್ರಣದ ಕುರಿತು ಸಾರ್ವಜನಿಕರಿಗೆ ಕರಪತ್ರ ವಿತರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಮಾಜಿ ಗ್ರಾಮ ಪಂಚಾಯತಿ ಅಧ್ಯಕ್ಷರಾದ ತಿಪ್ಪವ್ವ ಶಿವಪ್ಪ ನಾಯಕ್, ತಾಲೂಕಾ ಮಲೇರಿಯಾ ತಾಂತ್ರಿಕ ಮೇಲ್ವಿಚಾರಕರಾದ ಪ್ರಮೋದ, ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿಗಳಾದ ಮಲ್ಲಮ್ಮ, ಆರೋಗ್ಯ ನಿರೀಕ್ಷಣಾಧಿಕಾರಿಗಳಾದ ರಮೇಶ್, ಆಶಾ ಕಾರ್ಯಕರ್ತೆಯರಾದ ಮಂಜುಳಾ ಹಾಗೂ ಅನ್ನಪೂರ್ಣ ಸೇರಿದಂತೆ ಗ್ರಾಮದ ನಾಗರಿಕರು, ಮುಖಂಡರು ಮತ್ತು ಆರೋಗ್ಯ ಇಲಾಖೆಯ ಸಿಬ್ಬಂದಿಗಳು ಉಪಸ್ಥಿತರಿದ್ದರು.

ಕುಡಿಯುವ ನೀರು ಕುರಿತು ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ಜರುಗಿದ ಕೊಪ್ಪಳ ತಾಲೂಕ ಮಟ್ಟದ ಸಭೆ
ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯೆ ಆಗದಂತೆ ಕ್ರಮವಹಿಸಿ: ಟಿ.ಕೃಷ್ಣಮೂರ್ತಿ

ಕೊಪ್ಪಳ ಏ.30-

ಬೇಸಿಗೆ ಪ್ರಾರಂಭವಾಗಿರುವದರಿಂದ ಗ್ರಾಮೀಣ ಭಾಗ ಮತ್ತು ನಗರ ಪ್ರದೇಶಗಳಲ್ಲಿ ಕುಡಿಯುವ ನೀರು ಸಮಸ್ಯೆ ಆಗದಂತೆ ಮುಂಜಾಗ್ರತ ಕ್ರಮವಹಿಸಬೇಕೆಂದು ಕೊಪ್ಪಳ ತಾಲೂಕ ನೋಡಲ್ ಅಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತಿ ಉಪಕಾರ್ಯದರ್ಶಿಗಳಾದ ಟಿ.ಕೃಷ್ಣಮೂರ್ತಿ ಸೂಚಿಸಿದರು.



ಕೊಪ್ಪಳ ತಾಲೂಕ ಪಂಚಾಯತಿ ಕೊಪ್ಪಳ ಸಭಾಂಗಣದಲ್ಲಿ ಮಂಗಳವಾರ ಕುಡಿಯುವ ನೀರು ಕುರಿತು ಜರುಗಿದ ಕೊಪ್ಪಳ ತಾಲೂಕ ಮಟ್ಟದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಮುಂಬರುವ ದಿನಗಳಲ್ಲಿ 36 ಗ್ರಾಮಗಳನ್ನು ಕುಡಿಯುವ ನೀರಿನ ಸಮಸ್ಯಾತ್ಮಕ ಗ್ರಾಮಗಳೆಂದು ಗುರುತಿಸಲಾಗಿದ್ದು, ಅವುಗಳ ಪೈಕಿ ಈಗಾಗಲೇ 12 ಗ್ರಾಮಗಳಲ್ಲಿ ಕುಡಿಯುವ ನೀರಿನ ಅಭಾವ ಉಂಟಾಗಿದ್ದರಿಂದ 12 ಖಾಸಗಿ ಬೋರ್ ವೆಲ್‌ಗಳನ್ನು ಬಾಡಿಗೆ ರೂಪದಲ್ಲಿ ಪಡೆಯಲಾಗಿದೆ. ಮುಂದಿನ ದಿನಗಳಲ್ಲಿ ಸಮಸ್ಯಾತ್ಮಕ ಗ್ರಾಮಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾಗದಂತೆ ಖಾಸಗಿ ಬೋರ್ ವೆಲ್‌ಗಳನ್ನು ಗುರುತಿಸಿ ಇಟ್ಟುಕೊಳ್ಳುವಂತೆ ಆಯಾ ಎಲ್ಲಾ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಹಾಗೂ ಶಾಖಾಧಿಕಾರಿಗಳು ಕ್ರಮ ಕೈಗೊಳ್ಳಬೇಕು ಎಂದರು.

ತಾಲೂಕಿನ ವ್ಯಾಪ್ತಿಯಲ್ಲಿ ಸಾರ್ವಜನಿಕರಿಂದ ಕುಡಿಯುವ ನೀರಿನ ಕುಂದು ಕೊರತೆಗಳನ್ನು ಸ್ವೀಕರಿಸಿ ಬಗೆಹರಿಸಲು ತಾಲೂಕ ಪಂಚಾಯತಿಯ ಸಹಾಯವಾಣಿ ಸಂ.9620410509, 9902315311 ಹಾಗೂ ತಹಶೀಲ್ದಾರರ ಕಾರ್ಯಾಲಯ ಸಹಾಯವಾಣಿ ಸಂ.7483942249 ಸ್ಥಾಪಿಸಲಾಗಿದ್ದು ಇವುಗಳ ಬಗ್ಗೆ ಗ್ರಾಮ ಮತ್ತು ನಗರ ಪ್ರದೇಶದಲ್ಲಿ ಮಾಹಿತಿ ತಲುಪಿಸಲು ಕ್ರಮವಹಿಸುವಂತೆ ಸೂಚಿಸಿದರು.

ಬೇಸಿಗೆ ತಾಪಮಾನ ಹೆಚ್ಚಾಗಿರುವದರಿಂದ ಗ್ರಾಮೀಣ ಹಾಗು ನಗರ ಪ್ರದೇಶದಲ್ಲಿ ಕುಡಿಯುವ ನೀರಿನ ಸಮಸ್ಯೆ ಉಂಟಾದಲ್ಲಿ ಸಂಬಂಧಿಸಿದ ಅಧಿಕಾರಿಗಳು ತಕ್ಷಣವೇ ಸ್ಪಂದಿಸಿ ಸಮಸ್ಯೆಯನ್ನು ಬಗೆಹರಿಸಬೇಕು. ನೀರಿನ ಮೂಲಗಳನ್ನು ಪರೀಕ್ಷಿಸುವದು ಮತ್ತು ನೀರಿನ ಸಂಗ್ರಹಾರಗಳನ್ನು ಕಾಲ ಕಾಲಕ್ಕೆ ಸ್ವಚ್ಛಗೊಳಿಸುವದು ಅಗತ್ಯ ಜಿಪಿಎಸ್ ಫೋಟೊ ದಾಖಲಾತಿ ನಿರ್ವಹಿಸತಕ್ಕದ್ದು ಮತ್ತು ಗ್ರಾಮದಲ್ಲಿರುವ ಜಾನುವಾರು ತೊಟ್ಟಿಗಳನ್ನು ಸ್ವಚ್ಛಗೊಳಿಸಿ ಅವುಗಳಿಗೆ ಕುಡಿಯುವ ನೀರು ಭರ್ತಿ ಮಾಡಿದಲ್ಲಿ ಜಾನುವಾರುಗಳಿಗೆ ಅನುಕೂಲವಾಗುತ್ತದೆ ಎಂದರು.

ಯಾವುದೇ ರೀತಿಯಾಗಿ ಪೈಪ್‌ಲೈನ್ ಒಡೆದು ಕಲುಷಿತ ನೀರು ಸರಬರಾಜು ಆಗದಂತೆ ಕೂಡಲೇ ನಗರಸಭೆ, ಪಟ್ಟಣ ಪಂಚಾಯತಿ ಅಧಿಕಾರಿಗಳು ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಎಚ್ಚರವಹಿಸಬೇಕು. ಗ್ರಾಮ ಪಂಚಾಯತಿ ಹಂತದಲ್ಲಿ ಟಾಸ್ಕಫೋರ್ಸ ಸಭೆ ಜರುಗಿಸಲು ಇದೇ ಸಂದರ್ಭದಲ್ಲಿ ಪಂಚಾಯತ ಅಭಿವೃದ್ಧಿ ಅಧಿಕಾರಿಗಳಿಗೆ ಸೂಚಿಸಿದರು.

ಸಭೆಯಲ್ಲಿ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ನಗರಸಭೆಯ ಪೌರಾಯುಕ್ತ ಮಂಜುನಾಥ ಗುಂಡೂರು, ತಹಶೀಲ್ದಾರ ಬಸವರಾಜ ತೆನ್ನಳ್ಳಿ, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರ ಹೊನ್ನಪ್ಪ, ಪಂಚಾಯತ್ ರಾಜ್ ಸಹಾಯಕ ನಿರ್ದೇಶಕ ಮಹೇಶ್ ಎಚ್., ತಾಲೂಕ ಮಟ್ಟದ ಅಧಿಕಾರಿಗಳು, ಎಲ್ಲಾ ಗ್ರಾಮ ಪಂಚಾಯತಿ ಆಡಳಿತಾಧಿಕಾರಿಗಳು, ಪಂಚಾಯತ ಅಭಿವೃದ್ಧಿ ಅಧಿಕಾರಿಗಳು, ಗ್ರಾಮೀಣ ಕುಡಿಯುವ ಮತ್ತು ನೈರ್ಮಲ್ಯ ಇಲಾಖೆಯ ಶಾಖಾಧಿಕಾರಿಗಳು, ತಾಲೂಕ ಪಂಚಾಯತಿ ಸಿಬ್ಬಂದಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

ಅಕ್ರಮ ಮಣ್ಣು ಗಣಿಗಾರಿಕೆ ವಿರುದ್ಧ ಪ್ರತಿಭಟನೆ : ತಹಶೀಲ್ದಾರ್‌ಗೆ ಮನವಿ



ಚಿಂಚೋಳಿ,ಏ.30-

ತಾಲೂಕಿನ ಶಾಧಿಪುರ ಗ್ರಾಮದ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಅಕ್ರಮ ಮಣ್ಣು ಗಣಿಗಾರಿಕೆ ಹಾಗೂ ದಶಕಗಳಿಂದ ಬಾಕಿ ಉಳಿದಿರುವ ಸರ್ಕಾರಿ ಜಮೀನು ಹಸ್ತಾಂತರ ಸೇರಿದಂತೆ ಹಲವು ಬೇಡಿಕೆಗಳನ್ನು ಈಡೇರಿಸುವಂತೆ ಆಗ್ರಹಿಸಿ ಕರ್ನಾಟಕ ರಕ್ಷಣಾ ವೇದಿಕೆ ಸ್ವಾಭಿಮಾನಿ ಸೇನೆ ನೇತೃತ್ವದಲ್ಲಿ ಪ್ರತಿಭಟನೆ ನಡೆಸಿ, ತಹಶೀಲ್ದಾರ್ ಅವರಿಗೆ ಮನವಿ ಸಲ್ಲಿಸಲಾಯಿತು.

ಶಾಧಿಪುರ ಗ್ರಾಮದ ಸರ್ವೆ ನಂ. 126/1 ಮತ್ತು 126/3ರಲ್ಲಿನ ಜಮೀನನ್ನು 2001ರಲ್ಲೇ ಸುಮಾರು 54 ರೈತ ಕುಟುಂಬಗಳಿಗೆ ಸರ್ಕಾರ ಮಂಜೂರು ಮಾಡಿದ್ದರೂ, ಕಳೆದ 24 ವರ್ಷಗಳಿಂದ ಸರ್ವೆ ಕಾರ್ಯ ಪೂರ್ಣಗೊಳ್ಳದೇ ಭೌತಿಕ ಸ್ವಾಧೀನ ನೀಡಲಾಗಿಲ್ಲ ಎಂದು ಪ್ರತಿಭಟನಾಕಾರರು ಆರೋಪಿಸಿದರು.

ಈ ಆಡಳಿತಾತ್ಮಕ ವಿಳಂಬವನ್ನು ದುರುಪಯೋಗಪಡಿಸಿಕೊಂಡು ಮಣ್ಣಿನ ಮಾಫಿಯಾ ಅಕ್ರಮ ಗಣಿಗಾರಿಕೆ ನಡೆಸಿ ಸರ್ಕಾರದ ಸಂಪತ್ತನ್ನು ಲೂಟಿ ಮಾಡುತ್ತಿದೆ ಎಂದು ದೂರಿದರು.

2001ರ ನಕ್ಷೆಯಂತೆ ತಕ್ಷಣ ಸರ್ವೆ ನಡೆಸಿ ಜಮೀನು ಹಸ್ತಾಂತರಿಸಬೇಕು, ಅಕ್ರಮ ಮಣ್ಣು ಸಾಗಾಣಿಕೆಯಲ್ಲಿ ತೊಡಗಿರುವ ಮಾತಾ ಮತ್ತು ಜೀವನ ಜ್ಯೋತಿ ಟ್ರಾನ್ಸ್ ಪೋರ್ಟ್ ಕಂಪನಿಗಳನ್ನು ನಿಷೇಧಿಸಬೇಕು ಹಾಗೂ ಸಹಕರಿಸುತ್ತಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

ಅಕ್ರಮ ಸಾಗಾಟಕ್ಕೆ ಬಳಸಲಾಗುತ್ತಿರುವ ಹಿಟಾಚಿ ಯಂತ್ರಗಳು ಹಾಗೂ ಲಾರಿಗಳನ್ನು ವಶಪಡಿಸಿಕೊಂಡು ಎಫ್‌ಐಆರ್ ದಾಖಲಿಸಬೇಕು. ತೆಲಂಗಾಣ ಗಡಿಭಾಗದಿಂದ ನಡೆಯುತ್ತಿರುವ ಅಕ್ರಮ ನುಸುಳುವಿಕೆಯನ್ನು ತಡೆಯಲು ಚೆಕ್‌ಪೋಸ್ಟ್ ಸ್ಥಾಪಿಸಬೇಕು ಎಂಬ ಬೇಡಿಕೆಯನ್ನೂ ರೈತರು ಮುಂದಿಟ್ಟರು.

ಕಳೆದ 14 ದಿನಗಳಿಂದ ಅಧಿಕಾರಿಗಳು ಸ್ಪಂದಿಸದ ಹಿನ್ನೆಲೆಯಲ್ಲಿ, ಬೇಡಿಕೆಗಳನ್ನು ಈಡೇರಿಸದಿದ್ದರೆ ಲೋಕಾಯುಕ್ತಕ್ಕೆ ದೂರು ನೀಡಲಾಗುವುದು ಎಂದು ಹೋರಾಟಗಾರರು ಎಚ್ಚರಿಸಿದರು.

ಈ ಸಂದರ್ಭದಲ್ಲಿ ಸಂಘಟನೆಯ ತಾಲೂಕ ಅಧ್ಯಕ್ಷ ಲಿಂಬಾಜಿ ಚೌಹಾಣ್, ಶಾಂತಪ್ಪ, ಪಾರ್ವತಮ್ಮ, ದೇವೀಬಾಯಿ, ಶಂಕರ್ ಪವಾರ್, ನರೇಶ್ ಜಾದವ್, ಮಾರುತಿ ಗಂಜಗಿರಿ, ಪ್ರೇಮ್ ರಾಠೋಡ್, ಹೇಮಿಬಾಯಿ, ರುಕ್ಮಿಣಿಬಾಯಿ, ಚಂದು ಸೇರಿದಂತೆ ನೂರಾರು ರೈತರು ಭಾಗವಹಿಸಿದ್ದರು.

ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ಜಾತ್ರಾ ಮಹೋತ್ಸವದಲ್ಲಿ
ಸಿ.ಸಿ.ಕ್ಯಾಮರಾಗಳನ್ನು ಅಳವಡಿಸಿ- ಡಾ. ಸುರೇಶ ಇಟ್ನಾಳ

ಕೊಪ್ಪಳ ಏ.30-

ಶ್ರೀ ಕ್ಷೇತ್ರ ಹುಲಿಗಿಯ ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ 2026ರ ವಾರ್ಷಿಕ ಜಾತ್ರಾ ಮಹೋತ್ಸವದ ನಿಮಿತ್ತ ರಥವನ್ನು ಪರಿಶೀಲಿಸಿ ಅರ್ಹತಾ ಪ್ರಮಾಣ ಪತ್ರ ನೀಡಬೇಕು ಮತ್ತು ಜಾತ್ರಾ ಅವಧಿಯಲ್ಲಿ ಸಿ.ಸಿ.ಕ್ಯಾಮರಾಗಳನ್ನು ಅಳವಡಿಸಲು ಅಗತ್ಯ ಕ್ರಮ ಕೈಗೊಳ್ಳುವಂತೆ ಕೊಪ್ಪಳ ಜಿಲ್ಲಾಧಿಕಾರಿಗಳಾದ ಡಾ. ಸುರೇಶ ಬಿ. ಇಟ್ನಾಳ ಅವರು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.



ಶ್ರೀ ಹುಲಿಗೆಮ್ಮ ದೇವಿ ದೇವಸ್ಥಾನದ ವಾರ್ಷಿಕ ಜಾತ್ರೆಯ ಪ್ರಯುಕ್ತ ಮೇ 11ರ ಸೋಮವಾರದಂದು ಮಹಾರಥೋತ್ಸವ ಜರುಗಲಿದ್ದು, ರಥೋತ್ಸವಕ್ಕಿಂತ ಮುಂಚಿತವಾಗಿ ರಥವನ್ನು ಕೊಪ್ಪಳ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳಿಂದ ಸಂಪೂರ್ಣವಾಗಿ ಪರಿಶೀಲಿಸಿ ಅರ್ಹತಾ ಪ್ರಮಾಣ ಪತ್ರವನ್ನು ನೀಡಬೇಕು. ಈ ಬಗ್ಗೆ ಕೊಪ್ಪಳ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರರು ಹಾಗೂ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳು ಸೂಕ್ತ ಕ್ರಮವಹಿಸಬೇಕೆಂದರು.

ಸಿ.ಸಿ.ಕ್ಯಾಮರಾಗಳನ್ನು ಅಳವಡಿಸಿ: ಜಾತ್ರಾ ಕಾಲದಲ್ಲಿ ದೇವಸ್ಥಾನ ಹಾಗೂ ಸುತ್ತಮುತ್ತಲಿನ ಪ್ರದೇಶದಲ್ಲಿ ಸಿ.ಸಿ.ಕ್ಯಾಮರಾಗಳನ್ನು ನದಿತೀರದ ಪ್ರದೇಶದಲ್ಲಿ, ಬಯಲು ಪ್ರದೇಶದಲ್ಲಿ, ದೇವಸ್ಥಾನದ ಮುಖ್ಯರಸ್ತೆ, ಭಕ್ತಾದಿಗಳು ಉಳಿದುಕೊಳ್ಳುವ ಜನಸಂದಣಿ ಪ್ರದೇಶದಲ್ಲಿ ನಿಗಾ ವಹಿಸಲು ಸಿ.ಸಿ.ಕ್ಯಾಮರಾಗಳನ್ನು ಅಳವಡಿಸಿ ಅಗತ್ಯ ಕ್ರಮ ವಹಿಸಲು ಜಿಲ್ಲಾ ಪೊಲೀಸ್ ಇಲಾಖೆ, ಮುನಿರಾಬಾದ್ ಪೊಲೀಸ್ ಠಾಣೆಯ ಆರಕ್ಷಕ ಉಪನಿರೀಕ್ಷಕರು ಮತ್ತು ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿಗಳಿಗೆ ಜಿಲ್ಲಾಧಿಕಾರಿಗಳು ಸೂಚನೆ ನೀಡಿದರು.

ಮೇ 5 ರಂದು ಕೊಪ್ಪಳದಲ್ಲಿ ವಾಕ್ ಇನ್ ಇಂಟರ್‌ವ್ಯೂವ್

ಕೊಪ್ಪಳ,ಏ.30-

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದ ವತಿಯಿಂದ ವಾಕ್ ಇನ್ ಇಂಟರ್‌ವ್ಯೂವನ್ನು ಮೇ 5 ರಂದು ಬೆಳಿಗ್ಗೆ 10 ರಿಂದ ಮಧ್ಯಾಹ್ನ 1.30 ರ ವರೆಗೆ ಜಿಲ್ಲಾಡಳಿತ ಭವನದಲ್ಲಿರುವ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರದಲ್ಲಿ ಆಯೋಜಿಸಲಾಗಿದೆ.

ಈ ವಾಕ್ ಇನ್ ಇಂಟರ್‌ವ್ಯೂವ್‌ನಲ್ಲಿ ಧಾರವಾಡದ ಟಾಟಾ ಮೋಟಾರ್ಸ್ ಸಂಸ್ಥೆಯು ತಮ್ಮಲ್ಲಿನ ಖಾಲಿ ಇರುವ ಹುದ್ದೆಗಳಿಗೆ ನೇರ ಸಂದರ್ಶನ ನಡೆಸಲಿದ್ದಾರೆ. ಐ.ಟಿ.ಐ- ಆಲ್ ಟ್ರೇಡ್ ಅಥವಾ ಎಸ್.ಎಸ್.ಎಲ್.ಸಿ, ಪಿ.ಯು.ಸಿ., ಡಿಪ್ಲೊಮಾ ಅಥವಾ ಇತರೆ ಪದವಿ ಅಭ್ಯರ್ಥಿಗಳು ಈ ನೇರ ಸಂದರ್ಶನಕ್ಕೆ ಹಾಜರಾಗಬಹುದು. ಆಸಕ್ತ 18 ರಿಂದ 25 ವರ್ಷದೊಳಗಿನ ನಿರುದ್ಯೋಗಿ ಪುರಷರು ದೃಢೀಕರಿಸಲಾದ ತಮ್ಮ ವಿದ್ಯಾರ್ಹತೆಯ ಎಲ್ಲ ಪ್ರಮಾಣ ಪತ್ರಗಳ 2 ಪ್ರತಿಗಳೊಂದಿಗೆ ಮತ್ತು ಆಧಾರ ಕಾರ್ಡಿನ ಪ್ರತಿ, ಬಯೋಡಾಟಾ (ರೆಜುಮ್) ಹಾಗೂ ಪಾಸ್ ಪೋರ್ಟ್ ಅಳತೆಯ 2 ಭಾವಚಿತ್ರಗಳೊಂದಿಗೆ ಈ ವಾಕ್ ಇನ್ ಇಂಟರ್‌ವ್ಯೂವನಲ್ಲಿ ಭಾಗವಹಿಸಿ, ಉದ್ಯೋಗದ ನೆರವನ್ನು ಪಡೆಯಬಹುದಾಗಿದೆ.

ಉದ್ಯೋಕಾಂಕ್ಷಿಗಳು ://./ 18 ಮೂಲಕ ರಿಜಿಸ್ಟರ್ ಮಾಡಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಜಿಲ್ಲಾ ಆಡಳಿತ ಭವನ, ಮೊದಲನೇ ಮಹಡಿ, ಕೊಪ್ಪಳ ಇವರನ್ನು ಸಂಪರ್ಕಿಸುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ನಿಮ್ಮೂರು ಸುದ್ದಿ

ಸಂಪಾದಕೀಯ

ಬಿಜೆಪಿ ಬೆವರಿಳಿಸಿದ ಬಂಗಾಳದ ನವದುರ್ಗೆಯರು



ಕೇಂದ್ರ ಸರ್ಕಾರದ ವಿರುದ್ಧ, ದುಷ್ಟ-ಭ್ರಷ್ಟ ಬಿಜೆಪಿ ನಾಯಕರ ವಿರುದ್ಧ ತಕ್ಷಣ ಬೀದಿಗಿಳಿಯುವ ದೀದಿ, ಜನರೊಂದಿಗೆ ಜನರಾಗಿ ಬೆರೆತುಹೋಗುವ ಪರಿ ಅನನ್ಯವಾಗಿದೆ. ಅದಕ್ಕಿಂತಲೂ ಮುಖ್ಯವಾಗಿ, ಮಮತಾ ಬ್ಯಾನರ್ಜಿ ಮುಂಚೂಣಿಗೆ ತಂದಿರುವ ಮಹಿಳೆಯರಾದ, ಮಹುವಾ ಮೊಯಿತ್ರಾ ಮತ್ತು ಸಯೋನಿ ಘೋಷ್ ಎಂಬ ಗಟ್ಟಿ ವ್ಯಕ್ತಿತ್ವಗಳು, ಅವರು ಈ ಚುನಾವಣೆಯಲ್ಲಿ ನಿರ್ವಹಿಸಿದ ಪಾತ್ರ ಅಮೋಘವಾಗಿದೆ.

ಈ ಬಾರಿಯ ಪಶ್ಚಿಮ ಬಂಗಾಳದ ಚುನಾವಣೆಯಲ್ಲಿ ಎಸ್‌ಐಆರ್ ಹೆಚ್ಚು ಸದ್ದು ಮಾಡಿತು. ಅಂತಿಮ ಮತದಾರರ ಪಟ್ಟಿಯಿಂದ ಅಧಿಕೃತವಾಗಿಯೇ 63 ಲಕ್ಷ ಮತದಾರರ ಹೆಸರುಗಳನ್ನು ತೆಗೆದುಹಾಕಲಾಯಿತು. ಅದರಲ್ಲೂ ಅತಿ ಹೆಚ್ಚು ಮುಸ್ಲಿಂ ಮತದಾರರು ಇರುವ ಪ್ರದೇಶಗಳಲ್ಲಿ, ಮುಸ್ಲಿಮರು ಮತದಾನದಿಂದ ಹೊರಗುಳಿಯುವಂತೆ ನೋಡಿಕೊಳ್ಳಲಾಯಿತು. ಕೇಂದ್ರದಲ್ಲಿ ಅಧಿಕಾರದಲ್ಲಿರುವ ಮೋದಿ-ಶಾ ಅವರು ಹೇಳಿದಂತೆ ಚುನಾವಣಾ ಆಯೋಗ ಕೇಳಿದ್ದು, ಪ್ರಜಾಸತ್ತಾತ್ಮಕ ವ್ಯವಸ್ಥೆಯನ್ನೇ ಬುಡಮೇಲು ಮಾಡಿತು. ಸಾಂವಿಧಾನಿಕ ಸ್ವಾಯತ್ತ ಸಂಸ್ಥೆಯಾದ ಚುನಾವಣಾ ಆಯೋಗಕ್ಕೆ ಶಾಶ್ವತವಾಗಿ ಕಳಂಕ ಮೆತ್ತಿಕೊಂಡಿತು.

ಕೇಂದ್ರದ ಅಧಿಕಾರ, ಹಣಬಲ ಮತ್ತು ಧಾರ್ಮಿಕ ಧ್ರುವೀಕರಣವೆಂಬ ಅಸ್ತ್ರಗಳನ್ನು ಯಥೇಚ್ಛವಾಗಿ ಬಳಸುತ್ತಿರುವ ಮೋದಿ-ಶಾ, ಈ ಬಾರಿ ಪಶ್ಚಿಮ ಬಂಗಾಳವನ್ನು ಗೆಲ್ಲಲೇಬೇಕೆಂಬ ಹಠಕ್ಕೆ ಬಿದ್ದಿದ್ದಾರೆ. ಅದರಲ್ಲೂ ಬಂಗಾಳದ ದುರ್ಗೆಯಂತಿರುವ ಮಮತಾ ಬ್ಯಾನರ್ಜಿಯವರನ್ನು ಸೋಲಿಸಿ, ಅವರ ರಾಜಕೀಯ ಬದುಕನ್ನು ಕೊನೆಗೊಳಿಸಬೇಕೆಂಬ ತೀರ್ಮಾನಕ್ಕೆ ಬಂದಿದ್ದಾರೆ. ಅದಕ್ಕಾಗಿ ಪಶ್ಚಿಮ ಬಂಗಾಳವನ್ನು ಕದನಕಣವನ್ನಾಗಿಸಿದ್ದರು. ಅದು ಏಪ್ರಿಲ್ 28ರಂದು ನಡೆದ ಅಂತಿಮ ಹಂತದ ಮತದಾನದ ವೇಳೆಯಲ್ಲಿಯೂ ಸದ್ದು ಮಾಡಿತು.

ನಿನ್ನೆ ಮತಗಟ್ಟೆಯೊಂದರ ಬಳಿ ಬಂದ ಬಿಜೆಪಿ ಅಭ್ಯರ್ಥಿ ಸುವೇಂದು ಅಧಿಕಾರಿಯನ್ನು ಟಿಎಂಸಿ ಕಾರ್ಯಕರ್ತರು ಸುತ್ತುವರಿದು ಜೈ ಬಂಗಾಳ ಘೋಷಣೆ ಕೂಗಿದರು. ಚುನಾವಣಾ ಸಮಯದಲ್ಲಿ ಇಂತಹ ಘಟನೆಗಳು ಸರ್ವೇಸಾಮಾನ್ಯ. ಆದರೆ ಪಶ್ಚಿಮ ಬಂಗಾಳದ ಪರಿಸ್ಥಿತಿಯೇ ಬೇರೆ. ಸಣ್ಣ ಗಲಾಟೆಯೂ ವಿಕೋಪಕ್ಕೆ ತಿರುಗುತ್ತದೆ, ಹಿಂಸೆ-ರಕ್ತಪಾತಕ್ಕೆ ದಾರಿ ಮಾಡಿಕೊಡುತ್ತದೆ. ಅದನ್ನು ಕಾಯುತ್ತಿದ್ದವರಂತೆ ಸುವೇಂದು ಅಧಿಕಾರಿ, ಆ ತಕ್ಷಣವೇ ಗೃಹ ಸಚಿವ ಅಮಿತ್ ಶಾಗೆ ಫೋನಾಯಿಸಿದರು. ಮತಗಟ್ಟೆ ಬಳಿ ನನ್ನ ಮೇಲೆ ಗೂಂಡಾಗಳು ದಾಳಿ ಮಾಡಿದರು. ಅವರು ಮತದಾರರಲ್ಲ, ಮಮತಾ ಬ್ಯಾನರ್ಜಿ ಗೂಂಡಾಗಳು, ಅವರೆಲ್ಲರೂ ಹೊರಗಿನವರು ಎಂದು ಕೂಗಾಡಿದರು. ಅಂತಹ ಒಂದು ದೂರಿಗಾಗಿಯೇ ಕಾಯುತ್ತಿದ್ದ ಗೃಹ ಸಚಿವರು, ಆ ತಕ್ಷಣವೇ ದೇಶದ ಪೊಲೀಸ್ ವ್ಯವಸ್ಥೆ, ಎನ್‌ಐಎ, ಸೇನಾ ತುಕಡಿ ನಿಯೋಜಿಸಿದರು. ಅದಕ್ಕೆ ಕಾನೂನು ಸುವ್ಯವಸ್ಥೆ, ಭದ್ರತೆಯ ನೆಪ ಹೇಳಿದರು. ಈಗಾಗಲೇ ಎಸ್‌ಐಆರ್‌ನಿಂದ ಹೈರಾಣಾಗಿದ್ದ ಮತದಾರರಿಗೆ ಶಾಂತಿಯುತವಾಗಿ ಮತ ಚಲಾಯಿಸಲೂ ಆಗದಂತೆ ನೋಡಿಕೊಂಡರು.

ಇಷ್ಟಾದರೂ, ಪಶ್ಚಿಮ ಬಂಗಾಳದಲ್ಲಿ ಶೇ. 91.66ರಷ್ಟು ಮತದಾನವಾಗಿ ದಾಖಲೆ ಬರೆದಿದೆ. ತೃಣಮೂಲ ಕಾಂಗ್ರೆಸ್ ಅಧಿಕಾರಕ್ಕೆ ಬರಲಿದೆ ಎಂದು ಚುನಾವಣೋತ್ತರ ಸಮೀಕ್ಷೆಗಳು ಕೂಡ ಹೇಳುತ್ತಿವೆ. ಆದರೆ ಜನರ ನಡುವೆ ಆಡಳಿತ ವಿರೋಧಿ ಅಲೆ ಕೆಲಸ ಮಾಡುತ್ತಿದೆ ಎಂಬುದು ಸ್ವತಃ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿಯವರಿಗೂ ತಿಳಿದಿದೆ. ಊಹಾಪೋಹಗಳಿಗೆ ತೆರೆಎಳೆಯುವಂತೆ, ಇನ್ನೇನು ನಾಲ್ಕೈದು ದಿನಗಳಲ್ಲಿ ಫಲಿತಾಂಶವೂ ಹೊರಬರಲಿದೆ.

ಇಂತಹ ಸಂಕೀರ್ಣ ಸ್ಥಿತಿಯ ನಡುವೆಯೂ ಒಂದು ವಿಷಯವನ್ನು ಭಾರತೀಯ ರಾಜಕಾರಣ ಗಮನಿಸಲೇಬೇಕು. ಮಮತಾ ಬ್ಯಾನರ್ಜಿ ಅವರ ಟಿಎಂಸಿ, ಅಧಿಕಾರ ಉಳಿಸಿಕೊಳ್ಳಲು ನಡೆಸುತ್ತಿರುವ ಹೋರಾಟ ದೇಶದ ಗಮನ ಸೆಳೆದಿದೆ ಎಂಬುದನ್ನು ಒಪ್ಪಲೇಬೇಕು. ಏಕಾಂಗಿ ಮಹಿಳೆಯಾಗಿ ಕೇಂದ್ರ ಸರ್ಕಾರದ ಅಡೆ ತಡೆಗಳನ್ನು ಎದುರಿಸುತ್ತಿರುವ ರೀತಿ ವಿಶಿಷ್ಟವಾಗಿದೆ. ಆಕೆಯ ಸಿಡಿಲಬ್ಬರದ ಮಾತುಗಳಿಗೆ ಬಿಜೆಪಿ ನಾಯಕರ ಬಳಿ ಉತ್ತರವಿಲ್ಲದಾಗಿದೆ. ಬಂಗಾಳಿ ಜನ, ನೆಲ, ಭಾಷೆ, ಸಂಸ್ಕೃತಿ ಮತ್ತು ಸ್ವಾಭಿಮಾನದ ಪ್ರಶ್ನೆಯನ್ನು ಚುನಾವಣೆಯ ಮಹತ್ವದ ವಿಷಯವನ್ನಾಗಿಸಿದ್ದು ವಿಶೇಷವಾಗಿದೆ. ಅವರ ಜಾತ್ಯತೀತ ನಿಲುವು, ಬಹುತ್ವ ಭಾರತದ ಬದ್ಧತೆ ಪ್ರಶಂಸೆಗೆ ಪಾತ್ರವಾಗಿದೆ.

ಇಲ್ಲಿ ಮತ್ತೊಂದು ಮುಖ್ಯ ಸಂಗತಿ ಎಂದರೆ, ಕೇಂದ್ರ ಸರ್ಕಾರದ ವಿರುದ್ಧ, ದುಷ್ಟ-ಭ್ರಷ್ಟ ಬಿಜೆಪಿ ನಾಯಕರ ವಿರುದ್ಧ ತಕ್ಷಣ ಬೀದಿಗಿಳಿಯುವ ದೀದಿ, ಜನರೊಂದಿಗೆ ಜನರಾಗಿ ಬೆರೆತುಹೋಗುವ ಪರಿ ಅನನ್ಯವಾಗಿದೆ. ಅದಕ್ಕಿಂತಲೂ ಮುಖ್ಯವಾಗಿ, ಮಮತಾ ಬ್ಯಾನರ್ಜಿ ಮುಂಚೂಣಿಗೆ ತಂದಿರುವ ಮಹಿಳೆಯರಾದ, ಮಹುವಾ ಮೊಯಿತ್ರಾ ಮತ್ತು ಸಯೋನಿ ಘೋಷ್ ಎಂಬ ಗಟ್ಟಿ ವ್ಯಕ್ತಿತ್ವಗಳು, ಅವರು ಈ ಚುನಾವಣೆಯಲ್ಲಿ ನಿರ್ವಹಿಸಿದ ಪಾತ್ರ ಅಮೋಘವಾಗಿದೆ.

ಭಾರತೀಯ ಪುರುಷಪ್ರಧಾನ ರಾಜಕೀಯ ವ್ಯವಸ್ಥೆ ಮಹಿಳೆಯರನ್ನು ಎಲ್ಲಿ ಇಟ್ಟಿದೆ ಎಂದು ಪ್ರತ್ಯೇಕವಾಗಿ ಹೇಳಬೇಕಾಗಿಲ್ಲ. ಅದರಲ್ಲೂ ಮಹಿಳಾಪರ ಪೋಸು ಕೊಡುವ ಪ್ರಧಾನಿ ಮೋದಿಯವರ ಐಟಿ ಸೆಲ್, ವಿರೋಧ ಪಕ್ಷಗಳ ಮಹಿಳಾ ರಾಜಕಾರಣಿಗಳನ್ನು ಚಿತ್ರಿಸುವ ಬಗೆಯನ್ನು ಬಿಡಿಸಿ ಹೇಳಬೇಕಾಗಿಲ್ಲ. ಸೋನಿಯಾ, ಮಮತಾರನ್ನು ಅವರು ಮಹಿಳೆಯರೆಂದೇ ಪರಿಗಣಿಸುವುದಿಲ್ಲ. ಇಂತಹ ಪ್ರಕ್ಷುಬ್ಧ ಪರಿಸ್ಥಿತಿಯಲ್ಲಿಯೂ ಸಂಘಪರಿವಾರದ ಹುನ್ನಾರಗಳನ್ನು, ಬಿಜೆಪಿ ನಾಯಕರ ನಾಟಕವನ್ನು ಬಹಳ ಗಟ್ಟಿ ಧ್ವನಿಯಲ್ಲಿ ಬಯಲು ಮಾಡುತ್ತಿರುವವರು ಮಹುವಾ ಮೊಯಿತ್ರಾ ಮತ್ತು ಸಯೋನಿ ಘೋಷ್ ಎನ್ನುವುದರಲ್ಲಿ ಅನುಮಾನವೇ ಇಲ್ಲ.

ಮಹುವಾ ಮೊಯಿತ್ರಾ ಮತ್ತು ಸಯೋನಿ ಘೋಷ್ ಇವರನ್ನು ನೀವು ಇಷ್ಟಪಡಬಹುದು, ಪಡದಿರಬಹುದು. ದ್ವೇಷಿಸಬಹುದು, ದುಷ್ಟ ದುರ್ಗೆಯರೆನ್ನಬಹುದು. ಸೋಷಿಯಲ್ ಮೀಡಿಯಾದ ಟ್ರೋಲ್ ಎಂಬ ಅಸ್ತ್ರ ಪ್ರಯೋಗಿಸಿ ಮನಬಂದಂತೆ ಚಿತ್ರಿಸಬಹುದು, ಚಾರಿತ್ರ್ಯವಧೆ ಮಾಡಿ ಲೇವಡಿ ಮಾಡಬಹುದು. ಆದರೆ ಅವರನ್ನು ನಿರ್ಲಕ್ಷಿಸುವುದು ಸಾಧ್ಯವಿಲ್ಲ.

ಇದು ಕೇವಲ ರಾಜಕೀಯ ಅಧಿಕಾರದ ಪ್ರಶ್ನೆಯಲ್ಲ, ಅದಕ್ಕಿಂತಲೂ ಆಳವಾದ ವಿಚಾರ. ಅಧಿಕಾರಸ್ಥರನ್ನು ಎದುರಿಸಿ ನಿಲ್ಲುವ, ಅಂಜಿಕೆಯಿಲ್ಲದೆ ಪ್ರಶ್ನಿಸುವ ಮತ್ತು ತಮಗೆ ಅನಿಸಿದ್ದನ್ನು ನೇರವಾಗಿ ಪ್ರತಿಪಾದಿಸುವ ಈ ಛಲಗಾತಿಯರು ಇದ್ದಕ್ಕಿದ್ದಂತೆ ಎದ್ದು ನಿಂತವರಲ್ಲ. ಅವರ ಬುದ್ಧಿವಂತಿಕೆ, ದಿಟ್ಟತನ ಮತ್ತು ಆತ್ಮಸ್ಥೈರ್ಯ ಸಾಮಾನ್ಯದ್ದಲ್ಲ. ಇಂತಹ ವ್ಯಕ್ತಿತ್ವಗಳು ಸಾರ್ವಜನಿಕ ಚರ್ಚೆಯ ನಿಲುವು-ಧೋರಣೆಯನ್ನೇ ಬದಲಿಸಿಬಿಡುತ್ತವೆ.

ಸದ್ಯ ಪಶ್ಚಿಮ ಬಂಗಾಳದಲ್ಲಿ ಸತತವಾಗಿ ಮೂರು ಸಲ ಗೆದ್ದು, ನಾಲ್ಕನೇ ಬಾರಿಗೆ ಗೆಲ್ಲಲು ತೃಣಮೂಲ ಕಾಂಗ್ರೆಸ್ ತವಕಿಸುತ್ತಿದೆ. ಗೆಲುವು ಅಥವಾ ಸೋಲು ರಾಜಕೀಯ ಚಕ್ರದ ಭಾಗವಾಗಿ ಬರಬಹುದು ಮತ್ತು ಹೋಗಬಹುದು. ಆದರೆ ಈ ಮೂವರು ಮಹಿಳೆಯರು ಯಾವುದೇ ಮೀಸಲಾತಿಗಾಗಿ ಕಾಯದೆ, ಭಾರತೀಯ ರಾಜಕಾರಣದಲ್ಲಿ ತಮ್ಮದೇ ಆದ ಸ್ಥಾನವನ್ನು ಈಗಾಗಲೇ ನಿರ್ಮಿಸಿಕೊಂಡಿದ್ದಾರೆ. ಕೇವಲ ಮನೋಬಲ ಮತ್ತು ಗಟ್ಟಿಧ್ವನಿಯ ಮೂಲಕ ಮಹಿಳೆ ರಾಜಕೀಯದ ಕೇಂದ್ರಕ್ಕೆ ತಲುಪಬಹುದು ಮತ್ತು ಪ್ರಭಾವ ಬೀರಬಹುದು ಎಂಬುದನ್ನು ಇವರು ಸಾಬೀತುಪಡಿಸಿದ್ದಾರೆ. ನಿರಂತರ ಪ್ರತಿರೋಧದ ಶಕ್ತಿ ಇರುವುದು ಮಹಿಳೆಯರಲ್ಲಿ ಎಂಬುದನ್ನು ಸಾರುತ್ತಿದ್ದಾರೆ.

ಸೋಜಿಗದ ಸಂಗತಿ ಎಂದರೆ, ಸರಳತೆಯನ್ನು ಮೈಗೂಡಿಸಿಕೊಂಡ ಮಮತಾ ಬ್ಯಾನರ್ಜಿ ಎಂಬ ಹೆಣ್ಣುಮಗಳು ಮೂರು ಬಾರಿ ಮುಖ್ಯಮಂತ್ರಿಯಾದರೂ, ಪಶ್ಚಿಮ ಬಂಗಾಳದ ಮಹಿಳೆಯರ ಬದುಕು ಬದಲಾಗದಿರುವುದು.

ಪಶ್ಚಿಮ ಬಂಗಾಳದಲ್ಲಿ ಮಣ್ಣುಮುಕ್ಕಿದ್ದ 'ಎಕ್ಸಿಟ್ ಪೋಲ್'

ಬಂಗಾಳದ ನೆಲದಲ್ಲಿ ಸಮೀಕ್ಷಾ ಸಂಸ್ಥೆಗಳು ಮತದಾರರ ಒಲವನ್ನು, ವಿಶೇಷವಾಗಿ ಮಹಿಳಾ ಮತದಾರರ ಮೌನ ನಿಲುವನ್ನು ಗ್ರಹಿಸುವಲ್ಲಿ ಸಂಪೂರ್ಣವಾಗಿ ವಿಫಲವಾದವು. ಅಬ್ಬರದ ಪ್ರಚಾರ, ರಾಷ್ಟ್ರೀಯ ನಾಯಕರ ಸರಣಿ ಪ್ರಚಾರಗಳು ನೋಡಿ ಅವೆಲ್ಲವೂ ಬಿಜೆಪಿಯ ಪರ ಮತಗಳಾಗಿ ಪರಿವರ್ತನೆಯಾಗಲಿವೆ ಎಂದು ಸಮೀಕ್ಷೆಗಳು ತಪ್ಪಾಗಿ ವಿಶ್ಲೇಷಣೆ ಮಾಡಿದ್ದವು

ಚುನಾವಣೆಗಳು ಮುಗಿದ ಬೆನ್ನಲ್ಲೇ ಹೊರಬೀಳುವ ಚುನಾವಣೋತ್ತರ ಸಮೀಕ್ಷೆಗಳು (ಎಕ್ಸಿಟ್ ಪೋಲ್) ಮತದಾರರ ನಾಡಿಮಿಡಿತವನ್ನು ಅಳೆಯುವ ವೈಜ್ಞಾನಿಕ ಪ್ರಯತ್ನ ಎಂದು ಬಿಂಬಿಸಲಾಗುತ್ತದೆ. ಆದರೆ, ಈ ಸಮೀಕ್ಷೆಗಳು ನೀಡುವ ಅಂಕಿ-ಅಂಶಗಳೇ ಅಂತಿಮ ಸತ್ಯವಲ್ಲ ಎಂಬುದಕ್ಕೆ 2021ರ ಪಂಚರಾಜ್ಯ ವಿಧಾನಸಭಾ ಚುನಾವಣಾ ಫಲಿತಾಂಶವೇ ಅತ್ಯುತ್ತಮ ನಿದರ್ಶನ. ಅದರಲ್ಲೂ, ಇಡೀ ದೇಶದ ಗಮನ ಸೆಳೆದಿದ್ದ ಮತ್ತು ತೀವ್ರ ಕುತೂಹಲ ಕೆರಳಿಸಿದ್ದ ಪಶ್ಚಿಮ ಬಂಗಾಳದ ಕಣದಲ್ಲಿ, ಬಹುತೇಕ ಎಲ್ಲಾ ಪ್ರತಿಷ್ಠಿತ ಸಮೀಕ್ಷಾ ಸಂಸ್ಥೆಗಳ ಲೆಕ್ಕಾಚಾರಗಳು ವಾಸ್ತವದ ಕಠೋರ ಸತ್ಯದ ಮುಂದೆ ಸಂಪೂರ್ಣವಾಗಿ ಮಣ್ಣುಮುಕ್ಕಿದ್ದವು.

ಪಶ್ಚಿಮ ಬಂಗಾಳದಲ್ಲಿ ಆಡಳಿತರೂಢ ಮಮತಾ ಬ್ಯಾನರ್ಜಿ ನೇತೃತ್ವದ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಮತ್ತು ಪ್ರಬಲ ಪೈಪೋಟಿ ಒಡ್ಡಿದ್ದ ಬಿಜೆಪಿ ನಡುವೆ ತೀವ್ರ ಹಣಾಹಣಿ ಏರ್ಪಟ್ಟಿತ್ತು. ಸಮೀಕ್ಷಾ ಸಂಸ್ಥೆಗಳು ಈ ಬಿರುಸಿನ ಪ್ರಚಾರವನ್ನು ನೋಡಿ ಅತಂತ್ರ ವಿಧಾನಸಭೆಯ ಅಥವಾ ಬಿಜೆಪಿಯ ಭರ್ಜರಿ ಗೆಲುವಿನ ಭವಿಷ್ಯ ನುಡಿದಿದ್ದವು. ಜನ್ ಕಿ ಬಾತ್ ಸಂಸ್ಥೆ ಬಿಜೆಪಿಗೆ ಬರೋಬ್ಬರಿ 162 ರಿಂದ 185 ಸ್ಥಾನಗಳು ಒಲಿಯಲಿವೆ ಎಂದು ಊಹಿಸಿತ್ತು. ಪ್ರಖ್ಯಾತ ಆಕ್ಸಿಸ್ ಮೈ ಇಂಡಿಯಾ (134-160) ಹಾಗೂ ರಿಪಬ್ಲಿಕ್-ಸಿಎನ್‌ಎಕ್ಸ್ (138-148) ಸಂಸ್ಥೆಗಳು ಕೂಡ ಟಿಎಂಸಿಗಿಂತ ಬಿಜೆಪಿಯೇ ಅತಿ ದೊಡ್ಡ ಪಕ್ಷವಾಗಿ ಹೊರಹೊಮ್ಮಿ ಅಧಿಕಾರ ಹಿಡಿಯುವ ಸುಳಿವು ನೀಡಿದ್ದವು. ಸಿ-ವೋರ್ಟ ಮಾತ್ರ ಟಿಎಂಸಿಗೆ (152-164) ಅಲ್ಪ ಮುನ್ನಡೆಯನ್ನು ನೀಡಿತ್ತು.

ಆದರೆ, ಚುನಾವಣಾ ಆಯೋಗದ ಅಧಿಕೃತ ಅಂತಿಮ ಫಲಿತಾಂಶ ಹೊರಬಿದ್ದಾಗ ಸಮೀಕ್ಷೆಗಳ ಮರ್ಮ ಬಯಲಾಯಿತು. 292 ಕ್ಷೇತ್ರಗಳಿಗೆ ನಡೆದ ಚುನಾವಣೆಯಲ್ಲಿ ಟಿಎಂಸಿ ಬರೋಬ್ಬರಿ 213 ಸ್ಥಾನಗಳನ್ನು ಬಗಲಿಗೆ ಹಾಕಿಕೊಂಡು ಪ್ರಚಂಡ ಬಹುಮತದೊಂದಿಗೆ ಅಧಿಕಾರ ಉಳಿಸಿಕೊಂಡಿತು. ಸಮೀಕ್ಷೆಗಳಲ್ಲಿ ನೂರರ ಗಡಿ ದಾಟಿ, ಅಧಿಕಾರ ಹಿಡಿಯುವ ಕನಸು ಕಂಡಿದ್ದ ಬಿಜೆಪಿ ಕೇವಲ 77 ಸ್ಥಾನಗಳಿಗೆ ತೃಪ್ತಿಪಡಬೇಕಾಯಿತು. ಎಡರಂಗ ಮತ್ತು ಕಾಂಗ್ರೆಸ್ ಮೈತ್ರಿಕೂಟ ಶೂನ್ಯ ಸಂಪಾದನೆ ಮಾಡಿದರೆ, ಇತರೆ ಅಭ್ಯರ್ಥಿಗಳು 2 ಸ್ಥಾನ ಗೆದ್ದರು. ಸಮೀಕ್ಷೆಗಳು ನೀಡಿದ್ದ ಅಂಕಿ-ಅಂಶಗಳಿಗೂ, ನೈಜ ಫಲಿತಾಂಶಕ್ಕೂ ನಡುವೆ ಅಜಗಜಾಂತರ ವ್ಯತ್ಯಾಸ ಕಂಡುಬಂತು.

ಬಂಗಾಳದ ನೆಲದಲ್ಲಿ ಸಮೀಕ್ಷಾ ಸಂಸ್ಥೆಗಳು ಮತದಾರರ



ಒಲವನ್ನು, ವಿಶೇಷವಾಗಿ ಮಹಿಳಾ ಮತದಾರರ ಮೌನ ನಿಲುವನ್ನು ಗ್ರಹಿಸುವಲ್ಲಿ ಸಂಪೂರ್ಣವಾಗಿ ವಿಫಲವಾದವು. ಅಬ್ಬರದ ಪ್ರಚಾರ, ರಾಷ್ಟ್ರೀಯ ನಾಯಕರ ಸರಣಿ ಪ್ರಚಾರಗಳು ನೋಡಿ ಅವೆಲ್ಲವೂ ಬಿಜೆಪಿಯ ಪರ ಮತಗಳಾಗಿ ಪರಿವರ್ತನೆಯಾಗಲಿವೆ ಎಂದು ಸಮೀಕ್ಷೆಗಳು ತಪ್ಪಾಗಿ ವಿಶ್ಲೇಷಣೆ ಮಾಡಿದ್ದವು. ಆದರೆ ಬಂಗಾಳದ ಜನತೆ, ಈ ಎಲ್ಲಾ ಲೆಕ್ಕಾಚಾರಗಳನ್ನು ಮೀರಿ ಟಿಎಂಸಿಗೆ ನಿರೀಕ್ಷೆಗೂ ಮೀರಿದ ಬೆಂಬಲ ನೀಡುವ ಮೂಲಕ, ಎಕ್ಸಿಟ್ ಪೋಲ್ ಅಂದಾಜುಗಳನ್ನು ಕೇವಲ ಕಾಗದದ ಮೇಲಿನ ಅಂಕಿಗಳನ್ನಾಗಿ ಮಾತ್ರ ಉಳಿಸಿದರು. ಪಶ್ಚಿಮ ಬಂಗಾಳದ ತೀವ್ರ ವೈಫಲ್ಯಕ್ಕೆ ಹೋಲಿಸಿದರೆ, ದಕ್ಷಿಣದ ತಮಿಳುನಾಡು ಮತ್ತು ಕೇರಳದಲ್ಲಿ ಸಮೀಕ್ಷೆಗಳು ವಿಜೇತರ ಟ್ರೆಂಡ್ ಅನ್ನು ಒಂದು ಹಂತದಲ್ಲಿ ಸರಿಯಾಗಿ ಗುರುತಿಸಿದ್ದವು. ತಮಿಳುನಾಡಿನಲ್ಲಿ ಡಿಎಂಕೆ ಮೈತ್ರಿಕೂಟಕ್ಕೆ ಆಕ್ಸಿಸ್ ಮೈ ಇಂಡಿಯಾ 175-195 ಸ್ಥಾನಗಳನ್ನು ನೀಡಿದ್ದರೆ, ವಾಸ್ತವದಲ್ಲಿ ಅದು 159 ಸ್ಥಾನ ಗೆದ್ದು ಸುಲಭವಾಗಿ ಅಧಿಕಾರ ಹಿಡಿಯಿತು. ಎಐಎಡಿಎಂಕೆ ಮೈತ್ರಿಕೂಟವು 75 ಸ್ಥಾನ ಪಡೆಯಿತು. ಅದೇ ರೀತಿ ಕೇರಳದಲ್ಲಿ ಆಡಳಿತ ವಿರೋಧಿ ಅಲೆಯಿಲ್ಲದೆ ಎಲ್‌ಡಿಎಫ್ ಮರಳಿ ಬರುತ್ತದೆ ಎಂದು ಟುಡೇಸ್ ಚಾಣಕ್ಯ (93-111) ನಿಖರವಾಗಿ ಅಂದಾಜಿಸಿತ್ತು. ನೈಜ ಫಲಿತಾಂಶದಲ್ಲೂ ಎಲ್‌ಡಿಎಫ್ 99 ಹಾಗೂ ಯುಡಿಎಫ್ 41 ಸ್ಥಾನ ಪಡೆದುಕೊಂಡವು.

ಇನ್ನು, ಅಸ್ಸಾಂ ಹಾಗೂ ಪುದುಚೇರಿ ರಾಜ್ಯಗಳಲ್ಲಿ ಎಕ್ಸಿಟ್ ಪೋಲ್ ಲೆಕ್ಕಾಚಾರಗಳು ವಾಸ್ತವ ಫಲಿತಾಂಶಕ್ಕೆ ಒಂಚೂರು ಹತ್ತಿರವಾಗಿದ್ದವು. ಅಸ್ಸಾಂನಲ್ಲಿ ಆಕ್ಸಿಸ್ ಮೈ ಇಂಡಿಯಾ ಎನ್‌ಡಿಎ ಮೈತ್ರಿಕೂಟಕ್ಕೆ 75 ರಿಂದ 85 ಸ್ಥಾನಗಳು ಬರಲಿವೆ ಎಂದು ಅಂದಾಜಿಸಿತ್ತು. ಅದರಂತೆ ಎನ್‌ಡಿಎ 75 ಸ್ಥಾನಗಳನ್ನು ಪಡೆದುಕೊಂಡಿತು ಹಾಗೂ ಯುಪಿಎ 50 ಸ್ಥಾನ ಪಡೆಯಿತು. ಪುದುಚೇರಿಯಲ್ಲೂ ಎನ್‌ಡಿಎ ಅಧಿಕಾರ ಹಿಡಿಯಲಿದೆ ಎಂಬ ಬಹುತೇಕ ಎಲ್ಲಾ ಸಮೀಕ್ಷೆಗಳ ಭವಿಷ್ಯ (16-20 ಸ್ಥಾನಗಳ ಅಂದಾಜು) ಹತ್ತಿರಹತ್ತಿರ ನಿಜವಾಗಿತ್ತು; ವಾಸ್ತವ ದಲ್ಲಿ ಎನ್‌ಡಿಎ 16 ಸ್ಥಾನ ಗೆದ್ದರೆ, ಯುಪಿಎ 8 ಸ್ಥಾನ ಗಳಿಸಿತು.

ಇದೇ ಹಿನ್ನೆಲೆಯಲ್ಲಿ, ಏಪ್ರಿಲ್ 29ರಂದು ಮುಕ್ತಾಯಗೊಂಡಿರುವ ಪ್ರಸ್ತುತ 2026ರ ಪಂಚರಾಜ್ಯ ಚುನಾವಣೆಗಳ ಹೊಸ ಎಕ್ಸಿಟ್ ಪೋಲ್ ಅಂಕಿ-ಅಂಶಗಳು ಸಹ ಇದೇ ರೀತಿ ಸುಳ್ಳಾಗುವ ಸಾಧ್ಯತೆಯನ್ನು ತಳ್ಳಿಹಾಕುವಂತಿಲ್ಲ. ಈಗಿನ ಸಮೀಕ್ಷೆಗಳಲ್ಲೂ ಪಶ್ಚಿಮ ಬಂಗಾಳದ ಬಗ್ಗೆ ತೀವ್ರ ಗೊಂದಲಮಯ ಹಾಗೂ ಪರಸ್ಪರ ವಿರುದ್ಧವಾದ ವರದಿಗಳಿವೆ; ಪಿ-ಮಾರ್ಕ್ ಸಮೀಕ್ಷೆಯು ಬಿಜೆಪಿಗೆ (150-175) ಬಹುಮತ ನೀಡಿದ್ದರೆ, ಪೀಪಲ್ಸ್ ಪಲ್ಸ್ ಸಮೀಕ್ಷೆಯು ಟಿಎಂಸಿಗೆ (177-187) ಭಾರಿ ಮುನ್ನಡೆ ನೀಡಿದೆ.

ಮತ್ತೊಂದೆಡೆ, ತಮಿಳುನಾಡಿನಲ್ಲಿ ನಟ ವಿಜಯ್ ಅವರ ತಮಿಳು ವೆಟ್ರಿ ಕಳಗಂ () ಅತಿ ದೊಡ್ಡ ಪಕ್ಷವಾಗಿ (98-120 ಸ್ಥಾನ) ಹೊರಹೊಮ್ಮಲಿದೆ ಎಂದು ಆಕ್ಸಿಸ್ ಮೈ ಇಂಡಿಯಾ ಅಚ್ಚರಿಯ ಲೆಕ್ಕಾಚಾರ ನೀಡಿದೆ. 2021ರ ಹಿಂದಿನ ಅನುಭವವನ್ನು ಗಮನಿಸಿದಾಗ, ಮೇ 4ರಂದು ಪ್ರಕಟವಾಗಲಿರುವ ನೈಜ ಫಲಿತಾಂಶದ ಎದುರು ಸದ್ಯದ ಈ ಅಬ್ಬರದ ಸಮೀಕ್ಷೆಗಳು ವಾಸ್ತವದ ನೆಲೆಗಟ್ಟಿನಲ್ಲಿ ಸಂಪೂರ್ಣ ವಾಗಿ ತಲೆಕೆಳಗಾದರೂ ಆಶ್ಚರ್ಯಪಡಬೇಕಿಲ್ಲ.

ಈ ಚುನಾವಣೋತ್ತರ ಸಮೀಕ್ಷೆಗಳು ಕೇವಲ ಒಂದು ಸ್ಥೂಲ ಅಂದಾಜು ಮಾತ್ರ ಎಂಬುದನ್ನು ಮರೆಯಬಾರದು. ಅಸ್ಸಾಂ ಮತ್ತು ಪುದುಚೇರಿಯಲ್ಲಿ ಇವುಗಳ ಭವಿಷ್ಯ ಯಶಸ್ವಿಯಾದರೂ, ಪಶ್ಚಿಮ ಬಂಗಾಳದಂತಹ ಸಂಕೀರ್ಣ ಹಾಗೂ ಭಾವನಾತ್ಮಕ ರಾಜಕೀಯ ಸನ್ನಿವೇಶವಿರುವ ರಾಜ್ಯಗಳಲ್ಲಿ ಸಮೀಕ್ಷೆಗಳ ಲೆಕ್ಕಾಚಾರಗಳು ಸಂಪೂರ್ಣವಾಗಿ ಬುಡಮೇಲಾಗುವ ಸಾಧ್ಯತೆಯೇ ಹೆಚ್ಚು. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಎಕ್ಸಿಟ್ ಪೋಲ್‌ಗಳಿಗಿಂತ ಮತದಾರನ ರಹಸ್ಯ ಮೌನ ತೀರ್ಪೇ ಪರಮಸತ್ಯ ಎಂಬುದನ್ನು 2021ರ ಈ ಪಂಚರಾಜ್ಯ ಫಲಿತಾಂಶಗಳು ನಿರ್ವಿವಾದವಾಗಿ ದೃಢಪಡಿಸಿವೆ.

ಅಸ್ಸಾಂ ಅಖಾಡ ಕಾಂಗ್ರೆಸ್ - ಎಐಯುಡಿಎಫ್ ಜಗಳದಲ್ಲಿ ಕಮಲಕ್ಕೆ ಲಾಭವಾಗಲಿದೆಯೇ?

ಎಐಯುಡಿಎಫ್ ತನ್ನ ಅಲ್ಪಸಂಖ್ಯಾತ ನೆಲೆಯನ್ನು ಮತ್ತಷ್ಟು ಭದ್ರಪಡಿಸಿಕೊಳ್ಳಲು ಯತ್ನಿಸುತ್ತಿದ್ದರೆ, ಕಾಂಗ್ರೆಸ್ ತನ್ನ ಹಳೆಯ ವೈಭವವನ್ನು ಮರಳಿ ಪಡೆಯಲು ಹೆಣಗಾಡುತ್ತಿದೆ. ಈ ಇಬ್ಬರ ಜಗಳದಲ್ಲಿ ಬಿಜೆಪಿ ಮೂರನೆಯವನಾಗಿ ನಿರಾಳವಾಗಿ ಲಾಭ ಪಡೆಯುವ ನಿರೀಕ್ಷೆಯಲ್ಲಿದೆ. ರಾಜ್ಯದ ಭವಿಷ್ಯ ಅಂತಿಮವಾಗಿ ಪ್ರಜ್ಞಾವಂತ ಮತದಾರರ ತೀರ್ಮಾನದ ಮೇಲೆ ನಿಂತಿದೆ



ವಿಧಾನಸಭಾ ಚುನಾವಣೆ ಹತ್ತಿರವಾಗುತ್ತಿದ್ದಂತೆ ಅಸ್ಸಾಂ ರಾಜಕಾರಣದ ಕಾವು ದಿನದಿನವೂ ರಂಗೇರುತ್ತಿದ್ದು, ವಿರೋಧ ಪಕ್ಷಗಳ ಬಿರುಕು ಬಹಿರಂಗವಾಗಿದೆ. ಎಐಯುಡಿಎಫ್ ನಾಯಕ ಬದ್ರುದ್ದೀನ್ ಅಜ್ಮಲ್ ಅವರು ಕಾಂಗ್ರೆಸ್ ಮತ್ತು ಆಡಳಿತರೂಢ ಬಿಜೆಪಿ ಎರಡನ್ನೂ ಗುರಿಯಾಗಿಸಿಕೊಂಡು ಸಿಡಿಸಿರುವ ರಾಜಕೀಯ ಅಸ್ತ್ರ ಭಾರೀ ಚರ್ಚೆಗೆ ಗ್ರಾಸವಾಗಿದೆ. ತರುಣ್ ಗೋಗೋಯ್ ಮತ್ತು ರಾಹುಲ್ ಗಾಂಧಿ ಅವರ ವೈಫಲ್ಯವೇ ಅಸ್ಸಾಂ ಅನ್ನು ಬಿಜೆಪಿಗೆ ಒಪ್ಪಿಸಲು ಕಾರಣ ಹಾಗೂ ಹಿಮಂತ ಬಿಸ್ವಾ ಶರ್ಮಾ ಸರ್ಕಾರವನ್ನು ಕಿತ್ತೊಗೆಯಲೇಬೇಕು, ಆದರೆ ಅದಕ್ಕೆ ರಾಹುಲ್ ಗಾಂಧಿ ಪರ್ಯಾಯವಲ್ಲ ಎಂಬ ಅವರ ಹೇಳಿಕೆಯೇ ರಾಜ್ಯದ ತ್ರಿಕೋನ ರಾಜಕೀಯ ಸ್ಪರ್ಧೆಯ ನೈಜ ಚಿತ್ರಣವನ್ನು ಬಿಚ್ಚಿಟ್ಟಿದೆ.

ಅಸ್ಸಾಂನಲ್ಲಿ ಸತತ ಮೂರು ಅವಧಿಗೆ ಆಡಳಿತ ನಡೆಸಿದ್ದ ಕಾಂಗ್ರೆಸ್ ಪತನಕ್ಕೆ ಅದರ ನಾಯಕರ ಅಹಂಕಾರವೇ ಕಾರಣ ಎಂಬುದು ಅಜ್ಮಲ್ ಅವರ ಪ್ರಮುಖ ವಾದ. 2006ರಲ್ಲಿ ಅಜ್ಮಲ್ ಯಾರು? ಎಂದು ಅಂದಿನ ಸಿಎಂ ತರುಣ್ ಗೋಗೋಯ್ ವ್ಯಂಗ್ಯವಾಡಿದ್ದನ್ನು ಅವರು ಇಂದಿಗೂ ಮರೆತಿಲ್ಲ. ಅಲ್ಪಸಂಖ್ಯಾತರನ್ನು ಕೇವಲ ವೋಟ್ ಬ್ಯಾಂಕ್ ಆಗಿ ಬಳಸಿಕೊಂಡ ಕಾಂಗ್ರೆಸ್, ಅವರನ್ನು ರಾಜಕೀಯವಾಗಿ ಬೆಳೆಯಲು ಬಿಡಲಿಲ್ಲ. ಇದೇ ರಾಜಕೀಯ ಮೌಢ್ಯ ಮತ್ತು ರಾಹುಲ್ ಗಾಂಧಿವಯರ ದುರ್ಬಲ ನಾಯಕತ್ವವು 2016 ಮತ್ತು 2021ರ ಚುನಾವಣೆಗಳಲ್ಲಿ ಬಿಜೆಪಿಗೆ ಅಧಿಕಾರವನ್ನು ಉಡುಗೊರೆಯಾಗಿ ನೀಡಿತು ಎಂದು ಅವರು ನೇರವಾಗಿ ವಾಗ್ದಾಳಿ ನಡೆಸಿದ್ದಾರೆ.

ಕಾಂಗ್ರೆಸ್‌ಅನ್ನು ಟೀಕಿಸುವ ಭರದಲ್ಲಿ ಅಜ್ಮಲ್ ಅವರು ಬಿಜೆಪಿ ಬಗ್ಗೆ ಯಾವುದೇ ಮೃದು ಧೋರಣೆ ಹೊಂದಿಲ್ಲ. ಹಾಲಿ ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ನೇತೃತ್ವದ ಸರ್ಕಾರವನ್ನು ಅಧಿಕಾರದಿಂದ ಕೆಳಗಿಳಿಸುವುದು ಅನಿವಾರ್ಯ ಎಂದು ಹೇಳಿದ್ದಾರೆ. ಒತ್ತುವರಿ ತೆರವು ಕಾರ್ಯಾಚರಣೆಯ ನೆಪದಲ್ಲಿ ಮಿಯಾ ಮುಸ್ಲಿಮರನ್ನು (ಬಂಗಾಳಿ ಭಾಷಿಕ ವಲಸಿಗರು) ಗುರಿಯಾಗಿಸಿಕೊಂಡು ಕಿರುಕುಳ ನೀಡಲಾಗುತ್ತಿದೆ, ಹಾಗೂ ದ್ವೇಷದ ಭಾಷಣಗಳ ಮೂಲಕ ಸಮಾಜವನ್ನು ಒಡೆಯಲಾಗುತ್ತಿದೆ. ಅಸ್ಸಾಂನ ಅಸ್ಮಿತೆ ಉಳಿಸಲು ಈ ಸರ್ಕಾರವನ್ನು ಬೇರುಸಹಿತ ಕಿತ್ತೊಗೆಯಲೇಬೇಕು ಎಂದು ಅವರು ಕಟುವಾಗಿ ಎಚ್ಚರಿಸಿದ್ದಾರೆ.

ಅಜ್ಮಲ್ ಅವರ ಈ ಗಂಭೀರ ಆರೋಪಗಳಿಗೆ ಕಾಂಗ್ರೆಸ್ ಕೂಡ ಅಷ್ಟೇ ಪ್ರಬಲವಾಗಿ ತಿರುಗೇಟು ನೀಡುತ್ತಿದೆ. ಅಸ್ಸಾಂನಲ್ಲಿ ಹಿಮಂತ ಬಿಸ್ವಾ ಶರ್ಮಾ ಅವರಿಗೆ ಪರೋಕ್ಷವಾಗಿ ನೆರವಾಗುತ್ತಿರುವುದೇ ಬದ್ರುದ್ದೀನ್ ಅಜ್ಮಲ್, ಅವರು ವಾಸ್ತವದಲ್ಲಿ ಬಿಜೆಪಿಯ ಬಿ-ಟೀಮ್ ಎಂದು ಕೈ ನಾಯಕರು ಆರೋಪಿಸುತ್ತಾರೆ. ಅಜ್ಮಲ್ ಅವರ ವಿವಾದಾತ್ಮಕ ಮತ್ತು ಧ್ರುವೀಕರಣದ ಹೇಳಿಕೆಗಳೇ ಬಿಜೆಪಿಗೆ ಹಿಂದೂ ಮತಗಳನ್ನು ಒಗ್ಗೂಡಿಸಲು ಅಸ್ತ್ರವಾಗುತ್ತಿವೆ. ರಾಹುಲ್ ಗಾಂಧಿ ಅವರು ಸಂವಿಧಾನ ಮತ್ತು ಸೌಹಾರ್ದತೆಗಾಗಿ ಹೋರಾಡುತ್ತಿದ್ದು, ಅವರೇ ದೇಶಕ್ಕೆ ಮತ್ತು ರಾಜ್ಯಕ್ಕೆ ನೈಜ ಪರ್ಯಾಯ ನಾಯಕರು ಎಂದು ಕಾಂಗ್ರೆಸ್ ತನ್ನ ನಿಲುವನ್ನು ದೃಢವಾಗಿ ಸಮರ್ಥಿಸಿಕೊಳ್ಳುತ್ತಿದೆ.

ವಿರೋಧ ಪಕ್ಷಗಳ ನಡುವಿನ ಈ ಕಚ್ಚಾಟವು ಆಡಳಿತಾರೂಢ ಬಿಜೆಪಿಗೆ ಸಹಜವಾಗಿಯೇ ರಾಜಕೀಯ ವರದಾನವಾಗಿ ಪರಿಣಮಿಸಿದೆ. ಮುಖ್ಯಮಂತ್ರಿ ಹಿಮಂತ ಬಿಸ್ವಾ ಶರ್ಮಾ ಅವರು ಈ ಒಡಕನ್ನು ಬಹಳ ಚಾಣಾಕ್ಷತನದಿಂದ ಗಮನಿಸುತ್ತಿದ್ದಾರೆ. ಕಾಂಗ್ರೆಸ್ ಮತ್ತು ಎಐಯುಡಿಎಫ್ ಪರಸ್ಪರ ಕೆಸರೆರಚಾಟದಲ್ಲಿ ತೊಡಗಿರುವಾಗ, ಬಿಜೆಪಿ ತನ್ನ ಅಜೆಂಡಾವನ್ನು ಮುಂದಿಟ್ಟುಕೊಂಡು ಪ್ರಚಾರದಲ್ಲಿ ನಿರತವಾಗಿದೆ. ವಿರೋಧ ಪಕ್ಷಗಳ ನಡುವಿನ ನಾಯಕತ್ವದ ಗೊಂದಲವನ್ನು ತನ್ನತ್ತ ಸೆಳೆಯುವಲ್ಲಿ ಕಮಲ ಪಾಳೆಯ ಯಶಸ್ವಿಯಾಗುತ್ತಿರುವ ಲಕ್ಷಣಗಳು ಸ್ಪಷ್ಟವಾಗಿ ಗೋಚರಿಸುತ್ತಿವೆ.


ಅಸ್ಸಾಂ ವಿಧಾನಸಭೆಯ 126 ಸ್ಥಾನಗಳ ಪೈಕಿ ಶೇ. 30ರಿಂದ 35ರಷ್ಟು ಮುಸ್ಲಿಂ ಮತಗಳು ಅತ್ಯಂತ ನಿರ್ಣಾಯಕ ಪಾತ್ರ ವಹಿಸುತ್ತವೆ. ಸಾಂಪ್ರದಾಯಿಕವಾಗಿ ಈ ಮತಗಳು ಕಾಂಗ್ರೆಸ್ ಮತ್ತು ಎಐಯುಡಿಎಫ್ ನಡುವೆ ಹಂಚಿಹೋಗುತ್ತವೆ. ಅಜ್ಮಲ್ ಅವರು ಕಾಂಗ್ರೆಸ್ ಮತ್ತು ರಾಹುಲ್ ಗಾಂಧಿಯನ್ನು ತಿರಸ್ಕರಿಸುವಂತೆ ಅಲ್ಪಸಂಖ್ಯಾತರಿಗೆ ಕರೆ ನೀಡುತ್ತಿರುವುದು ನೇರವಾಗಿ ವಿಪಕ್ಷಗಳ ಮತಗಳ ವಿಭಜನೆಗೆ ಕಾರಣವಾಗಲಿದೆ. ಆಡಳಿತ ವಿರೋಧಿ ಅಲೆಯ ಲಾಭವನ್ನು ಒಗ್ಗೂಡಿಸುವ ಬದಲು, ವಿಪಕ್ಷಗಳು ಪ್ರತ್ಯೇಕವಾಗಿ ಸ್ಪರ್ಧಿಸಿದರೆ ಅದರ ಸಂಪೂರ್ಣ ಲಾಭವು ಚುನಾವಣಾ ಅಂಕಗಣಿತದಲ್ಲಿ ಬಿಜೆಪಿಯ ಪಾಲಾಗುವುದು ನಿಚ್ಚಳ.

ಅಸ್ಸಾಂನ ಪ್ರಸ್ತುತ ರಾಜಕೀಯವು ಯಾರು ಯಾರ ಬಿ-ಟೀಮ್ ಎಂಬ ಆರೋಪಗಳ ಸುತ್ತಲೇ ಗಿರಕಿ ಹೊಡೆಯುತ್ತಿದೆ. ತಮ್ಮ ಪಕ್ಷವನ್ನು ಟೀಕಿಸುವ ಕಾಂಗ್ರೆಸ್ ನಾಯಕರು ವಾಸ್ತವದಲ್ಲಿ ತಾವೇ ಬಿಜೆಪಿಯ ಎ-ಟೀಮ್ ಆಗಿ ಕಾರ್ಯನಿರ್ವಹಿಸುತ್ತಿದ್ದಾರೆ ಎಂದು ಅಜ್ಮಲ್ ದೂರುತ್ತಾರೆ. ಸರ್ಕಾರವನ್ನು ಸಮರ್ಥವಾಗಿ ಎದುರಿಸುವಲ್ಲಿ ವಿಫಲವಾಗಿರುವ ಕಾಂಗ್ರೆಸ್, ತನ್ನ ಅಸ್ತಿತ್ವದ ಉಳಿವಿಗಾಗಿ ಎಐಯುಡಿಎಫ್ ಮೇಲೆ ಗೂಬೆ ಕೂರಿಸುತ್ತಿದೆ ಎಂಬುದು ಅವರ ವಾದ. ಈ ಪರಸ್ಪರ ದೋಷಾರೋಪಣೆಯ ರಾಜಕಾರಣವು ಅಂತಿಮವಾಗಿ ಮತದಾರರನ್ನು, ವಿಶೇಷವಾಗಿ ಅಲ್ಪಸಂಖ್ಯಾತ ಮತ್ತು ಜಾತ್ಯತೀತ ಒಲವುಳ್ಳವರು ಯಾವ ಕಡೆ ವಾಲುತ್ತಾರೆ ಎಂಬುದು ಸದ್ಯದ ಕುತೂಹಲ ಸಂಗತಿ.

ಬದ್ರುದ್ದೀನ್ ಅಜ್ಮಲ್ ಅವರ ಹೇಳಿಕೆಗಳು ಅಸ್ಸಾಂನಲ್ಲಿ ಮುಂಬರುವ ಚುನಾವಣೆಯ ದಿಕ್ಸೂಚಿಯನ್ನು ಸ್ಪಷ್ಟಪಡಿಸಿವೆ. ಇದು ಕೇವಲ ಬಿಜೆಪಿ ಮತ್ತು ಕಾಂಗ್ರೆಸ್ ನಡುವಿನ ನೇರ ಹಣಾಹಣಿಯಾಗಿರದೆ, ತ್ರಿಕೋನ ಸ್ಪರ್ಧೆಯ ಕದನವಾಗಿ ಮಾರ್ಪಟ್ಟಿದೆ. ಎಐಯುಡಿಎಫ್ ತನ್ನ ಅಲ್ಪಸಂಖ್ಯಾತ ನೆಲೆಯನ್ನು ಮತ್ತಷ್ಟು ಭದ್ರಪಡಿಸಿಕೊಳ್ಳಲು ಯತ್ನಿಸುತ್ತಿದ್ದರೆ, ಕಾಂಗ್ರೆಸ್ ತನ್ನ ಹಳೆಯ ವೈಭವವನ್ನು ಮರಳಿ ಪಡೆಯಲು ಹೆಣಗಾಡುತ್ತಿದೆ. ಈ ಇಬ್ಬರ ಜಗಳದಲ್ಲಿ ಬಿಜೆಪಿ ಮೂರನೆಯವನಾಗಿ ನಿರಾಳವಾಗಿ ಲಾಭ ಪಡೆಯುವ ನಿರೀಕ್ಷೆಯಲ್ಲಿದೆ. ರಾಜ್ಯದ ಭವಿಷ್ಯ ಅಂತಿಮವಾಗಿ ಪ್ರಜ್ಞಾವಂತ ಮತದಾರರ ತೀರ್ಮಾನದ ಮೇಲೆ ನಿಂತಿದೆ.

ನವ ಜೋಡಿಗಳಿಗೆ ಶುಭ ಕೋರಿದ ಬಯ್ಯಾಪುರ

ಲಿಂಗಸುಗೂರು : ನಿಮ್ಮ ದಾಂಪತ್ಯ ಜೀವನ ಪ್ರೀತಿ,ವಿಸ್ವಾಸ, ನಂಬಿಕೆ ಮತ್ತು ನಗುವಿನಿಂದ ತುಂಬಿರಲಿ, ಸದಾ ಒಬ್ಬರನೊಬ್ಬರು ಅರಿತುಕೊಂಡು ಬದುಕಿ, ಜೀವನದ ಪ್ರತೀ ಹೆಜ್ಜೆಯಲ್ಲೂ ಜೊತೆಯಾಗಿ ಸಾಗಿ ಸುಂದರ ಬದುಕು ಕಟ್ಟಿಕೊಳ್ಳಿ ಎಂದು ಕಾಂಗ್ರೆಸ್ ಯುವ ಮುಖಂಡ ಅಭಿಷೇಕ ಗೌಡ ಪಾಟೀಲ್ ಬಯ್ಯಾಪುರ ನವ ಜೋಡಿಗಳಿಗೆ ಶುಭ ಹಾರೈಸಿದರು. ಸಮೀಪದ ಹುನಕುಂಟಿ ಗ್ರಾಮದ ಶ್ರೀ ಬಸವೇಶ್ವರ ನೂತನ ದೇವಾಲಯ ಲೋಕಾರ್ಪಣೆ ಕಳಸಾರೋಹಣ, ಸಾಮೂಹಿಕ ವಿವಾಹ ಮತ್ತು ಧರ್ಮಸಭೆಯಲ್ಲಿ ಭಾಗವಹಿಸಿ ಮಾತನಾಡಿದ ಅವರು, ಸತಿ ಪತಿಗಳು ಇಬ್ಬರು ಸುಖ -ದುಃಖಗಳಲ್ಲಿ ಜೊತೆಯಾಗಿ, ಕನಸುಗಳನ್ನು ಒಟ್ಟಿಗೆ ಕಟ್ಟುವ ಈ ಬಂಧ ಶಾಶ್ವತವಾಗಿರಲಿ,ನಿಮ್ಮ ಸಂಸಾರದಲ್ಲಿ ಸದಾ ಸಂತೋಷ,



ಸಮೃದ್ಧಿ, ಆರೋಗ್ಯ ತುಂಬಿರಲಿ ಎಂದರು. ಇದಕ್ಕೂ ಮೊದಲು ನೂತನ ದೇವಸ್ಥಾನಕ್ಕೆ ಭೇಟಿ ನೀಡಿ ಬಸವೇಶ್ವರರ ದರ್ಶನ ಪಡೆದು ದೇವರ ಕೃಪೆಗೆ ಪಾತ್ರರಾದರು. ಈ ಸಂದರ್ಭದಲ್ಲಿ ಗ್ರಾಮದ ಗುರು ಹಿರಿಯರು ಗ್ರಾಮದ ಕಾಂಗ್ರೆಸ್ ಕಾರ್ಯಕರ್ತರು ಇದ್ದರು.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR